
VOLUME: 16 | 13 MAY 2026 | ಬುಧವಾರ | RS: 2 | PAGE: 06 ISSUE: 95 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಬಾಲಿವುಡ್ ನಟಿ ಮೌನಿ ರಾಯ್ ಪತಿಯಿಂದಲೇ ಆರ್ಥಿಕವಾಗಿ ಮೋಸ ಹೋಗಿದ್ದಾರೆ. ಈ ಕಾರಣದಿಂದಲೇ ಅವರ ಸಂಬಂಧದ ನಡುವೆ ಬಿರುಕು ಮೂಡಿದೆ ಎಂದು ಹೇಳಲಾಗುತ್ತದೆ. ಬಾಲಿವುಡ್ ನಟಿ ಮೌನಿ ರಾಯ್ ಮತ್ತು ಉದ್ಯಮಿ ಸೂರಜ್ ನಂಬಿಯಾರ್ ದಾಂಪತ್ಯ ಜೀವನದಲ್ಲಿ ಬಿರುಕು ಮೂಡಿದೆ ಎಂಬ ಸುದ್ದಿ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ. ಇತ್ತ ಈ ಬಗ್ಗೆ ನಟಿ ಹೌದು ಎಂದು ಒಪ್ಪಿಕೊಂಡಿದ್ದರೆ.




BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669

RNI KARKAN2011/44806

prabhavaa.com

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ




ಸಂಪಾದಕ
ಗಂಡಸಿ ಸದಾನಂದಸ್ವಾಮಿ




ಹಂತ 3ರ ಪ್ರಾರಂಭದ ಕುರಿತು ಮಾತನಾಡಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಮತದಾರರು ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಮನವಿ ಮಾಡಿದ್ದಾರೆ. ಅರ್ಹ ನಾಗರಿಕರು ಮಾತ್ರ ಪಟ್ಟಿಯಲ್ಲಿ ಉಳಿಯುವಂತೆ ನೋಡಿಕೊಳ್ಳುವ ಮೂಲಕ ನಿಖರವಾದ ಮತದಾರರ ಪಟ್ಟಿಯನ್ನು ನಿರ್ವಹಿಸುವುದು ಮತ್ತು ಅನರ್ಹ ನಮೂದುಗಳನ್ನು ತಡೆಯುವುದು ಈ ಪ್ರಕ್ರಿಯೆಯ ಉದ್ದೇಶವಾಗಿದೆ ಎಂದು ಹೇಳಿದ್ದಾರೆ. ಈ ಹಂತದಲ್ಲಿ ಸುಮಾರು 36.73 ಕೋಟಿ ಮತದಾರರನ್ನು ತಲುಪುವ ಗುರಿಯನ್ನು ಹೊಂದಲಾಗಿದೆ. ಮರಣ ಹೊಂದಿದವರು, ಶಾಶ್ವತವಾಗಿ ವಲಸೆ ಹೋದವರು ಮತ್ತು ಒಂದಕ್ಕಿಂತ ಹೆಚ್ಚು ಕಡೆ ನಕಲಿ ಹೆಸರನ್ನು ಹೊಂದಿರುವವರನ್ನು ಪಟ್ಟಿಯಿಂದ ತೆಗೆದುಹಾಕಲಾಗುತ್ತದೆ.

# ರಾಜ್ಯದಲ್ಲೂ ಎಸ್‌ಐಆರ್ ಗದ್ದಲ

ನವದೆಹಲಿ: ಭಾರತ ಚುನಾವಣಾ ಆಯೋಗವು ಕರ್ನಾಟಕ ಸೇರಿದಂತೆ 16 ರಾಜ್ಯಗಳು ಮತ್ತು ಮೂರು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ನಡೆಸಲು ಆದೇಶ ಪ್ರಕಟಿಸಿದೆ.

ಹಿಮಾಚಲ ಪ್ರದೇಶ, ಜಮ್ಮು ಮತ್ತು ಕಾಶ್ಮೀರ ಮತ್ತು ಲಡಾಖ್ ಹೊರತು ಪಡಿಸಿ ಉಳಿದ ರಾಜ್ಯಗಳಲ್ಲಿ ಎಸ್‌ಐಆರ್ ನಡೆಯಲಿದೆ.

ಈ ರಾಜ್ಯಗಳಲ್ಲಿ ಕಷ್ಟಕರವಾದ



ಭೂಪ್ರದೇಶ, ಹವಾಮಾನ ಅಡಚಣೆಗಳು ಮತ್ತು ಕಾರ್ಯಾಚರಣೆಯ ಸವಾಲುಗಳು, ವಿಶೇಷವಾಗಿ ಹಿಮಪಾತ ಪೀಡಿತ ಮತ್ತು ಎತ್ತರದ ಪ್ರದೇಶಗಳಿರುವುದರಿಂದ ಎಸ್‌ಐಆರ್ ಪ್ರಕ್ರಿಯೆಯನ್ನು ಮುಂದೂಡಿದೆ.

ಜನಗಣತಿಯ ಎರಡನೇ ಹಂತದ ಪ್ರಗತಿ ಮತ್ತು ಸ್ಥಳೀಯ ಲಾಜಿಸ್ಟಿಕ್ ಪರಿಸ್ಥಿತಿಗಳನ್ನು ಪರಿಗಣಿಸಿದ ನಂತರ ಈ ಪ್ರದೇಶಗಳಿಗೆ ಪ್ರತ್ಯೇಕ ವೇಳಾಪಟ್ಟಿಯನ್ನು ಘೋಷಿಸಲಾಗುವುದು ಎಂದು ಚುನಾವಣಾ ಆಯೋಗ ತಿಳಿಸಿದೆ.

ಹಂತ 3ರ ಪ್ರಾರಂಭದ ಕುರಿತು ಮಾತನಾಡಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಮತದಾರರು ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಮನವಿ ಮಾಡಿದ್ದಾರೆ. ಅರ್ಹ ನಾಗರಿಕರು ಮಾತ್ರ ಪಟ್ಟಿಯಲ್ಲಿ ಉಳಿಯುವಂತೆ ನೋಡಿಕೊಳ್ಳುವ ಮೂಲಕ ನಿಖರವಾದ ಮತದಾರರ ಪಟ್ಟಿಯನ್ನು ನಿರ್ವಹಿಸುವುದು ಮತ್ತು ಅನರ್ಹ ನಮೂದುಗಳನ್ನು ತಡೆಯುವುದು ಈ ಪ್ರಕ್ರಿಯೆಯ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

ಈ ಹಂತದಲ್ಲಿ ಸುಮಾರು 36.73 ಕೋಟಿ ಮತದಾರರನ್ನು ತಲುಪುವ ಗುರಿಯನ್ನು ಹೊಂದಲಾಗಿದೆ. ಮರಣ ಹೊಂದಿದವರು, ಶಾಶ್ವತವಾಗಿ ವಲಸೆ ಹೋದವರು ಮತ್ತು ಒಂದಕ್ಕಿಂತ ಹೆಚ್ಚು ಕಡೆ ನಕಲಿ ಹೆಸರನ್ನು ಹೊಂದಿರುವವರನ್ನು ಪಟ್ಟಿಯಿಂದ ತೆಗೆದುಹಾಕಲಾಗುತ್ತದೆ.

ಕರ್ನಾಟಕ ಸೇರಿದಂತೆ ಮಹಾರಾಷ್ಟ್ರ, ದೆಹಲಿ ಮತ್ತು ಜಾರ್ಖಂಡ್ ರಾಜ್ಯಗಳಲ್ಲಿ ಅಕ್ಟೋಬರ್ 1 ಅರ್ಹತಾ ದಿನವನ್ನಾಗಿ ಪರಿಗಣಿಸಲಾಗಿದೆ.

## ದೆಹಲಿಯಲ್ಲಿ ವರ್ಕ್‌ಫ್ರಮ್ ಹೋಂ ಕಡ್ಡಾಯ

ನವದೆಹಲಿ: ತೈಲ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಇಂಧನ ಉಳಿತಾಯಕ್ಕಾಗಿ 'ವರ್ಕ್ ಫ್ರಮ್ ಹೋಮ್' ಮಾಡುವಂತೆ ಸಲಹೆ ನೀಡಿದ್ದೇ ತಡ, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರು ಗುರುವಾರ ಸರ್ಕಾರಿ ನೌಕರರಿಗೆ ವಾರಕ್ಕೆ ಎರಡು ದಿನ ಮನೆಯಿಂದಲೇ ಕೆಲಸ ಮತ್ತು ವಾಹನಗಳ ಕನಿಷ್ಠ ಬಳಕೆ ಘೋಷಿಸಿದ್ದಾರೆ.

ದೆಹಲಿ ಸರ್ಕಾರದ ಈ ನಿರ್ಧಾರ ನಾಳೆಯಿಂದಲೇ ಜಾರಿಗೆ ಬರಲಿದ್ದು, ಇಂಧನ ಉಳಿತಾಯ ಮತ್ತು ದಕ್ಷ ಆಡಳಿತವನ್ನು ಉತ್ತೇಜಿಸಲು ಬಿಜೆಪಿ ನೇತೃತ್ವದ ಸರ್ಕಾರ ರಾಷ್ಟ್ರ ರಾಜಧಾನಿಯಲ್ಲಿ "ಮೇರಾ ಭಾರತ್ ಮೇರಾ ಯೋಗದಾನ್"(ನನ್ನ ಭಾರತ, ನನ್ನ ಕೊಡುಗೆ) ಅಭಿಯಾನವನ್ನು ಪ್ರಾರಂಭಿಸುತ್ತಿದೆ.

ಪ್ರತಿ ಸೋಮವಾರ "ಮೆಟ್ರೋ ಸೋಮವಾರ" ಎಂದು ಆಚರಿಸಲಾಗುವುದು ಎಂದು ಸರ್ಕಾರ ತಿಳಿಸಿದೆ. ಈ ದಿನ ಎಲ್ಲಾ ಸಚಿವರು, ಅಧಿಕಾರಿಗಳು ಮತ್ತು ಉದ್ಯೋಗಿಗಳು ಮೆಟ್ರೋದಲ್ಲಿ ಪ್ರಯಾಣಿಸಬೇಕು ಎಂದು ಸರ್ಕಾರ ಸೂಚಿಸಿದೆ. ವಾರದಲ್ಲಿ ಒಂದು ದಿನ "ವಾಹನ ರಹಿತ ದಿನ"ವನ್ನು ಆಚರಿಸಲು ಸರ್ಕಾರ ಸಾರ್ವಜನಿಕರಿಗೆ ಮನವಿ ಮಾಡಿದೆ. ದೆಹಲಿಯಲ್ಲಿ ಮುಂದಿನ ಆರು ತಿಂಗಳವರೆಗೆ ಯಾವುದೇ ಹೊಸ ಪೆಟ್ರೋಲ್, ಡೀಸೆಲ್ ಅಥವಾ ಎಲೆಕ್ಟ್ರಿಕ್ ವಾಹನ ಖರೀದಿ ಮಾಡುವಂತಿಲ್ಲ ಎಂದು ಸರ್ಕಾರ ಹೇಳಿದೆ.

ಇನ್ನೂ ಸರ್ಕಾರಿ ನೌಕರರಿಗೆ ಸಾರಿಗೆ ಭತ್ಯೆಯನ್ನು ಶೇ. 10 ರಷ್ಟು ಹೆಚ್ಚಿಸಲಾಗುವುದು ಎಂದು ಸರ್ಕಾರ ತಿಳಿಸಿದೆ. ದೆಹಲಿ ಸರ್ಕಾರದ ಯಾವುದೇ ಸಚಿವರು ಅಥವಾ ಅಧಿಕಾರಿಗಳು ಮುಂದಿನ ಒಂದು ವರ್ಷದವರೆಗೆ ಯಾವುದೇ ಅಧಿಕೃತ ವಿದೇಶ ಪ್ರವಾಸ ಕೈಗೊಳ್ಳುವಂತಿಲ್ಲ ಎಂದು ಸರ್ಕಾರ ಹೇಳಿದೆ. ಹೆಚ್ಚುವರಿಯಾಗಿ, ಜಾಗೃತಿ ಮೂಡಿಸಲು 90 ದಿನಗಳ ಅಭಿಯಾನ ನಡೆಸಲಾಗುವುದು. ಇಂಧನ ಉಳಿತಾಯವನ್ನು ಉತ್ತೇಜಿಸಲು ಮತ್ತು ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡುವ ಪ್ರತಿಜ್ಞೆಯನ್ನು ನಾಗರಿಕರಿಗೆ ನೀಡಲಾಗುವುದು ಎಂದು ಸರ್ಕಾರ ತಿಳಿಸಿದೆ.

ವಿದ್ಯುತ್ ಬಳಕೆಯನ್ನು ಕಡಿಮೆ ಮಾಡಲು, ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಹವಾನಿಯಂತ್ರಣಗಳನ್ನು 24 ರಿಂದ 26 ಡಿಗ್ರಿ ಸೆಲ್ಸಿಯಸ್ ನಡುವೆ ಹೊಂದಿಸಲು ನಿರ್ಧರಿಸಲಾಗಿದೆ.

ಪ್ರತಿ ಸೋಮವಾರ "ಮೆಟ್ರೋ ಸೋಮವಾರ" ಎಂದು ಆಚರಿಸಲಾಗುವುದು ಎಂದು ಸರ್ಕಾರ ತಿಳಿಸಿದೆ. ಈ ದಿನ ಎಲ್ಲಾ ಸಚಿವರು, ಅಧಿಕಾರಿಗಳು ಮತ್ತು ಉದ್ಯೋಗಿಗಳು ಮೆಟ್ರೋದಲ್ಲಿ ಪ್ರಯಾಣಿಸಬೇಕು ಎಂದು ಸರ್ಕಾರ ಸೂಚಿಸಿದೆ.

ವಾರದಲ್ಲಿ ಒಂದು ದಿನ "ವಾಹನ ರಹಿತ ದಿನ"ವನ್ನು ಆಚರಿಸಲು ಸರ್ಕಾರ ಸಾರ್ವಜನಿಕರಿಗೆ ಮನವಿ ಮಾಡಿದೆ. ದೆಹಲಿಯಲ್ಲಿ ಮುಂದಿನ ಆರು ತಿಂಗಳವರೆಗೆ ಯಾವುದೇ ಹೊಸ ಪೆಟ್ರೋಲ್, ಡೀಸೆಲ್ ಅಥವಾ ಎಲೆಕ್ಟ್ರಿಕ್ ವಾಹನ ಖರೀದಿ ಮಾಡುವಂತಿಲ್ಲ ಎಂದು ಸರ್ಕಾರ ಹೇಳಿದೆ.

ಇನ್ನೂ ಸರ್ಕಾರಿ ನೌಕರರಿಗೆ ಸಾರಿಗೆ ಭತ್ಯೆಯನ್ನು ಶೇ. 10 ರಷ್ಟು ಹೆಚ್ಚಿಸಲಾಗುವುದು ಎಂದು ಸರ್ಕಾರ ತಿಳಿಸಿದೆ. ದೆಹಲಿ ಸರ್ಕಾರದ ಯಾವುದೇ ಸಚಿವರು ಅಥವಾ ಅಧಿಕಾರಿಗಳು ಮುಂದಿನ ಒಂದು ವರ್ಷದವರೆಗೆ ಯಾವುದೇ ಅಧಿಕೃತ ವಿದೇಶ ಪ್ರವಾಸ ಕೈಗೊಳ್ಳುವಂತಿಲ್ಲ ಎಂದು ಸರ್ಕಾರ ಹೇಳಿದೆ.



ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿನ ತಮ್ಮ ನಿವಾಸದ ಬಳಿ ಸಾರ್ವಜನಿಕರ ಅಹವಾಲು ಆಲಿಸಿದರು.

## ಹೆಚ್ಚುವರಿ ಹಣ ಕೇಳುತ್ತಿದ್ದ ಆಟೋ ಚಾಲಕರ ವಿರುದ್ಧ ಪ್ರಕರಣ

ಬೆಂಗಳೂರು: ಬೆಂಗಳೂರಿನಲ್ಲಿ ಪ್ರಯಾಣಿಕರ ಸುಲಿಗೆಗೆ ಇಳಿಯುವ ಮತ್ತು ಕರೆದ ಕಡೆ ಬರಲು ನಿರಾಕರಿಸುವ ಆಟೋ ಚಾಲಕರಿಗೆ ಬೆಂಗಳೂರು ಸಂಚಾರಿ ಪೊಲೀಸರು ಭರ್ಜರಿ ಬಿಸಿ ಮುಟ್ಟಿಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಹೆಚ್ಚುವರಿ ಹಣ ವಸೂಲಿ ಮಾಡುವ ಮತ್ತು ಸಂಜೆ ಆಗುತ್ತಿದ್ದಂತೆ ಮೀಟರ್ ದರಕ್ಕಿಂತ ಒಂದೂವರೆ ಪಟ್ಟು ಹಣ ಕೇಳುವ ದೂರುಗಳು ಹೆಚ್ಚಾದ ಹಿನ್ನೆಲೆಯಲ್ಲಿ ಪೊಲೀಸರು ವಿಶೇಷ ಕಾರ್ಯಾಚರಣೆ ಕೈಗೊಂಡಿದ್ದಾರೆ. ಮೂರು ತಿಂಗಳ ಅವಧಿಯಲ್ಲೇ 2,988 ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಹೆಚ್ಚುವರಿ ಹಣ ವಸೂಲಿ ಮತ್ತು ಬಾಡಿಗೆಗೆ ಬರಲು ನಿರಾಕರಿಸಿದ ಆಟೋ ಚಾಲಕರ ವಿರುದ್ಧ ಕಳೆದ 3 ತಿಂಗಳಲ್ಲಿ ಒಟ್ಟು 2,988 ಪ್ರಕರಣಗಳು ದಾಖಲು. ಹೆಚ್ಚುವರಿ ಬಾಡಿಗೆ ಕೇಳಿದ 1,354 ಮತ್ತು ನಿಗದಿಪಡಿಸಿದ ಸ್ಥಳಕ್ಕೆ ಬರಲು ನಿರಾಕರಿಸಿದ 1,634 ಚಾಲಕರ ವಿರುದ್ಧ ದೂರು ದಾಖಲು.



ನಗರದ ಅನೇಕ ಭಾಗಗಳಲ್ಲಿ ಆಟೋ ಚಾಲಕರು ಪ್ರಯಾಣಿಕರು ಕರೆದ ಕಡೆ ಬರುವುದಿಲ್ಲ ಹಾಗೂ ಒಂದು ವೇಳೆ ಬಂದರೂ ದುಪ್ಪಟ್ಟು ಹಣ ಕೇಳುತ್ತಾರೆ ಎಂಬ ದೂರುಗಳು ವ್ಯಾಪಕವಾಗಿ ಕೇಳಿಬಂದಿದ್ದವು. ಈ ಬಗ್ಗೆ ಸಾರ್ವಜನಿಕರು ಸಾರಿಗೆ ಇಲಾಖೆ ಮತ್ತು ಸಂಚಾರಿ ಪೊಲೀಸರಿಗೆ ನೀಡಿದ ದೂರಿನ ಆಧಾರದ ಮೇಲೆ ಕಳೆದ ಮೂರು ತಿಂಗಳಿನಿಂದ ನಿರಂತರ ಕಾರ್ಯಾಚರಣೆ ನಡೆಸಲಾಗಿದೆ. ವಿಶೇಷವಾಗಿ ಭಾಷೆ ತಿಳಿಯದ ಹೊರರಾಜ್ಯದ ಪ್ರಯಾಣಿಕರನ್ನು ಗುರಿಯಾಗಿಸಿಕೊಂಡು ಹಣ ವಸೂಲಿ ಮಾಡುವ ಚಾಲಕರ ವಿರುದ್ಧ ಪೊಲೀಸರು ದಂಡದ ಬಿಸಿ ಮುಟ್ಟಿಸುತ್ತಿದ್ದಾರೆ.

ನಿಯಮದ ಪ್ರಕಾರ ರಾತ್ರಿ 10 ಗಂಟೆಯ ನಂತರವಷ್ಟೇ ಒಂದೂವರೆ ಪಟ್ಟು ದರ ತೆಗೆದುಕೊಳ್ಳಲು ಅವಕಾಶವಿದೆ. ಆದರೆ, ಅನೇಕ ಚಾಲಕರು ರಾತ್ರಿ 8 ಗಂಟೆಯಿಂದಲೇ ಈ ದರ ವಸೂಲಿ ಮಾಡುತ್ತಿರುವುದು ಪ್ರಯಾಣಿಕರ ಆಕ್ರೋಶಕ್ಕೆ ಕಾರಣವಾಗಿದೆ. ಈ ಬಗ್ಗೆ ಮಾತನಾಡಿದ ಪ್ರಯಾಣಿಕ ರಾಮು, ಚಾಲಕರ ಈ ವರ್ತನೆಯಿಂದ ಸಾರ್ವಜನಿಕರಿಗೆ ತೊಂದರೆ ಯಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

## ದೆಹಲಿ ಬ್ಲ್ಯಾಸ್ಟ್: ಚಾರ್ಜ್‌ಶೀಟ್ ಸಲ್ಲಿಕೆ

ನವದೆಹಲಿ: ಕಳೆದ ವರ್ಷ ನವೆಂಬರ್ 10 ರಂದು ದೆಹಲಿಯ ಕೆಂಪುಕೋಟೆ ಬಳಿ ನಡೆದ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ 10 ಆರೋಪಿಗಳ ವಿರುದ್ಧ ರಾಷ್ಟ್ರೀಯ ತನಿಖಾ ಸಂಸ್ಥೆ ಬರೋಬ್ಬರಿ 7,500 ಪುಟಗಳ ಚಾರ್ಜ್‌ಶೀಟ್ ಸಲ್ಲಿಸಿದೆ.

ಆರೋಪಪಟ್ಟಿಯಲ್ಲಿ 588 ಸಾಕ್ಷಿಗಳ ಹೇಳಿಕೆಗಳು, 395 ಕ್ಕೂ ಹೆಚ್ಚು ದಾಖಲೆಗಳು ಮತ್ತು 200 ಕ್ಕೂ ಹೆಚ್ಚು ವಶಪಡಿಸಿಕೊಂಡ ವಸ್ತುಗಳನ್ನ ಮಾಹಿತಿಯನ್ನು ದಾಖಲಿಸಲಾಗಿದೆ. ಒಟ್ಟು 11 ಜನರನ್ನ ಬಂಧಿಸಿದ್ದು, ಉಳಿದ ಆರೋಪಿಗಳ ಬಂಧನಕ್ಕೆ ಎನ್‌ಐಎ ಶೋಧ ಕಾರ್ಯ ಮುಂದುವರಿಸಿದೆ ಎಂದು ಆರೋಪ ಪಟ್ಟಿಯಲ್ಲಿ ತಿಳಿಸಿದೆ.

2025 ರ ನವೆಂಬರ್ 10 ರಂದು ಸಂಜೆ ಕೆಂಪುಕೋಟೆ ಬಳಿ ಹುಂಡೈ ಐ20 ಕಾರು ಸ್ಫೋಟಗೊಂಡು 11 ಮಂದಿ ಮೃತಪಟ್ಟಿದ್ದರು. 20ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದರು. ಸ್ಫೋಟದ ತೀವ್ರತೆಗೆ ಸುತ್ತಮುತ್ತಲಿನ ಹಲವಾರು ವಾಹನಗಳು ಹಾನಿಗೊಳಗಾಗಿದ್ದವು.

ಈ ಪ್ರಕರಣದ ತನಿಖೆ ಹೊಣೆ ಹೊತ್ತಿದ್ದ ಎನ್‌ಐಎ ಇಂದು (ಗುರುವಾರ) ಪಟಿಯಾಲ ಹೌಸ್ ಕೋರ್ಟ್‌ನಲ್ಲಿರುವ ಎನ್‌ಐಎ ವಿಶೇಷ ನ್ಯಾಯಾಲಯದ ಮುಂದೆ ಆರೋಪ ಪಟ್ಟಿ ಸಲ್ಲಿಕೆ ಮಾಡಿದೆ.

ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆ, ಭಾರತೀಯ ನ್ಯಾಯ ಸಂಹಿತೆ, ಸ್ಫೋಟಕ ವಸ್ತುಗಳ ಕಾಯ್ದೆ, ಶಸ್ತ್ರಾಸ್ತ್ರ ಕಾಯ್ದೆ ಮತ್ತು ಸಾರ್ವಜನಿಕ ಆಸ್ತಿಗೆ ಹಾನಿ ತಡೆಗಟ್ಟುವಿಕೆ ಕಾಯ್ದೆಯ ಬಹು ನಿಬಂಧನೆಗಳ ಅಡಿಯಲ್ಲಿ ಆರೋಪಪಟ್ಟಿಯನ್ನ ಸಲ್ಲಿಕೆ ಮಾಡಲಾಗಿದೆ. ಬಂಧಿತ ಆರೋಪಿಗಳು ಅಲ್-ಖೈದಾದ ಜೊತೆ ಲಿಂಕ್ ಹೊಂದಿರುವ ಅನ್ಸಾರ್ ಘಜ್ವತ್-ಉಲ್-ಹಿಂದ್ ಭಯೋತ್ಪಾದಕ ಸಂಘಟನೆ ಜೊತೆಗೆ ಸಂಪರ್ಕ ಹೊಂದಿದ್ದರು ಎಂದು ಎನ್‌ಐಎ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪ್ರಕರಣದ ಪ್ರಮುಖ ಆರೋಪಿ ಪುಲ್ವಾಮಾ ನಿವಾಸಿ ಮತ್ತು ಫರಿದಾಬಾದ್‌ನ ಅಲ್-ಫಲಾಹ್ ವಿಶ್ವ ವಿದ್ಯಾಲಯದ ಮಾಜಿ ಸಹಾಯಕ ಪ್ರಾಧ್ಯಾಪಕ ಡಾ. ಉಮರ್ ಉನ್ ನಬಿ ಸ್ಫೋಟದಲ್ಲಿ ಸಾವನ್ನಪ್ಪಿದ್ದಾರೆ.

# 'ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿ'

ಮೈಸೂರು: ನಗರದ ಅಭಿವೃದ್ಧಿ ಕಾಮಗಾರಿಗಳು ನಿಗಧಿತ ಅವಧಿಯಲ್ಲಿ ಪೂರ್ಣಗೊಳ್ಳುವ ಜೊತೆಗೆ ಗುಣಮಟ್ಟದಿಂದ ಕೂಡಿರಬೇಕು ಎಂದು ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನಗಳನ್ನು ನೀಡಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಮೈಸೂರಿನ ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರಗತಿಯಲ್ಲಿರುವ ಅಭಿವೃದ್ಧಿ ಕಾರ್ಯಗಳನ್ನು ಪರಿವೀಕ್ಷಣೆ ನಡೆಸಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಕೆಪಿಟಿಸಿಎಲ್ ನ ವತಿಯಿಂದ ಸುಮಾರು 871 ಕಿ.ಮೀ. ಕೇಬಲ್ ಗಳನ್ನು ಹಾಕಲಾಗುತ್ತಿದ್ದು, ಇದುವರೆಗೆ 277 ಕಿ.ಮೀ.ಪೂರ್ಣಗೊಂಡಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. ಇದರಿಂಧ ಮೈಸೂರು ನಗರದ ಸೌಂದರ್ಯೀಕರಣಕ್ಕೆ ಸಹಕಾರಿಯಾಗಿದೆ ಎಂದರು.

ಮಹಾರಾಣಿ ಕಾಲೇಜಿನ ವಿದ್ಯಾರ್ಥಿ ನಿಲಯಗಳಿಗೆ ಸೂಕ್ತ ಸ್ಥಳಾವಕಾಶವಿರದ ಕಾರಣ, ಪ್ರಸ್ತುತ 1400 ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಹೊಸ ವಿದ್ಯಾರ್ಥಿ ನಿಲಯವನ್ನು ನಿರ್ಮಿಸಲಾಗುತ್ತಿದೆ ಎಂದರು.

ನಗರದಲ್ಲಿ ಸುಮಾರು 50 ಕಿ.ಮೀ.ನ ರಸ್ತೆಯಲ್ಲಿ



ವೈಟ್ ಟಾಪಿಂಗ್ ಮಾಡಲಾಗುತ್ತಿದ್ದು, ಇಂತಹ ರಸ್ತೆಗಳು ಸುಮಾರು 30 ವರ್ಷಗಳ ವರೆಗೆ ಸಂಚಾರಯೋಗ್ಯವಾಗಿರುತ್ತವೆ. ಮೊದಲನೇ ಹಂತದಲ್ಲಿ 4 ಪಥವಿರುವ ರಸ್ತೆಯಲ್ಲಿ ಕಾಮಗಾರಿ ಕೈಗೊಳ್ಳಲಾಗಿದ್ದು, ಎರಡನೇ ಹಂತದಲ್ಲಿ ಉಳಿದ ರಸ್ತೆಗಳಲ್ಲಿ ವೈಟ್ ಟಾಪಿಂಗ್ ಮಾಡಲಾಗುವುದು. ಈ ರಸ್ತೆ ಕಾಮಗಾರಿಯಿಂದ ನಗರದಲ್ಲಿ ಸುಗಮ ಸಂಚಾರ ಹಾಗೂ ವಾಹನ ದಟ್ಟಣೆ ಸಮಸ್ಯೆ ಪರಿಹಾರವಾಗಲಿದೆ ಎಂದರು.

ಮೈಸೂರಿನ ರಸ್ತೆಗಳು, ಒಳಚರಂಡಿ ವ್ಯವಸ್ಥೇ ಸೇರಿದಂತೆ ಎಲ್ಲ ಅಭಿವೃದ್ದಿ ಕಾರ್ಯಗಳನ್ನು ನಮ್ಮ ಸರ್ಕಾರವೇ ಕೈಗೊಂಡಿದ್ದು, ಬಿಜೆಪಿಯವರು ಕೇವಲ ಸರ್ಕಾರವನ್ನು ವಿರೋಧಿಸುವ, ಟೀಕಿಸುವ, ಸುಳ್ಳು ಹೇಳುವ ಕೆಲಸದಲ್ಲಿ ನಿರತವಾಗಿದೆ. ಜನರಿಗೆ ಅನುಕೂಲ ಕಲ್ಪಿಸುವ ಯಾವುದೇ ಯೋಜನೆಗಳನ್ನು ಬಿಜೆಪಿಯು ತನ್ನ ಅಧಿಕಾರಾವಧಿಯಲ್ಲಿ ಕೈಗೊಳ್ಳಲಿಲ್ಲ ಎಂದರು.

ಮಹಾರಾಣಿ ಕಾಲೇಜಿನ ವಿದ್ಯಾರ್ಥಿ ನಿಲಯಗಳಿಗೆ ಸೂಕ್ತ ಸ್ಥಳಾವಕಾಶವಿರದ ಕಾರಣ, ಪ್ರಸ್ತುತ 1400 ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಹೊಸ ವಿದ್ಯಾರ್ಥಿ ನಿಲಯವನ್ನು ನಿರ್ಮಿಸಲಾಗುತ್ತಿದೆ. ನಗರದಲ್ಲಿ ಸುಮಾರು 50 ಕಿ.ಮೀ.ನ ರಸ್ತೆಯಲ್ಲಿ ವೈಟ್ ಟಾಪಿಂಗ್ ಮಾಡಲಾಗುತ್ತಿದ್ದು, ಇಂತಹ ರಸ್ತೆಗಳು ಸುಮಾರು 30 ವರ್ಷಗಳ ವರೆಗೆ ಸಂಚಾರಯೋಗ್ಯವಾಗಿರುತ್ತವೆ. ಮೊದಲನೇ ಹಂತದಲ್ಲಿ 4 ಪಥವಿರುವ ರಸ್ತೆಯಲ್ಲಿ ಕಾಮಗಾರಿ ಕೈಗೊಳ್ಳಲಾಗಿದ್ದು, ಎರಡನೇ ಹಂತದಲ್ಲಿ ಉಳಿದ ರಸ್ತೆಗಳಲ್ಲಿ ವೈಟ್ ಟಾಪಿಂಗ್ ಮಾಡಲಾಗುವುದು. ಈ ರಸ್ತೆ ಕಾಮಗಾರಿಯಿಂದ ನಗರದಲ್ಲಿ ಸುಗಮ ಸಂಚಾರ ಹಾಗೂ ವಾಹನ ದಟ್ಟಣೆ ಸಮಸ್ಯೆ ಪರಿಹಾರವಾಗಲಿದೆ.

ಮೈಸೂರು ನಗರದಲ್ಲಿ ದೇವರಾಜ ಮಾರ್ಕೆಟ್, ಲ್ಯಾನ್ಸ್‌ಡೌನ್ ಕಟ್ಟಡಗಳ ಪಾರಂಪರಿಕ ವಿನ್ಯಾಸವನ್ನು ಕಾಯ್ದುಕೊಂಡು ನಿರ್ಮಿಸುವ ಉದ್ದೇಶವಿದ್ದರೂ, ಈ ವಿಷಯ ಕೋರ್ಟ್ ಮೆಟ್ಟಿಲೇರಿದೆ. ಆದರೂ ಈ ವಿಷಯದ ಬಗ್ಗೆ ನಾನು ಹಾಗೂ ಸ್ಥಳೀಯ ಶಾಸಕರು ಮುತುವರ್ಜಿ ವಹಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಕೇರಳದಲ್ಲಿ ಮುಖ್ಯಮಂತ್ರಿಗಳ ಆಯ್ಕೆಗೆ ಪಕ್ಷದ ವರಿಷ್ಠರು, ಅಲ್ಲಿನ ರಾಜಕೀಯ ನಾಯಕರೊಂದಿಗೆ ಚರ್ಚೆ ನಡೆಸಿ ಸೂಕ್ತ ತೀರ್ಮಾನ ಕೈಗೊಂಡಿದ್ದಾರೆ. ಕೇರಳಂನಲ್ಲಿ ಮೂರು ನಾಯಕರು ಮುಖ್ಯಮಂತ್ರಿ ಸ್ಥಾನದ ಆಕಾಂಕ್ಷಿಗಳಾಗಿದ್ದು, ಅವರಲ್ಲಿ ವಿ.ಡಿ.ಸತೀಶನ್ ಅವರನ್ನು ಕೇರಳ ಮುಖ್ಯಮಂತ್ರಿಯಾಗಿ ಆಯ್ಕೆ ಮಾಡಲಾಗಿದೆ ಎಂದರು.

ಭಾರತ ಸಾರಥಿ
15/05/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ‘ಸಮಸ್ಯೆಗಳನ್ನು ಪರಿಶೀಲಿಸಿ ಪರಿಹರಿಸಲು ಅಗತ್ಯ ಕ್ರಮ’

ರಾಮನಗರ

ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗವು ಕಳೆದ 7 ತಿಂಗಳಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆ ಸೇರಿದಂತೆ ರಾಜ್ಯದ 15 ಜಿಲ್ಲೆಗಳ ಪ್ರವಾಸ ಕೈಗೊಂಡು ಅಲ್ಲಿ ಅಹವಾಲು ಸ್ವೀಕರಿಸಿ, ಅಲ್ಲಿನ ಜನರ ಸಮಸ್ಯೆಗಳನ್ನು ಗಂಭೀರವಾಗಿ ಪರಿಶೀಲನೆ ನಡೆಸಿದ್ದು, ಈ ಕುರಿತ ಆಯೋಗದ ವರದಿಯನ್ನು ಮುಂಬರುವ 15 ದಿನಗಳೊಳಗೆ ಸರ್ಕಾರಕ್ಕೆ ಸಲ್ಲಿಸಲಿದೆ ಎಂದು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರಾದ ಡಾ. ಮೂರ್ತಿ ಎಲ್ ಅವರು ಹೇಳಿದರು.

ಅವರು ಮೇ 13ರ ಬುಧವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದಿಂದ ಅಹವಾಲು ಸ್ವೀಕರಿಸಿ ಮಾತನಾಡಿದರು.

ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗವು ರಾಜ್ಯದಲ್ಲಿ ಪ್ರವಾಸ ಕೈಗೊಂಡು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡದ ಜನರ ಸಮಸ್ಯೆಗಳನ್ನು ತಿಳಿದುಕೊಂಡು ಅವುಗಳನ್ನು ಬಗೆಹರಿಸಲು ಶ್ರಮಿಸುತ್ತಿದೆ, ಈ ದಿಸೆಯಲ್ಲಿ ಬೆಂಗಳೂರು ದಕ್ಷಿಣ 15ನೇ ಜಿಲ್ಲೆಯಾಗಿದೆ, ಇಲ್ಲಿ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟು ಜನರಿಂದ ಸಮಸ್ಯೆಗಳನ್ನು ಆಲಿಸಿ, ಅಹವಾಲುಗಳನ್ನು ಸ್ವೀಕರಿಸಿ ಅವುಗಳನ್ನು ಅವಲೋಕನ ಮಾಡಿ ಅವುಗಳನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಅವುಗಳನ್ನು ಕಳುಹಿಸಿ ಸಮಸ್ಯೆಗಳನ್ನು ಬಗೆಹರಿಸಲಾಗುವುದು, ಸಮಸ್ಯೆಗಳಿಗೆ ಸಂಬಂಧಿಸಿದಂತೆ ಅರ್ಜಿದಾರರಿಗೆ ದೂರವಾಣಿ ಕರೆ ಮೂಲಕವೂ ಮಾಹಿತಿ ನೀಡಲಾಗುವುದು. ಅಹವಾಲುದಾರರು ಸಂಬಂಧಿಸಿದ ಇಲಾಖೆಗೆ ಆಯೋಗ ನೀಡುವ ಪ್ರತಿಯನ್ನು ತೋರಿಸಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದು. ಅದಾಗ್ಯೂ ಈ ಸಮಸ್ಯೆಗಳು ಬಗೆಹರಿಯದಿದ್ದಲ್ಲಿ ಮುಂದಿನ ಒಂದೂವರೆ ತಿಂಗಳೊಳಗೆ ಮತ್ತೊಮ್ಮೆ ಆಯೋಗ ಸಭೆ ನಡೆಸಲಿದೆ ಎಂದು ತಿಳಿಸಿದರು.

ಕಾನೂನಿನ ಮುಂದೆ ಯಾರೂ ದೊಡ್ಡವರಲ್ಲ ಎಂಬುದನ್ನು ಅರಿತು ಅಧಿಕಾರಿಗಳು ಕರ್ತವ್ಯ ನಿರ್ವಹಿಸಬೇಕು. ಆಯೋಗವು ಜಿಲ್ಲೆಯ ಹಿರಿಯ ಅಧಿಕಾರಿಗಳಿಗೆ ಕಾನೂನಿನ ಮೂಲಕ ಚಾಟಿ ಬೀಸಲು ಹಿಂದೆ ಮುಂದೆ ನೋಡುವುದಿಲ್ಲ. ನೊಂದ ಜನರೊಂದಿಗೆ ಸೌಜನ್ಯಯುತವಾಗಿ ವರ್ತಿಸಿ ಅವರ ಅಹವಾಲುಗಳನ್ನು ಆಲಿಸಿ ಸಮಸ್ಯೆಗಳನ್ನು ಬಗೆಹರಿಸಿಕೊಡಬೇಕು ಎಂದು ಸೂಚಿಸಿದ ಅವರು, ಇಂದು ಇಲ್ಲಿ ಸಲ್ಲಿಕೆಯಾದ ಎಲ್ಲಾ ಅಹವಾಲುಗಳನ್ನು ಆಯೋಗವು ಗಂಭೀರವಾಗಿ ಪರಿಶೀಲಿಸಲಿದೆ. ಕೆಲವೊಂದು ಸಮಸ್ಯೆಗಳಿಂದಾಗಿ ಇಂದಿನ ಸಭೆಯನ್ನು ಮುಂದೂಡುವುದು ಯಾವುದೇ ಉತ್ತಮ ವಿಚಾರವಲ್ಲ ಆಯೋಗವು ಪ್ರವಾಸ ಮಾಡಿದ ಹಲವು ಜಿಲ್ಲೆಗಳಲ್ಲಿ ಶೇ. 50 ರಿಂದ 60 ರಷ್ಟು ಸಮಸ್ಯೆಗಳನ್ನು ಸ್ಥಳದಲ್ಲೇ ಇತ್ಯರ್ಥಪಡಿಸಲಾಗಿದೆ. ಆದರೆ ಬೆಂಗಳೂರು ದಕ್ಷಿಣ ಜಿಲ್ಲೆಯ ಸಮಸ್ಯೆಗಳು ಸಾಕಷ್ಟು ಗೋಚಸುತ್ತಿದೆ. ಅವುಗಳನ್ನು ಪರಿಶೀಲಿಸಿ, ಪರಿಹರಿಸಲು ಆಯೋಗ ಅಗತ್ಯ ರೀತಿಯಲ್ಲಿ ಕಾರ್ಯ ಪ್ರವೃತ್ತರಾಗಲಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಸದಸ್ಯರುಗಳಾದ ಎಂ. ಕುಂಬಯ್ಯ, ಸುನಿಲ್ ಎಂ ಉಕ್ಕಲಿ, ಎನ್. ದಿವಾಕರ್, ಗೀತಾ ಥಾವಂಶಿ ಮತ್ತು ಕಾರ್ಯದರ್ಶಿಗಳಾದ ಡಾ. ಎಚ್.ಎಸ್ ಶಿವರಾಮು, ಅಪರ ಜಿಲ್ಲಾಧಿಕಾರಿ ಆರ್.ಚಂದ್ರಯ್ಯ, ಅಪರ ಪೊಲೀಸ್ ವರಿಷ್ಠಾಧಿಕಾರಿ ರಾಮಚಂದ್ರಯ್ಯ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಶ್ರೀನಿವಾಸ್ ಉಪಸ್ಥಿತರಿದ್ದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶಿವಕುಮಾರ್ ಸ್ವಾಗತಿಸಿದರು. ಜಿಲ್ಲೆಯ ವಿವಿಧ ಸಂಘ ಸಂಸ್ಥೆಗಳ, ವಿವಿಧ ಸಂಘಟನೆಗಳ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು, ಮಹಿಳಾ ಸಂಘಟನೆಗಳ ಪದಾಧಿಕಾರಿಗಳು, ಸಾರ್ವಜನಿಕರು ಸಭೆಯಲ್ಲಿ ಭಾಗವಹಿಸಿ ಆಯೋಗಕ್ಕೆ ಅಹವಾಲು ಸಲ್ಲಿಸಿದರು.

# ತ.ನಾಡಲ್ಲಿ ಬಹುಮತ ಗೆದ್ದ ವಿಜಯ್

ಚೆನ್ನೈ

ತಮಿಳುನಾಡು ವಿಧಾನಸಭೆಯಲ್ಲಿ ಬುಧವಾರ ನಡೆದ ವಿಶ್ವಾಸಮತ ಯಾಚನೆ ಪ್ರಕ್ರಿಯೆಯಲ್ಲಿ ಸಿಎಂ ಜೋಸೆಫ್ ವಿಜಯ್ ನಿರೀಕ್ಷೆಗೂ ಮೀರಿ ಭರ್ಜರಿ ಬಹುಮತ ಸಾಬೀತುಪಡಿಸಿದ್ದಾರೆ. ವಿಜಯ್ ಸರ್ಕಾರಕ್ಕೆ ಕಾಂಗ್ರೆಸ್‌ನ ಐವರು ಶಾಸಕರು, ವಿಸಿಕೆಯ ಇಬ್ಬರು, ಸಿಪಿಐನ ಇಬ್ಬರು ಶಾಸಕರು, ಸಿಪಿಐ(ಎಂ) ಇಬ್ಬರು, ಐಯುಎಂಎಲ್ ಪಕ್ಷದ ಇಬ್ಬರು ಶಾಸಕರು ಶಾಸಕರು ಸೇರಿದಂತೆ ಒಟ್ಟು 144 ಜನ ಶಾಸಕರ ಬೆಂಬಲ ದೊರೆತಿದೆ. ವಿಧಾನಸಭೆ ಚುನಾವಣೆಯಲ್ಲಿ ವಿಜಯ್ ನೇತೃತ್ವದ ಟಿವಿಕೆ 107 ಸ್ಥಾನಗಳನ್ನು ಗಳಿಸಿ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿತ್ತು. ಆದರೆ, ಬಹುಮತಕ್ಕೆ 118 ಸ್ಥಾನಗಳು ಬೇಕಿರುವ ಕಾರಣ ಸರ್ಕಾರ ರಚನೆ ತುಸು ವಿಳಂಬವಾಗಿತ್ತು.

ಎಐಎಡಿಎಂಕೆಯ 25 ಮಂದಿ ಬಂಡಾಯ ಶಾಸಕರೂ ವಿಜಯ್ ಸರ್ಕಾರಕ್ಕೆ ಬೆಂಬಲ ಘೋಷಿಸಿದ್ದಾರೆ. ವೇಲುಮಣಿ ಮತ್ತು ಷಣ್ಮುಗಂ ಶಾಸಕರು ನೇತೃತ್ವದ ಬಂಡಾಯ ಶಾಸಕರು ಪಕ್ಷದ ಮುಖ್ಯಸ್ಥ ಎಡಪ್ಪಾಡಿ ಕೆ ಪಳನಿಸ್ವಾಮಿ ನಿಲುವನ್ನು ಧಿಕ್ಕರಿಸಿ ವಿಜಯ್ ಸರ್ಕಾರವನ್ನು ಬೆಂಬಲಿಸಿದ್ದಾರೆ.

ವಿಶ್ವಾಸಮತ ಗೆದ್ದ ನಂತರ ಮಾತನಾಡಿದ ಸಿಎಂ ವಿಜಯ್, ನಮ್ಮ ಸರ್ಕಾರಕ್ಕೆ ಬೆಂಬಲ ಘೋಷಿಸಿದ ಎಲ್ಲಾ ಶಾಸಕರಿಗೂ ಧನ್ಯವಾದ. ನಮ್ಮದು ಮೈತ್ರಿಕೂಟ ಸರ್ಕಾರ. ಜನರಿಗೆ ಕೊಟ್ಟಿರುವ ಭರವಸೆಗಳನ್ನು ಈಡೇರಿಸಲು ನಾವು ಬದ್ಧ. ನಮ್ಮ ಸರ್ಕಾರ ಯಾವಾಗಲೂ ಜನಪರವಾಗಿರುತ್ತದೆ. ನಮಗೆ ಯಾರ ಮೇಲೂ ದ್ವೇಷವಿಲ್ಲ, ದ್ವೇಷ ರಾಜಕಾರಣ ಮಾಡಲ್ಲ. ಮತ ಹಾಕಿದವರು, ಹಾಕದೇ ಇರುವವರು ಎಂಬ ಭೇದ-ಭಾವ ಮಾಡಲ್ಲ. ಪೆರಿಯಾರ್, ಕಾಮರಾಜ್, ಅಂಬೇಡ್ಕರ್ ತತ್ವದಡಿ ಕೆಲಸ ಮಾಡುತ್ತೇವೆ ಎಂದರು.

ವಿಶ್ವಾಸಮತ ಯಾಚನೆಗೂ ಮುನ್ನ ನಡೆದ ಚರ್ಚೆಯಲ್ಲಿ ಪ್ರತಿಪಕ್ಷ ಡಿಎಂಕೆ ನಾಯಕ ಉದಯನಿಧಿ ಸ್ಟಾಲಿನ್ ಟಿವಿಕೆ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಇಂದು, ವಿಶ್ವಾಸಮತ ಯಾಚನೆ ನಡೆಯುತ್ತಿದೆ. ರಾಜ್ಯದ ಎಲ್ಲಾ ಜನರು ಟಿವಿಕೆಗೆ ಮತ ಹಾಕಿಲ್ಲ. ಒಟ್ಟು 4.93 ಕೋಟಿ ಮತಗಳಲ್ಲಿ, ಕೇವಲ 1.72 ಕೋಟಿ ಜನರು ಟಿವಿಕೆಗೆ ಮತ ಹಾಕಿದ್ದಾರೆ. ಉಳಿದ ಶೇ 65 ಜನರು ಟಿವಿಕೆ ವಿರುದ್ಧ ಮತ ಹಾಕಿದ್ದಾರೆ. ಟಿವಿಕೆಗೆ ಮತ ಹಾಕಿದ ಜನರಿಗೂ ಈಗ ಜ್ಞಾನೋದಯವಾಗುತ್ತಿದೆ. 118 ರ ಬಹುಮತದ ಚಿಹ್ನೆಯನ್ನು ಹೊಂದಿರುವ ಪಕ್ಷ ಮಾತ್ರ ಸರ್ಕಾರ ರಚಿಸಬಹುದು.

ಟಿವಿಕೆ ನಾಯಕ ಎರಡು ಕ್ಷೇತ್ರಗಳಲ್ಲಿ ಸ್ಪರ್ಧಿಸಿ, ಈಗ ಜನರನ್ನು ಭೇಟಿ ಮಾಡಿ ಧನ್ಯವಾದ ಹೇಳುವುದಕ್ಕೂ ಮೊದಲೇ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಅವರಿಗೆ (ತಿರುಪತ್ತೂರು ಶಾಸಕ ಆರ್. ಸೀನಿವಾಸ ಸೇತುಪತಿ) ವಿಶ್ವಾಸಮತದಲ್ಲಿ ಪಾಲ್ಗೊಳ್ಳದಂತೆ ನ್ಯಾಯಾಲಯ ನಿರ್ಬಂಧ ವಿಧಿಸಿರುವುದರಿಂದ ಟಿವಿಕೆ ಈಗ ಕೇವಲ 106 ಸದಸ್ಯರನ್ನು ಹೊಂದಿದೆ. ಡಿಎಂಕೆ ಜೊತೆ ಹೊಂದಾಣಿಕೆ ಮಾಡಿಕೊಂಡ ಪಕ್ಷಗಳಿಂದ ಬೆಂಬಲವನ್ನು ಟಿವಿಕೆ ಪಡೆದುಕೊಂಡಿದೆ ಎಂದು ಉದಯನಿಧಿ ಸ್ಟಾಲಿನ್ ಹೇಳಿದರು.

# ಮೇ 20ರಂದು ಸಾರಿಗೆ ನೌಕರರ ಮುಷ್ಕರ: ಬಸ್ ಸಂಚಾರದಲ್ಲಿ ವ್ಯತ್ಯಯ ಸಾಧ್ಯತೆ

ಬೆಂಗಳೂರು



ಕೆಎಸ್‌ಆರ್‌ಟಿಸಿ ಸೇರಿದಂತೆ ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ಸುಮಾರು 1.05 ಲಕ್ಷ ನೌಕರರ ವೇತನವನ್ನು ರಾಜ್ಯ ಸರ್ಕಾರ ಶೇಕಡಾ 12.50ರಷ್ಟು ಹೆಚ್ಚಿಸಿ ಆದೇಶ ಹೊರಡಿಸಿರುವುದಕ್ಕೆ ಸಾರಿಗೆ ಸಿಬ್ಬಂದಿ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಶೇಕಡಾ 25ರಷ್ಟು ವೇತನ ಹೆಚ್ಚಳಕ್ಕೆ ಆಗ್ರಹಿಸಿದ್ದ ನೌಕರರು, ಸರ್ಕಾರದ ಕ್ರಮವನ್ನು ಅಪೂರ್ಣ ಎಂದು ಹೇಳಿ ಇದೇ ಮೇ 20ರಂದು ರಾಜ್ಯವ್ಯಾಪಿ ಮುಷ್ಕರಕ್ಕೆ ಕರೆ ನೀಡಿದ್ದಾರೆ.

ಶೇಷಾದ್ರಿಪುರಂನ ಎಐಟಿಯುಸಿ ಕಚೇರಿಯಲ್ಲಿ ನಡೆದ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಾರಿಗೆ ನೌಕರರ ಜಂಟಿ ಕ್ರಿಯಾ ಸಮಿತಿಯ ಮುಖಂಡರು, ಸರ್ಕಾರ ನೌಕರರೊಂದಿಗೆ ಯಾವುದೇ ಚರ್ಚೆ ನಡೆಸದೆ ಏಕಪಕ್ಷೀಯವಾಗಿ ಆದೇಶ ಹೊರಡಿಸಿದೆ ಎಂದು ಆರೋಪಿಸಿದರು. ಇದರಿಂದ ಮೇ 20ರಂದು ಸರ್ಕಾರಿ ಬಸ್ ಸಂಚಾರದಲ್ಲಿ ವ್ಯತ್ಯಯ ಉಂಟಾಗುವ ಸಾಧ್ಯತೆ ಇದೆ.

ಸಭೆಯ ಬಳಿಕ ಮಾತನಾಡಿದ ನೌಕರರ ಮುಖಂಡ ವಿಜಯ್ ಭಾಸ್ಕರ್, “ಕೇವಲ ಶೇಕಡಾ 12.50ರಷ್ಟು ವೇತನ ಹೆಚ್ಚಳ ಮಾಡಿರುವುದು ತೃಪ್ತಿಕರವಾಗಿಲ್ಲ. ಕಳೆದ ಬಾರಿ ಶೇಕಡಾ 15ರಷ್ಟು ವೇತನ ಹೆಚ್ಚಳ ಮಾಡಲಾಗಿತ್ತು. ಈ ಬಾರಿ ಅದಕ್ಕಿಂತ ಕಡಿಮೆ ಪ್ರಮಾಣದ ಹೆಚ್ಚಳ ಘೋಷಿಸಲಾಗಿದೆ. ಸರ್ಕಾರ ನಮ್ಮೊಂದಿಗೆ ಚರ್ಚಿಸದೇ ಏಕಾಏಕಿ ಆದೇಶ ಹೊರಡಿಸಿದೆ. ಆದ್ದರಿಂದ ಬೇಡಿಕೆಗೆ ತಕ್ಕಂತೆ ವೇತನ ಹೆಚ್ಚಳ ಮಾಡುವವರೆಗೆ ಹೋರಾಟ ಮುಂದುವರಿಯಲಿದೆ” ಎಂದು ಹೇಳಿದರು.

ಅವರು ಮುಂದುವರೆದು, “ಮೇ 20ರಂದು ಸಾರಿಗೆ ನೌಕರರು ಕೆಲಸಕ್ಕೆ ಹಾಜರಾಗುವುದಿಲ್ಲ. ಸಾರ್ವಜನಿಕರು ನಮ್ಮ ಹೋರಾಟಕ್ಕೆ ಸಹಕಾರ ನೀಡಬೇಕು. ಈಗಾಗಲೇ ಎರಡು ಸಮಾವೇಶಗಳನ್ನು ನಡೆಸಿದ್ದು ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ನೌಕರರಲ್ಲಿ ಸಂಪೂರ್ಣ ಒಮ್ಮತವಿದೆ” ಎಂದರು.

“2024ರಿಂದ ಸಂಬಳ ಪರಿಷ್ಕರಣೆ ವಿಚಾರದಲ್ಲಿ ಯಾವುದೇ ರಾಜೀ ಇಲ್ಲ. ಸರ್ಕಾರ ನಮ್ಮನ್ನು ಕಡೆಗಣಿಸಿದೆ. ಎಸ್ಮಾ ಜಾರಿಗೊಳಿಸಿದರೂ ಈ ಬಾರಿ ಹಿಂದೇಟು ಹಾಕುವುದಿಲ್ಲ. ಅಮಾನತು ಮಾಡಿದರೂ ಪರವಾಗಿಲ್ಲ. ಖಾಸಗಿ ಬಸ್‌ಗಳನ್ನು ಓಡಿಸಿದರೂ ಸರ್ಕಾರಿ ಬಸ್‌ಗಳಿಗೆ ಇರುವ ಜನರ ನಂಬಿಕೆಯನ್ನು ಬದಲಾಯಿಸಲು ಸಾಧ್ಯವಿಲ್ಲ” ಎಂದು ಅವರು ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜ್ಯೋತಿ ಅನಂತ ಸುಬ್ಬರಾವ್, ದೇವರಾಜ್ ಅರಸು, ರೇವಪ್ಪ, ಗಂಡಸಿ ಸದಾನಂದ ಸ್ವಾಮಿ ಹಾಗೂ ಜಗದೀಶ್ ಉಪಸ್ಥಿತರಿದ್ದರು. ಅವರು ಮಾತನಾಡಿ, “ಶೇಕಡಾ 12.50ರಷ್ಟು ವೇತನ ಹೆಚ್ಚಳವನ್ನು ಒಪ್ಪುವುದಿಲ್ಲ. 2024ರ ಜನವರಿ 1ರಿಂದ ಜಾರಿಗೆ ಬರುವಂತೆ ವೇತನ ಪರಿಷ್ಕರಣೆ ಮಾಡಬೇಕು. 38 ತಿಂಗಳ ವೇತನ ಹಿಂಬಾಕಿ ನೀಡಬೇಕು. ಸರ್ಕಾರ ಕೇವಲ 26 ತಿಂಗಳ ಬಾಕಿ ನೀಡಲು ಆದೇಶಿಸಿದೆ. 2025ರ ಏಪ್ರಿಲ್ 1ರಿಂದ ಅನ್ವಯವಾಗುವ ಪರಿಷ್ಕರಣೆಯನ್ನು ನಾವು ತಿರಸ್ಕರಿಸುತ್ತೇವೆ” ಎಂದು ತಿಳಿಸಿದರು.

ಜಂಟಿ ಕ್ರಿಯಾ ಸಮಿತಿಯು ಈಗಾಗಲೇ ಮುಷ್ಕರಕ್ಕೆ ನೋಟಿಸ್ ನೀಡಿದ್ದು, ನಾಲ್ಕೂ ಸಾರಿಗೆ ನಿಗಮಗಳ ಸಿಬ್ಬಂದಿ ಹೋರಾಟದಲ್ಲಿ ಭಾಗಿಯಾಗಲಿದ್ದಾರೆ ಎಂದು ಘೋಷಿಸಿದೆ.

# ಒಬೆನ್ ಎಲೆಕ್ಟ್ರಿಕ್ ಶೋರೂಂನಲ್ಲಿ ಹೊಸ ಇವಿ ಪ್ರದರ್ಶನ

ಬೆಂಗಳೂರು




ಒಬೆನ್ ಎಲೆಕ್ಟ್ರಿಕ್ ತನ್ನ ಹೊಸದಾಗಿ ಬಿಡುಗಡೆಯಾದ “ನ್ಯೂ ರೋರ್ ಇವಿಒ” ಎಲೆಕ್ಟ್ರಿಕ್ ಮೋಟಾರ್ಸೈಕಲ್‌ಗಾಗಿ ಬೆಂಗಳೂರಿನ ಎಚ್‌ಎಸ್‌ಆರ್ ಲೇಔಟ್ನ ಪ್ರಮುಖ ಶೋರೂಂನಲ್ಲಿ ವಿಶೇಷ ಪ್ರದರ್ಶನ ಕಾರ್ಯಕ್ರಮವನ್ನು ಆಯೋಜಿಸಿದೆ.

ಭಾರತದ ವೇಗವಾಗಿ ಬೆಳೆಯುತ್ತಿರುವ ಆರ್ & ಡಿ ಆಧಾರಿತ ಎಲೆಕ್ಟ್ರಿಕ್ ಮೋಟಾರ್ಸೈಕಲ್ ತಯಾರಕರಾದ ಒಬೆನ್ ಎಲೆಕ್ಟ್ರಿಕ್ , ತನ್ನ ವಿಸ್ತರಣಾ ಕಾರ್ಯತಂತ್ರದಲ್ಲಿ ಕರ್ನಾಟಕ ಪ್ರಮುಖ ಪಾತ್ರವಹಿಸುತ್ತಿದೆ ಎಂದು ತಿಳಿಸಿದೆ.

2026ನೇ ಹಣಕಾಸು ವರ್ಷದಲ್ಲಿ ನ್ಯೂ ರೋರ್ ಇವಿಒ ಮೋಟಾರ್ಸೈಕಲ್ ಮಾರಾಟದ ಸುಮಾರು ಶೇ.30 ರಷ್ಟು ಪಾಲು ಕರ್ನಾಟಕದಿಂದಲೇ ಬರಲಿದೆ ಎಂಬ ನಿರೀಕ್ಷೆಯನ್ನು ಕಂಪನಿ ವ್ಯಕ್ತಪಡಿಸಿದೆ.

ರಾಜ್ಯದಲ್ಲಿ ಎಲೆಕ್ಟ್ರಿಕ್ ವಾಹನಗಳ ಅಳವಡಿಕೆ ಹೆಚ್ಚುತ್ತಿರುವುದು, ಪ್ರಾಯೋಗಿಕ ಇವಿ ಪರಿಹಾರಗಳತ್ತ ಗ್ರಾಹಕರ ಒಲವು ಹೆಚ್ಚುತ್ತಿರುವುದು ಹಾಗೂ ಕಂಪನಿಯ ಮೋಟಾರ್ಸೈಕಲ್‌ಗಳಿಗೆ ಉತ್ತಮ ಬೇಡಿಕೆ ಇರುವುದೇ ಈ ಬೆಳವಣಿಗೆಗೆ ಕಾರಣವಾಗಿದೆ ಎಂದು ಕಂಪನಿ ಹೇಳಿದೆ.

ಕಳೆದ ಹಣಕಾಸು ವರ್ಷದಲ್ಲಿ ಕರ್ನಾಟಕವು ಕಂಪನಿಯ ಒಟ್ಟು ಮಾರಾಟದಲ್ಲಿ ಶೇ.20 ಕ್ಕಿಂತ ಹೆಚ್ಚು ಕೊಡುಗೆ ನೀಡಿದ್ದು, ಇದು ಒಬೆನ್ ಎಲೆಕ್ಟ್ರಿಕ್‌ನ ಅತ್ಯಂತ ಬಲಿಷ್ಠ ಮಾರುಕಟ್ಟೆಗಳಲ್ಲಿ ಒಂದಾಗಿದೆ. ಇದೇ ಅವಧಿಯಲ್ಲಿ ಕಂಪನಿ ಕರ್ನಾಟಕದಲ್ಲಿ ಅತಿ ಹೆಚ್ಚು ಮಾರಾಟವಾದ ಎಲೆಕ್ಟ್ರಿಕ್ ಮೋಟಾರ್ಸೈಕಲ್ ಬ್ರಾಂಡ್ ಆಗಿ ಹೊರಹೊಮ್ಮಿದೆ ಎಂದು ತಿಳಿಸಲಾಗಿದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಮಧುಮಿತಾ ಅಗರ್ವಾಲ್, “ಕರ್ನಾಟಕವು ಒಬೆನ್ ಎಲೆಕ್ಟ್ರಿಕ್‌ಗೆ ಅತ್ಯಂತ ಕಾರ್ಯತಂತ್ರದ ಮಾರುಕಟ್ಟೆಗಳಲ್ಲಿ ಒಂದಾಗಿದೆ. ಇದು ಕೇವಲ ಮಾರಾಟದ ದೃಷ್ಟಿಯಿಂದ ಮಾತ್ರವಲ್ಲ, ನಮ್ಮ ನಾವೀನ್ಯತೆ ಮತ್ತು ಉತ್ಪಾದನಾ ಪರಿಸರ ವ್ಯವಸ್ಥೆಯ ಪ್ರಮುಖ ಅಡಿಪಾಯವೂ ಆಗಿದೆ. ಬೆಂಗಳೂರು ನಮ್ಮ ಬೆಳವಣಿಗೆಯಲ್ಲಿ ಮಹತ್ವದ ಪಾತ್ರವಹಿಸಿದೆ.

ನ್ಯೂ ರೋರ್ ಇವಿಒ ಮೂಲಕ ವಿನ್ಯಾಸ, ಕಾರ್ಯಕ್ಷಮತೆ, ಪ್ರಾಯೋಗಿಕತೆ ಮತ್ತು ತಂತ್ರಜ್ಞಾನವನ್ನು ಒಟ್ಟುಗೂಡಿಸಿದ ಶಕ್ತಿಶಾಲಿ ಮೋಟಾರ್ಸೈಕಲ್ ಅನ್ನು ಗ್ರಾಹಕರಿಗೆ ನೀಡುವ ಬದ್ಧತೆಯನ್ನು ಮತ್ತಷ್ಟು ಬಲಪಡಿಸುತ್ತಿದ್ದೇವೆ” ಎಂದು ಹೇಳಿದರು.

# ಅಜಿತ್ ಪವಾರ್ ವಿಮಾನ ಪತನ ಸ್ಥಳದಲ್ಲೇ ಮತ್ತೊಂದು ವಿಮಾನ ಪತನ

ಮುಂಬೈ

ಮಹಾರಾಷ್ಟ್ರದ ಬಾರಾಮತಿಯಲ್ಲಿ ಮತ್ತೆ ವಿಮಾನ ದುರಂತ ಸಂಭವಿಸಿದೆ. ಈ ವರ್ಷದ ಆರಂಭದಲ್ಲಿ ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರಿದ್ದ ವಿಮಾನ ಅಪಘಾತಕ್ಕೀಡಾಗಿದ್ದ ಅದೇ ಗ್ರಾಮದ ವ್ಯಾಪ್ತಿಯಲ್ಲೇ ಬುಧವಾರ ತರಬೇತಿ ವಿಮಾನವೊಂದು ಪತನಗೊಂಡಿರುವುದು ಆತಂಕಕ್ಕೆ ಕಾರಣವಾಗಿದೆ.

ಬಾರಾಮತಿಯ ಗೋಜ್‌ಬಾಬಿ ಗ್ರಾಮದ ಬಳಿ ತರಬೇತಿ ನಿರತ ವಿಮಾನ ಪತನಗೊಂಡಿದ್ದು, ಸ್ಥಳೀಯರಲ್ಲಿ ಆತಂಕ ಮೂಡಿಸಿದೆ. ಇದು ‘ರೆಡ್‌ಬರ್ಡ್’ ವಿಮಾನಯಾನ ಸಂಸ್ಥೆಗೆ ಸೇರಿದ ತರಬೇತಿ ವಿಮಾನವಾಗಿದ್ದು, ಹಾರಾಟದ ವೇಳೆ ತಾಂತ್ರಿಕ ದೋಷ ಕಾಣಿಸಿಕೊಂಡು ಪತನವಾಗಿದೆ ಎಂಬುದು ತಿಳಿದುಬಂದಿದೆ. ವಿಮಾನಕ್ಕೆ ಭಾರಿ ಹಾನಿಯಾಗಿದೆ. ಆದಾಗ್ಯೂ ಪೈಲಟ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಇದೇ ವರ್ಷದ ಜನವರಿ 28 ರಂದು ಮಹಾರಾಷ್ಟ್ರದ ಪ್ರಭಾವಿ ನಾಯಕ ಅಜಿತ್ ಪವಾರ್ ಅವರಿದ್ದ ಚಾರ್ಟರ್ ವಿಮಾನವು ಇದೇ ಗ್ರಾಮದ ವ್ಯಾಪ್ತಿಯಲ್ಲಿ ಪತನಗೊಂಡಿತ್ತು. ಆ ಭೀಕರ ದುರಂತದಲ್ಲಿ ಅಜಿತ್ ಪವಾರ್ ಸೇರಿದಂತೆ ಐವರು ಸ್ಥಳದಲ್ಲೇ ಸಾವನ್ನಪ್ಪಿದ್ದರು. ಅಜಿತ್ ಪವಾರ್ ಮೃತಪಟ್ಟ ಅದೇ ಸ್ಥಳದಲ್ಲಿ ಈಗ ಮತ್ತೊಂದು ವಿಮಾನ ಬಿದ್ದಿರುವುದು ಹಲವು ಅನುಮಾನಗಳಿಗೆ ದಾರಿ ಮಾಡಿಕೊಟ್ಟಿದೆ.

ಬಾರಾಮತಿಯಲ್ಲಿ ಪೈಲಟ್ ತರಬೇತಿ ನೀಡುವ ಪ್ರಮುಖ ಸಂಸ್ಥೆಗಳಲ್ಲಿ ರೆಡ್‌ಬರ್ಡ್ ಕೂಡ ಒಂದು. ಆದರೆ, ಈ ಹಿಂದೆಯೂ ಈ ಸಂಸ್ಥೆಯ ವಿಮಾನಗಳು ಪದೇ ಪದೇ ಅಪಘಾತಕ್ಕೀಡಾಗಿದ್ದರಿಂದ ಇದರ ಮೇಲೆ ನಿಷೇಧ ಹೇರಲಾಗಿತ್ತು. ಇಲ್ಲಿನ ರನ್‌ವೇಗಳು ‘ಟೇಬಲ್ ಟಾಪ್’ ಮಾದರಿಯಲ್ಲಿದ್ದು, ಲ್ಯಾಂಡಿಂಗ್ ಸಮಯದಲ್ಲಿ ಪೈಲಟ್‌ಗಳ ಜಾಣ್ಮೆ ಅತ್ಯಂತ ಮುಖ್ಯವಾಗಿರುತ್ತದೆ ಎಂದು ಎನ್‌ಸಿಪಿ ಶಾಸಕ ಅನಿಲ್ ಪಾಟೀಲ್ ಅಭಿಪ್ರಾಯಪಟ್ಟಿದ್ದಾರೆ. ಸದ್ಯ ಘಟನೆ ಬಗ್ಗೆ ಡಿಜಿಸಿಎ ತನಿಖೆ ಆರಂಭಿಸಿದೆ.

# ಪ್ಯಾನ್ ಐಐಟಿ ಬೆಂಗಳೂರು ಸಮಿಟ್ 2026ಕ್ಕೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಚಾಲನೆ

ಬೆಂಗಳೂರು

ಕರ್ನಾಟಕ ಸರ್ಕಾರದ ಸಹಯೋಗದಲ್ಲಿ ಪ್ಯಾನ್ ಐಐಟಿ ಅಲುಮ್ನಿ ಇಂಡಿಯಾ ಅಸೋಸಿಯೇಷನ್ ಆಯೋಜಿಸುತ್ತಿರುವ “ಪ್ಯಾನ್ ಐಐಟಿ ಬೆಂಗಳೂರು ಸಮಿಟ್ 2026” ಅನ್ನು ಮೇ 16ರಂದು ಬೆಂಗಳೂರಿನ ತಾಜ್ ಯಶವಂತಪುರದಲ್ಲಿ ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಉದ್ಘಾಟಿ ಸಲಿದ್ದಾರೆ.

ಭಾರತದ ಪ್ರಮುಖ ಎಐ ಮತ್ತು ಡೀಪ್-ಟೆಕ್ ನಾಯಕತ್ವ ಶೃಂಗವೆಂದು ಗುರುತಿಸ ಲ್ಪಟ್ಟಿರುವ ಈ ಸಮಾವೇಶದಲ್ಲಿ 2,000ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. 250ಕ್ಕೂ ಹೆಚ್ಚು ಸ್ಟಾರ್ಟ್‌ಅಪ್ ಸಂಸ್ಥಾಪಕರು, 120ಕ್ಕೂ ಹೆಚ್ಚು ಹೂಡಿಕೆದಾರರು ಹಾಗೂ ದೇಶದ 23 ಐಐಟಿಗಳ ಜಾಗತಿಕ ಜಾಲತಾಣದ 5 ಲಕ್ಷಕ್ಕೂ ಅಧಿಕ ಅಲುಮ್ನಿ ಸದಸ್ಯರಲ್ಲಿ ಪ್ರಮುಖರು ಈ ಕಾರ್ಯಕ್ರಮದಲ್ಲಿ ಒಂದೇ ವೇದಿಕೆಯಲ್ಲಿ ಸೇರುವ ನಿರೀಕ್ಷೆಯಿದೆ.

ಈ ಬಾರಿಯ ಶೃಂಗಸಭೆಯ ವಿಷಯ “ತಂತ್ರಜ್ಞಾನದಲ್ಲಿ ಸಾರ್ವಭೌಮತೆ” ಆಗಿದೆ. ಜಾಗತಿಕ ಎಐ ಕ್ಷೇತ್ರದಲ್ಲಿ ಭಾರತ ತನ್ನ ಪಾತ್ರವನ್ನು ಬಲಪಡಿಸಬೇಕಾದ ಅಗತ್ಯವನ್ನು ಈ ಶೃಂಗ ಒತ್ತಿಹೇಳುತ್ತಿದೆ. ಕಾನ್ಸೆಪ್ಟ್ ನೋಟ್ ಪ್ರಕಾರ, ಜಾಗತಿಕ ಎಐ ಪ್ರತಿಭೆಯಲ್ಲಿ ಭಾರತ ಶೇ.16ರಷ್ಟು ಕೊಡುಗೆ ನೀಡುತ್ತಿದ್ದರೂ, ಸಂಶೋಧನೆ ಮತ್ತು ಅಭಿವೃದ್ಧಿಗೆ ದೇಶದ ಜಿಡಿಪಿಯ ಕೇವಲ ಶೇ.0.7ರಷ್ಟು ಮಾತ್ರ ವೆಚ್ಚ ಮಾಡಲಾಗುತ್ತಿದೆ. ಇದರ ಪರಿಣಾಮವಾಗಿ ಪ್ರತಿಭೆ ಮತ್ತು ತಂತ್ರಜ್ಞಾನ ಮಾಲೀಕತ್ವದ ನಡುವೆ ಅಂತರ ಉಂಟಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಲಾಗಿದೆ.

# ನೆನೆಗುದಿಗೆ ಬಿದ್ದಿದ್ದ ಹೊಸಹಳ್ಳಿ ರಸ್ತೆಗೆ ಕೊನೆಗೂ ಡಾಂಬರ್ ಭಾಗ್ಯ

ದೊಡ್ಡಬಳ್ಳಾಪುರ



ಸಾಸಲು-ಆರೂಢಿ ಭಾಗದ ಜನರ ಪ್ರಮುಖ ಸಂಪರ್ಕ ಮಾರ್ಗವಾಗಿರುವ ಗುಂಡಮಗೆರೆ-ಹೊಸಹಳ್ಳಿ ರಸ್ತೆ ಕಾಮಗಾರಿ ಕೊನೆಗೂ ಮತ್ತೆ ಆರಂಭಗೊಂಡಿದ್ದು, ರಸ್ತೆ ಡಾಂಬರೀಕರಣ ಕಾರ್ಯಕ್ಕೆ ಚಾಲನೆ ದೊರೆತ ಹಿನ್ನೆಲೆಯಲ್ಲಿ ಗ್ರಾಮಸ್ಥರಲ್ಲಿ ಸಂತಸ ವ್ಯಕ್ತವಾಗಿದೆ.

ರಸ್ತೆ ಅಭಿವೃದ್ಧಿ ಕಾಮಗಾರಿ ಆರಂಭವಾಗಿ ಜಲ್ಲಿ ಕಲ್ಲು ಹಾಸಿದ ಬಳಿಕ ಗುತ್ತಿಗೆದಾರರ ತಾಂತ್ರಿಕ ಕಾರಣಗಳಿಂದ ಕಾಮಗಾರಿ ಅರ್ಧಕ್ಕೆ ನಿಂತಿತ್ತು. ಇದರಿಂದ ವಾಹನ ಸವಾರರು, ರೈತರು ಹಾಗೂ ವಿದ್ಯಾರ್ಥಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದರು.

ಸ್ಥಳೀಯರು ಮತ್ತು ಪತ್ರಿಕೆಗಳು ನಿರಂತರವಾಗಿ ಸಮಸ್ಯೆಯನ್ನು ಪ್ರಸ್ತಾಪಿಸಿದ ಬಳಿಕ ಗುತ್ತಿಗೆದಾರರು ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಎಚ್ಚೆತ್ತುಕೊಂಡು ರಸ್ತೆ ಕಾಮಗಾರಿಯನ್ನು ಪುನರಾರಂಭಿಸಿದ್ದಾರೆ.

2025ರ ಅಕ್ಟೋಬರ್ 24ರಂದು ಕಾಮಗಾರಿಗೆ ಚಾಲನೆ ನೀಡಲಾಗಿದ್ದರೂ ಹಲವು ತಿಂಗಳುಗಳಿಂದ ರಸ್ತೆ ಅಪೂರ್ಣವಾಗಿಯೇ ಉಳಿದಿತ್ತು. ರಸ್ತೆ ಮೇಲೆ ಜಲ್ಲಿಕಲ್ಲು ಹಾಸಿ ಬಿಟ್ಟಿದ್ದರಿಂದ ಧೂಳು ಹೆಚ್ಚಾಗಿ ಸಾರ್ವಜನಿಕರಿಗೆ ಸಂಚಾರ ದುಸ್ತರವಾಗಿತ್ತು.

ಈ ಕುರಿತು ಗ್ರಾಮಸ್ಥರು ಹಲವು ಬಾರಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಳ್ಳಲಾಗಿರಲಿಲ್ಲ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ದೊಡ್ಡಹಳ್ಳ ಸಮೀಪದಿಂದ ಗುಂಡಮಗೆರೆ-ಹೊಸಹಳ್ಳಿ ಮಾರ್ಗವಾಗಿ ಸಾಗುವ ಈ ರಸ್ತೆ ರೈತರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರ ದೈನಂದಿನ ಸಂಚಾರಕ್ಕೆ ಪ್ರಮುಖ ಸಂಪರ್ಕ ಮಾರ್ಗವಾಗಿದೆ.

ಸುಮಾರು 3.5 ಕಿಲೋಮೀಟರ್ ಉದ್ದದ ರಸ್ತೆ ಡಾಂಬರೀಕರಣ ಕಾಮಗಾರಿ ಇದೀಗ ವೇಗ ಪಡೆದುಕೊಂಡಿದ್ದು, ಶೀಘ್ರದಲ್ಲೇ ಗುಣಮಟ್ಟದ ರಸ್ತೆ ನಿರ್ಮಾಣ ಪೂರ್ಣಗೊಳ್ಳುವ ನಿರೀಕ್ಷೆ ವ್ಯಕ್ತವಾಗಿದೆ.

ಡಾಂಬರೀಕರಣ ಕಾಮಗಾರಿ ಆರಂಭವಾದ ಹಿನ್ನೆಲೆಯಲ್ಲಿ ಗ್ರಾಮಸ್ಥರು ಸಂತಸ ವ್ಯಕ್ತಪಡಿಸಿದ್ದು, ರಸ್ತೆ ಕಾಮಗಾರಿಯನ್ನು ಗುಣಮಟ್ಟದಿಂದ ಹಾಗೂ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಒತ್ತಾಯಿಸಿದ್ದಾರೆ.

# ಸಾಧನಾ ಸಮಾವೇಶಕ್ಕೆ ಮಧುಗಿರಿಯಿಂದ 250 ಬಸ್ ನಿಯೋಜನೆ

ಮಧುಗಿರಿ



ಮೇ 20ರಂದು ತುಮಕೂರಿನಲ್ಲಿ ನಡೆಯಲಿರುವ ಕಾಂಗ್ರೆಸ್ ಸರ್ಕಾರದ ಸಾಧನಾ ಸಮಾವೇಶಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮಿಸಲಿದ್ದು, ಮಧುಗಿರಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರನ್ನು ಕರೆತರಲು 250ಕ್ಕೂ ಅಧಿಕ ಬಸ್‌ಗಳನ್ನು ನಿಯೋಜಿಸಲಾಗಿದೆ ಎಂದು ಶಾಸಕ ಕೆ.ಎನ್. ರಾಜಣ್ಣ ಹೇಳಿದರು.

ತಾಲೂಕು ಪಂಚಾಯಿತಿ ಆವರಣದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮದಿಂದ 20 ಅರ್ಹ ಫಲಾನುಭವಿಗಳಿಗೆ ಉಚಿತ ಹೊಲಿಗೆ ಯಂತ್ರ ವಿತರಿಸಿದ ಬಳಿಕ ನಡೆದ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಅಧಿಕಾರಿಗಳು ಕಾರ್ಯಕ್ರಮದ ದಿನ ಬೆಳಿಗ್ಗೆಯೇ ಜನರನ್ನು ಸಮಯಕ್ಕೆ ಸರಿಯಾಗಿ ಕರೆತರಬೇಕು. ಇದು ಸರ್ಕಾರದ ಸಾಧನಾ ಸಮಾವೇಶವಾಗಿದ್ದು, ಆಗಮಿಸುವ ಜನರು ಮೀಸಲಾದ ಆಸನಗಳಲ್ಲಿ ಕುಳಿತು ಕಾರ್ಯಕ್ರಮ ವೀಕ್ಷಿಸಬೇಕು. ಸಮಾರಂಭ ಮುಗಿಯುವವರೆಗೆ ಯಾರೂ ಮಧ್ಯದಲ್ಲಿ ತೆರಳಬಾರದು. ಬಳಿಕ ಅವರನ್ನು ಸುರಕ್ಷಿತವಾಗಿ ತಮ್ಮ ತಮ್ಮ ಗ್ರಾಮಗಳಿಗೆ ತಲುಪಿಸುವ ಜವಾಬ್ದಾರಿಯೂ ಅಧಿಕಾರಿಗಳದ್ದೇ ಎಂದು ಹೇಳಿದರು.

ಈ ನಿಟ್ಟಿನಲ್ಲಿ ಯಾವುದೇ ತೊಂದರೆ ಆಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮ ಕೈಗೊಂಡು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸೂಚಿಸಿದರು.

ತಮಿಳುನಾಡಿನ ನೂತನ ಮುಖ್ಯಮಂತ್ರಿ ವಿಜಯ್ ಅವರು ಕರ್ನಾಟಕ ಮಾದರಿಯ ಉಚಿತ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿರುವ ಕುರಿತು ಪ್ರತಿಕ್ರಿಯಿಸಿದ ಶಾಸಕ ರಾಜಣ್ಣ, ವಿಜಯ್ ಅವರ ಹಾದಿ ಮುಳ್ಳಿನ ಹಾದಿಯಾಗಿದ್ದು, ಎಚ್ಚರಿಕೆಯಿಂದ ಹೆಜ್ಜೆ ಇಡಬೇಕು ಎಂದು ಸಲಹೆ ನೀಡಿದರು.

ರಾಜ್ಯಕ್ಕೆ ಆದಾಯ ತಂದುಕೊಡುವ 700 ಮದ್ಯ ಮಳಿಗೆಗಳನ್ನು ತಕ್ಷಣವೇ ಮುಚ್ಚುವ ನಿರ್ಧಾರ ಆತುರದ ಕ್ರಮವಾಗಿದೆ. ಆಡಳಿತಾತ್ಮಕ ಅನುಭವದ ಕೊರತೆಯಿಂದ ಭಾವಾವೇಶದಲ್ಲಿ ಭರವಸೆಗಳನ್ನು ನೀಡಿದ್ದಾರೆ. ಮುಂದಿನ ಸವಾಲುಗಳನ್ನು ಅವರು ಹೇಗೆ ಎದುರಿಸುತ್ತಾರೋ ಕಾದು ನೋಡಬೇಕು ಎಂದರು. ಪಟ್ಟಣದಲ್ಲಿ ಲೋಕೋಪಯೋಗಿ ಇಲಾಖೆಯಿಂದ ದ್ವಿಪಥ ರಸ್ತೆ ಹಾಗೂ ಚರಂಡಿ ಕಾಮಗಾರಿಗಳು ನಡೆಯುತ್ತಿದ್ದು, ಅಧಿಕಾರಿಗಳು ವೇಗವಾಗಿ ಕಾಮಗಾರಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ತೊಂದರೆ ಆಗದಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಧೂಳು ಏಳದಂತೆ ರಸ್ತೆಗಳಿಗೆ ನೀರು ಸಿಂಪಡಿಸಿ ಕಾಮಗಾರಿ ನಡೆಸುವಂತೆ ಎಂಜಿನಿಯರ್‌ಗಳಿಗೆ ನಿರ್ದೇಶನ ನೀಡಿದರು.

ಪಟ್ಟಣದಲ್ಲಿ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಪರ್ಯಾಯ ಮಾರ್ಗಗಳನ್ನು ಬಳಸಿಕೊಂಡು ಸಹಕರಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ, ತಹಶೀಲ್ದಾರ್ ಶ್ರೀನಿವಾಸ್, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಲಕ್ಷ್ಮಣ್, ಸಹಾಯಕ ಅಧಿಕಾರಿ ಧನಂಜಯ್, ದೇವರಾಜ ಅರಸು ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ವೆಂಕಟರಾಜು, ಅಧಿಕಾರಿ ಕಲ್ಪನಾ ಭಾಯಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಜಯರಾಮ್, ಲೋಕೋಪಯೋಗಿ ಇಲಾಖೆಯ ಹನುಂತರಾವ್ ಹಾಗೂ ಸಂಪತ್ ಕುಮಾರ್, ಸಾರಿಗೆ ಸಂಸ್ಥೆ ವ್ಯವಸ್ಥಾಪಕ ಕಾಂತರಾಜು, ಪುರಸಭೆ ಮುಖ್ಯಾಧಿಕಾರಿ ಎಸ್. ಸುರೇಶ್, ಮಾಜಿ ಅಧ್ಯಕ್ಷ ಎನ್. ಗಂಗಣ್ಣ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋಪಾಲಯ್ಯ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

15/05/2026

ಭಾರತ ಸಾರಥಿ

BHARATHA SARATHI KANNADA DAILY NEWS PAPER



## ಬೆಂಗಳೂರು ನಾಗರಿಕರಿಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಂದ ಭೂ ಗ್ಯಾರಂಟಿ ಘೋಷಣೆ

# ‘ಬಿ’ಯಿಂದ‘ಎ’ ಖಾತೆಗೆ ರಿಯಾಯಿತಿ ಯೋಜನೆ; ಬಳಸಿಕೊಳ್ಳದಿದ್ದರೆ ಕಾನೂನು ಕ್ರಮದ ಎಚ್ಚರಿಕೆ




ಬೆಂಗಳೂರು

“ಕಾಂಗ್ರೆಸ್ ಸರ್ಕಾರದ 6ನೇ ಗ್ಯಾರಂಟಿಯಾದ ‘ಭೂ ಗ್ಯಾರಂಟಿ’ ಮೂಲಕ ಬೆಂಗಳೂರು ನಾಗರಿಕರಿಗೆ ‘ಇ’ ಖಾತಾ ವಿತರಣೆ, ಕಟ್ಟಡ ಉಲ್ಲಂಘನೆ ವಿನಾಯಿತಿ ಮಿತಿ ಶೇ.5 ರಿಂದ ಶೇ.15ಕ್ಕೆ ಹೆಚ್ಚಳ, 100 ದಿನದಲ್ಲಿ ‘ಎ’ ಯಿಂದ ‘ಬಿ’ ಖಾತಾ ಶುಲ್ಕ ಪಾವತಿಸಿದರೆ ಶೇ. 60 ರಷ್ಟು ರಿಯಾಯಿತಿ, ಶಿವರಾಂ ಕಾರಂತ ಬಡಾವಣೆಯ ಭೂ ಮಾಲೀಕರಿಗೆ 18 ಸಾವಿರ ನಿವೇಶನ ಹಂಚಿಕೆ, ‘ಗ್ರೀನ್ ಬೆಂಗಳೂರು’ ಕಾರ್ಯಕ್ರಮ, ಬಿಡಿಎ ಮನೆಗಳ ಮಾರಾಟ ಸೇರಿದಂತೆ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರಿನ ನಾಗರಿಕರಿಗೆ ಹತ್ತು ಹಲವು ಕಾರ್ಯಕ್ರಮಗಳನ್ನು ಬಂಪರ್ ಕೊಡುಗೆಯಾಗಿ ಘೋಷಿಸಿದ್ದಾರೆ.

ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಕೇಂದ್ರ ಕಚೇರಿಯಲ್ಲಿ ಬುಧವಾರ ಮಾಧ್ಯಮಗೋಷ್ಠಿ ನಡೆಸಿ ಬೆಂಗಳೂರು ಅನೇಕ ನಾಗರಿಕಸ್ನೇಹಿ ಘೋಷಣೆಗಳನ್ನು ಮಾಡಿದರು.

“ಬೆಂಗಳೂರು ಅಭಿವೃದ್ಧಿಗೆ ಸುಮಾರು 150 ಯೋಜನೆಗಳಿದ್ದು ಮುಂದಿನ ಮೂರು ನಾಲ್ಕು ದಿನಗಳಲ್ಲಿ ಈ ಬಗ್ಗೆ ಪ್ರತ್ಯೇಕ ಮಾಹಿತಿ ನೀಡಲಾಗುವುದು. ಮೊದಲಿಗೆ ‘ನನ್ನ ಖಾತೆ, ನನ್ನ ಹಕ್ಕು’ ಅಭಿಯಾನ ಮೂರು ತಿಂಗಳ ಕಾಲ ಶನಿವಾರ ನಡೆಯಲಿದೆ. “ಪ್ರತಿ ಶನಿವಾರ ಬೆಂಗಳೂರಿನ ಐದು ಪಾಲಿಕೆಗಳ ವ್ಯಾಪ್ತಿಯಲ್ಲಿ ತಲಾ 10 ರಂತೆ 50 ಸ್ಥಳಗಳಲ್ಲಿ ಈ ಅಭಿಯಾನ (ಇ-ಖಾತಾ ಸಿಟಿಜನ್ ಓಪನ್ ಹೌಸ್) ಕಾರ್ಯಕ್ರಮ ನಡೆಯಲಿದೆ. ಮೇ 16 ರಿಂದ ಇದಕ್ಕೆ ಚಾಲನೆ ನೀಡಲಾಗುವುದು. ಬೆಳಿಗ್ಗೆ 10ಕ್ಕೆ ಪ್ರಾರಂಭವಾಗಿ ಸಂಜೆವರೆಗೆ ನಡೆಯುವ ಈ ಅಭಿಯಾನದ ಸ್ಥಳಗಳನ್ನು ಮುಂಚಿತವಾಗಿ ತಿಳಿಸಲಾಗುವುದು” ಎಂದರು.

ಭೂ ಗ್ಯಾರಂಟಿ; ಬೆಂಗಳೂರಿನ ನಾಗರಿಕರಿಗೆ ಸುರಕ್ಷಿತ ಡಿಜಿಟಲ್ ಆಸ್ತಿ ಹಕ್ಕು: “ನಾವು ಜಾರಿಗೆ ತಂದಿರುವ ‘ಇ’ ಖಾತಾ ಆಂದೋಲನ ಭಾರತದ ಅತಿದೊಡ್ಡ ಸಮಗ್ರ ಡಿಜಿಟಲ್ ನಗರ ಆಸ್ತಿ ದಾಖಲೆ ವ್ಯವಸ್ಥೆಯಾಗಿದ್ದು , 23 ಲಕ್ಷಕ್ಕೂ ಅಧಿಕ ಆಸ್ತಿ ದಾಖಲೆಗಳನ್ನು ಆನ್ಲೈನ್ ಮೂಲಕ ನೇರವಾಗಿ ನಾಗರಿಕರ ಕೈಗೆ ತಲುಪಿಸಿದೆ. ಹಳೆಯ, ಅಸ್ಪಷ್ಟ ಹಾಗೂ ಕೈಪಿಡಿ ವ್ಯವಸ್ಥೆಯನ್ನು https://BBMPeAasthi.karnataka.gov.in ರಲ್ಲಿ ಪಡೆದುಕೊಳ್ಳಬಹುದು” ಎಂದರು.

“ನಗರದಲ್ಲಿ ದಾಖಲೆಗಳು ಸರಿ ಇರುವ ಸುಮಾರು 16 ಲಕ್ಷ ‘ಎ’ ಖಾತೆಗಳಿವೆ. 7 ಲಕ್ಷ ‘ಬಿ’ ಖಾತೆಗಳಿವೆ. “ಭೂ ಗ್ಯಾರಂಟಿ”ಮೂಲಕ ಬೆಂಗಳೂರಿನ ಪ್ರತಿಯೊಬ್ಬ ನೈಜ ಆಸ್ತಿ ಮಾಲೀಕರಿಗೂ ಸುರಕ್ಷಿತ, ವಿಶ್ವಾಸಾರ್ಹ ಹಾಗೂ ಎಲ್ಲೆಡೆಯೂ ಲಭ್ಯವಾಗುವ ಡಿಜಿಟಲ್ ಆಸ್ತಿ ದಾಖಲೆಗಳನ್ನು ಒದಗಿಸಲಾಗುವುದು. ಇದನ್ನು ಪಾರದರ್ಶಕ, ಸುರಕ್ಷಿತ ಹಾಗೂ ನಾಗರಿಕ ಕೇಂದ್ರಿತ ಡಿಜಿಟಲ್ ಸ್ವರೂಪಕ್ಕೆ ಪರಿವರ್ತಿಸಲಾಗಿದೆ” ಎಂದರು.

100 ದಿನಗಳಲ್ಲಿ ಶುಲ್ಕ ಪಾವತಿ ಮಾಡಿದರೆ ಶೇ.60 ರಷ್ಟು ರಿಯಾಯಿತಿ: ‘ಬಿ’ ಖಾತೆಯಿಂದ ‘ಎ’ ಖಾತೆ ಬದಲಾವಣೆಗೆ ಅರ್ಜಿ ಸಲ್ಲಿಸಿದ್ದವರು ದಾಖಲೆಗಳನ್ನು ಸರಿಯಾಗಿ ನೀಡಿದ್ದರೆ ಈಗ ಗೈಡೆನ್ಸ್ ವ್ಯಾಲ್ಯೂನ ಶೇ.5ರಷ್ಟನ್ನು ಕಟ್ಟಬೇಕಿದೆ. ಆದರೆ 100 ದಿನಗಳ ಒಳಗಾಗಿ ಶುಲ್ಕ ಪಾವತಿಸಿದರೆ ಶೇ.2ರಷ್ಟು ಕಟ್ಟಿದರೆ ಸಾಕು. ಅಂದರೆ ಶೇ.60 ರಷ್ಟು ರಿಯಾಯಿತಿ ನೀಡಲಾಗುತ್ತಿದೆ. ಅಂದರೆ 1 ಕೋಟಿ ಆಸ್ತಿಯ ಬೆಲೆ ಇದ್ದರೆ 5 ಲಕ್ಷ ಶುಲ್ಕ ಪಾವತಿ ಮಾಡಬೇಕಿತ್ತು. ಈಗ 2 ಲಕ್ಷ ಕಟ್ಟಿದರೆ ಸಾಕು. ಇದರಿಂದ 7 ಲಕ್ಷ ಆಸ್ತಿ ಮಾಲೀಕರಿಗೆ ಉಪಯೋಗವಾಗಲಿದೆ” ಎಂದರು.

“100 ದಿನಗಳಲ್ಲಿ ಇದರ ಉಪಯೋಗ ಪಡೆಯಲಿಲ್ಲ ಎಂದರೆ ನಂತರ ಶೇ.5 ರಷ್ಟೇ ಶುಲ್ಕ ಪಾವತಿ ಮಾಡಬೇಕಾಗುತ್ತದೆ. ಪ್ರತಿಯೊಂದು ಆಸ್ತಿ ದಾಖಲೆಗಳಲ್ಲಿ ಜಿಪಿಎಸ್, ಮಾಲೀಕರ ಫೋಟೋ ಇರುತ್ತದೆ. ಒಂದೇ ಒಂದು ರೂಪಾಯಿ ಲಂಚ ಇಲ್ಲದಂತೆ ಮನೆ ಬಾಗಿಲಿಗೆ ದಾಖಲೆಗಳನ್ನು ತಲುಪಿಸುವ ವ್ಯವಸ್ಥೆ ಮಾಡಲಾಗಿದೆ. ಗ್ಯಾರಂಟಿ ಅನುಷ್ಠಾನ ಸಮಿತಿಯವರು, ಅಧಿಕಾರಿಗಳು ಇದರ ಜವಾಬ್ದಾರಿ ಹೊತ್ತಿರುತ್ತಾರೆ. ಜೊತೆಗೆ ಆನ್ ಲೈನ್ ಅಲ್ಲೂ ಡೌನ್‌ಲೋಡ್ ಮಾಡಿಕೊಳ್ಳಬಹುದು” ಎಂದರು.

“ಈ ಯೋಜನೆ ಬಗ್ಗೆ ಪ್ರತಿ ಮನೆಗೂ ಮಾಹಿತಿ ತಲುಪಿಸಲಾಗುವುದು. ವಾಟ್ಸಪ್ ಸೇರಿದಂತೆ ಇತರೇ ಮಾಧ್ಯಮಗಳ ಮೂಲಕ ಮಾಹಿತಿ ರವಾನಿಸಲಾಗುವುದು. ಇಂಗ್ಲೀಷ್ ಹಾಗೂ ಕನ್ನಡದಲ್ಲಿ ಮಾಹಿತಿ ನೀಡಲಾಗುವುದು. ದಾಖಲೆಗಳು ಕನ್ನಡದಲ್ಲಿ ಇರುತ್ತವೆ” ಎಂದರು.

2020ರಲ್ಲಿ ಬಿಜೆಪಿ ಸರ್ಕಾರ ‘38 ಡಿ’ ಎನ್ನುವ ಕಾನೂನು ಜಾರಿಗೆ ತಂದಿತ್ತು. ಸುಮಾರು 1 ಲಕ್ಷಕ್ಕೂ ಹೆಚ್ಚು ಜನ ಬಿಡಿಎ ಲೇಔಟ್‌ಗಳಲ್ಲಿ ಮನೆಗಳನ್ನು ಕಟ್ಟಿಕೊಂಡಿದ್ದರು. ಇದರಲ್ಲಿ 570 ಜನ ಮಾತ್ರ ಅರ್ಜಿ ಸಲ್ಲಿಸಿದ್ದರು. 200 ರಿಂದ 600 ಅಡಿವರೆಗೆ ಶೇ.10 ರಷ್ಟು, 600 ರಿಂದ 900 ಅಡಿವರೆಗೆ ಶೇ.25 ರಷ್ಟು, 1200 ರಿಂದ 2400 ವರೆಗೆ ಶೇ.40 ರಷ್ಟು, 2400 ರಿಂದ 4000 ವರೆಗೂ ಶೇ.50ರಷ್ಟು ಗೈಡೆನ್ಸ್ ವ್ಯಾಲ್ಯೂ ಮೇಲೆ ಶುಲ್ಕ ಕಟ್ಟಲು ಕಾನೂನಿನಲ್ಲಿ ಅವಕಾಶ ಮಾಡಿದ್ದರು. ಆಗ 6 ತಿಂಗಳ ಕಾಲ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿತ್ತು. ಆದರೆ ಯಾರೂ ಕೂಡ ಶುಲ್ಕ ಕಟ್ಟಲು ಮುಂದೆ ಬರಲಿಲ್ಲ. ಶುಲ್ಕ ಹೆಚ್ಚಾಯಿತು ಎಂದು ಯೋಜನೆ ಪ್ರಯೋಜನ ಪಡೆಯಲಿಲ್ಲ. ಈಗಲೂ ಈ ದಾಖಲೆಗಳು ಬರೀ ಸರ್ಕಾರಿ ದಾಖಲೆಗಳಾಗಿ ಉಳಿದುಕೊಂಡಿವೆ” ಎಂದರು.

ಈಗ ಅರ್ಜಿ ಹಾಕಲು ಜೂನ್ 15 ರಿಂದ ಒಟ್ಟು ಮೂರು ತಿಂಗಳ ಕಾಲ ಅವಕಾಶ ಕಲ್ಪಿಸಿಕೊಡಲಾಗುವುದು. ಓಟಿಎಸ್ ಜಾರಿ ಮಾಡಲಾಗುವುದು. ಮೊದಲ 100 ದಿನ ಅರ್ಜಿ ಸಲ್ಲಿಸಲು, 100 ದಿನ ಅರ್ಜಿ ಪರಿಶೀಲನೆಗೆ, ನಂತರ ಪಾವತಿಗೆ ಅವಕಾಶ ನೀಡಲಾಗವುದು. 1 ವರ್ಷ ಕಾಲಮಿತಿಯೊಳಗೆ ಅಂದರೆ 2027ರ ಜೂನ್‌ಗೆ ಈ ಯೋಜನೆ ಮುಕ್ತಾಯಗೊಳಿಸಲಾಗವುದು” ಎಂದರು.

“ಮೂರು ತಿಂಗಳ ಒಳಗೆ ಅರ್ಜಿ ಸಲ್ಲಿಸಿದವರು ಶೇ10ರ ಬದಲು ಶೇ.5ರಷ್ಟು ಮಾತ್ರ ಪಾವತಿ ಮಾಡಬಹುದು. ಅವರಿಗೆ ಶೇ.50ರಷ್ಟು ರಿಯಾಯಿತಿ ದೊರೆಯಲಿದೆ. ಕಾನೂನಿನ ಚೌಕಟ್ಟಿನಲ್ಲಿಯೇ ರಿಯಾಯಿತಿ ನೀಡಲಾಗಿದೆ. ಗೈಡೆನ್ಸ್ ವ್ಯಾಲ್ಯೂ ಪೈಕಿ ಶೇ. 25 ಇರುವ ಕಡೆ ಶೇ.12.5, ಶೇ.40 ಇರುವ ಕಡೆ ಶೇ.20 ರಷ್ಟು, ಶೇ.50 ಇರುವ ಕಡೆ ಶೇ.25 ರಷ್ಟು ರಿಯಾಯಿತಿ ನೀಡಲಾಗುವುದು. ಈ ಬಗ್ಗೆ ಮುಖ್ಯಮಂತ್ರಿಯವರು ಸೇರಿದಂತೆ ಸಚಿವರ ಬಳಿಯೂ ಚರ್ಚೆ ನಡೆಸಲಾಗಿದೆ” ಎಂದರು.

“ಈ ಯೋಜನೆಯ ಸೌಲಭ್ಯ ಬಳಸಿಕೊಳ್ಳದೇ ಇದ್ದರೆ ಕಾನೂನು ರೀತಿ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ. ಈಗಾಗಲೇ ಬಿಡಿಎ 2 ಸಾವಿರ ಕೋಟಿ ಮೌಲ್ಯದ ಆಸ್ತಿಗಳನ್ನು ವಶಕ್ಕೆ ಪಡೆದಿದೆ” ಎಂದರು.

ಶಿವರಾಂ ಕಾರಂತ ಬಡಾವಣೆಯ ಭೂ ಮಾಲೀಕರಿಗೆ 18 ಸಾವಿರ ನಿವೇಶನ ಹಂಚಿಕೆ: “3,052 ಭೂ ಮಾಲೀಕರು ತಮ್ಮ ಆಸ್ತಿಯನ್ನು ಶಿವರಾಂ ಕಾರಂತ ಬಡಾವಣೆಗೆ ನೀಡಿದ್ದರು. ಅನೇಕ ಆಸ್ತಿ ಮಾಲೀಕರು ಬೇರೆಯವರಿಗೆ ಆಸ್ತಿ ಮಾರಾಟ ಮಾಡಿದ್ದು ಸೇರಿದಂತೆ ಅನೇಕ ತೊಡಕುಗಳಿದ್ದವು. ಈಗ ನ್ಯಾಯಾಲಯದ ಅನುಮತಿ ಪಡೆದು 18 ಸಾವಿರ ನಿವೇಶನಗಳನ್ನು ಭೂ ಮಾಲೀಕರಿಗೆ ನೀಡಲಾಗುತ್ತಿದೆ. ಮೇ 15ನೇ ತಾರೀಕಿನಿಂದಲೇ ನಿವೇಶನ ಪಡೆದುಕೊಳ್ಳಲು ಅವಕಾಶ ನೀಡಲಾಗಿದೆ. ಕೇಂದ್ರಿಯ ಇ ಗವರ್ನೆನ್ಸ್‌ನಿಂದ ಸಾಫ್ಟ್‌ವೇರ್ ಅಭಿವೃದ್ಧಿಪಡಿಸಿ ಅದರ ಮೂಲಕ ಹಂಚಿಕೆ ವ್ಯವಸ್ಥೆ ಮಾಡಲಾಗಿದೆ” ಎಂದರು.

“1, 2 ಎಕರೆ ಅಥವಾ ಹೆಚ್ಚು ಭೂಮಿ ಹೊಂದಿದ್ದ ಮಾಲೀಕರಿಗೆ ಪ್ರತ್ಯೇಕ ಅವಕಾಶ ಕಲ್ಪಿಸಲಾಗಿದೆ. ಒಂದೇ ಜಾಗದಲ್ಲಿ ದೊಡ್ಡ ನಿವೇಶನ ಬೇಕು ಎಂದವರಿಗೂ ಅವಕಾಶ ನೀಡುತ್ತೇವೆ ಎಂದು ಹೇಳಿದ್ದೆವು. ಇದಕ್ಕೆ 7 ಜನರು ಮಾತ್ರ ಅರ್ಜಿ ಸಲ್ಲಿಕೆ ಮಾಡಿದ್ದಾರೆ. 1 ಎಕರೆ ಜಮೀನು ಇದ್ದರೆ ಒಂದೇ ಜಾಗದಲ್ಲಿ 9,583 ಚದರ ಅಡಿ ಜಾಗ ನೀಡಲಾಗುವುದು. ಇದರ ಮೂಲಕ ಎತ್ತರದ ಕಟ್ಟಡಗಳಿಗೆ ಅವಕಾಶ ಮಾಡಿಕೊಡಲು ಈ ರೀತಿ ಅನುಕೂಲ ಕಲ್ಪಿಸಲಾಗಿದೆ” ಎಂದು ವಿವರಿಸಿದರು.

1.44 ಕೋಟಿಗೆ ಬಿಡಿಎ ಮನೆ: “ವೈಟ್ ಫೀಲ್ಡ್‌ನಲ್ಲಿ 1,900 ಮನೆಗಳನ್ನು ಕಟ್ಟಲಾಗಿದೆ. 1 ಬಿಎಚ್‌ಕೆ ಮನೆ 760 ಚದರ ಅಡಿಯಿದೆ. ಇದನ್ನು 6,686 ರೂಪಾಯಿಗೆ ನೀಡಲಾಗುತ್ತಿದೆ. ಇದಕ್ಕೆ ಮೇ 15ನೇ ತಾರೀಕಿನಿಂದ ಅರ್ಜಿ ಕರೆಯಲಾಗುತ್ತಿದೆ. 1,733 ಚದರ ಅಡಿಯ 3 ಬಿಎಚ್‌ಕೆ ಮನೆಗಳಿಗೆ 8,309 ರಂತೆ 1.44ಕೋಟಿ ರೂಪಾಯಿಗೆ ನೀಡಲಾಗುತ್ತಿದೆ” ಎಂದರು.

“ಚೆನ್ನೈ, ಹೈದರಾಬಾದ್, ದೆಹಲಿ, ಮುಂಬೈ ಎಲ್ಲಾ ಕಡೆಯೂ ಸಂಚಾರ ದಟ್ಟಣೆ ಇದ್ದೇ ಇದೆ. ಹೆಬ್ಬಾಳದ ಬಳಿ ಸ್ವಲ್ಪ ಒತ್ತಡವನ್ನು ಕಡಿಮೆ ಮಾಡಿದ್ದೇವೆ. ಇನ್ನೂ ಸರಳ ಮಾಡಬೇಕು ಎಂದು ಮುಂದುವರೆದಿದ್ದೇವೆ. ಈಗ ಕಡಿಮೆ ಅಂತರದ ಸುರಂಗ ರಸ್ತೆಯನ್ನು ಮಾಡುತ್ತಿದ್ದೇವೆ. ಹೆಬ್ಬಾಳ ಜಂಕ್ಷನ್ ಬಳಿಯಿಂದ ಕೃಷಿ ವಿವಿ ಬಳಿ ಹಾದು ಹೋಗಲಿದೆ. ಇಲ್ಲಿ ಮೂರು ಲೈನ್ ಗಳ ಕಟ್ ಅಂಡ್ ಕರ್ವ್ ಟನಲ್ ಬರಲಿದೆ. ಒಟ್ಟು ಈ ಸುರಂಗ ಮಾರ್ಗ ಆರು ಪಥಗಳನ್ನು ಹೊಂದಿರುತ್ತದೆ. ಇದು 2.2 ಕಿಮೀ ಉದ್ದ ಇರಲಿದೆ. ಈ ಯೋಜನೆಯನ್ನು ಋತ್ವಿಕ್ ಟನಲ್‌ಗೆ ನೀಡಿದ್ದು 18 ತಿಂಗಳಲ್ಲಿ ಇದನ್ನು ಪೂರ್ಣಗೊಳಿಸಬೇಕು ಎಂದು ತಿಳಿಸಲಾಗಿದೆ. ಮೇಕ್ರಿ ವೃತ್ತದ ಬಳಿ 1.7 ಕಿಮೀ ಉದ್ದದ 4 ಪಥ ಹೊಂದಿರುವ ಎಲಿವೇಟೆಡ್ ಕಾಡಿಡಾರ್ ನಿರ್ಮಾಣ ಮಾಡಲಾಗುತ್ತದೆ. ಈ ತಿಂಗಳ ಕೊನೆಗೆ ಈ ಎರಡು ಯೋಜನೆಗಳಿಗೆ ಭೂಮಿ ಪೂಜೆ ನೆರವೇರಿಸಲಾಗುವುದು” ಎಂದರು.

“ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ 631 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ 10.77 ಕಿಮೀ ಉದ್ದದ ರಸ್ತೆಯನ್ನು ಮುಂದಿನ 15 ದಿನಗಳಲ್ಲಿ ಲೋಕಾರ್ಪಣೆಗೊಳಿಸಲಾಗುವುದು. ಈ ರಸ್ತೆ ನೋಡಿದರೆ ಎಲ್ಲರಿಗೂ ಆಶ್ಚರ್ಯವಾಗುತ್ತದೆ” ಎಂದರು. ಎಷ್ಟು ಆದಾಯ ಬರಲಿದೆ ಎಂದು ಕೇಳಿದಾಗ, “ನಮ್ಮ ನಿರೀಕ್ಷೆ ಗಗನಕ್ಕಿದೆ. ಈಗಾಗಲೇ 7 ಸಾವಿರ ಜನ ಶೇ.5ರಷ್ಟು ಹಣ ಕಟ್ಟಿದ್ದಾರೆ. ಇದಕ್ಕೆ ಏನು ಪರಿಹಾರ ಹುಡುಕಬೇಕು ಎಂದು ಚಿಂತಿಸಲಾಗುವುದು. ಜನಸಾಮಾನ್ಯರಿಗೆ ಉಪ ಯೋಗವಾಗಲಿ ಎಂದು ಈ ಯೋಜನೆ ತರಲಾಗಿದೆ” ಎಂದರು. ಖಾತೆಯನ್ನು ವಿಪಕ್ಷಗಳು ಅಧಿಕಾರಕ್ಕೆ ಬಂದರೆ ಉಚಿತವಾಗಿ ಮಾಡಿಕೊಡುತ್ತೇವೆ ಎಂದು ಹೇಳಿರುವ ಬಗ್ಗೆ ಕೇಳಿದಾಗ, “ಯಾರೂ ಇದರ ಬಗ್ಗೆ ತಲೆಕೆಡಿಸಿಕೊಳ್ಳುವುದಿಲ್ಲ. ಅವರು ಬರಲೂ ಇಲ್ಲ, ಬರುವುದೂ ಇಲ್ಲ” ಎಂದರು.

ಕಸದ ಟೆಂಡರ್‌ನಲ್ಲಿ ಭ್ರಷ್ಟಾಚಾರವಾಗಿದೆ ಎನ್ನುವ ಬಗ್ಗೆ ಕೇಳಿದಾಗ, “ಇದು ದೊಡ್ಡ ಮಾಫಿಯಾವಿದೆ. ವಿಪಕ್ಷಗಳನ್ನು ಇವರುಗಳು ಉಪಯೋಗಿಸಿಕೊಳ್ಳುತ್ತಿದ್ದಾರೆ. 15-20 ವರ್ಷಗಳಿಂದ ಟೆಂಡರ್ ಮಾಡಲು ಬಿಟ್ಟಿಲ್ಲ. ಇದಕ್ಕೆಲ್ಲಾ ಅವಕಾಶ ನೀಡುವುದಿಲ್ಲ. ನಾವು ಕಾನೂನು ಪ್ರಕಾರ ನಡೆಯುತ್ತೇವೆ. ಅಧಿಕಾರಿಗಳು, ನನ್ನ ಮೇಲೆ ಎಲ್ಲರ ಮೇಲೂ ಆರೋಪ ಮಾಡುತ್ತಾರೆ. ಮಾಫಿಯಾಗಳು ತಿಂದು ರೂಡಿ ಮಾಡಿಕೊಂಡಿವೆ” ಎಂದರು.

### 15 ಲಕ್ಷ ಸಸಿಗಳನ್ನು ನೆಡುವ ‘ಗ್ರೀನ್’

“ಬಿಡಿಎಗೆ 50 ವರ್ಷ ತುಂಬಿದೆ. ಇದರ ನೆನಪಿಗೆ ಕೆಂಪೇಗೌಡ ಜಯಂತಿಯಂದು “ಗ್ರೀನ್ ಬೆಂಗಳೂರು” ಕಾರ್ಯಕ್ರಮ ನಡೆಸಲಾಗುವುದು. ಸಂಘ ಸಂಸ್ಥೆಗಳು, ಕಾಲೇಜು ವಿದ್ಯಾರ್ಥಿಗಳು, ಸರ್ಕಾರಿ ನೌಕರರು ಸೇರಿದಂತೆ ಎಲ್ಲರೂ ಸೇರಿ ಒಂದೇ ದಿನದಂದು 15 ಲಕ್ಷ ಸಸಿಗಳನ್ನು ನೆಡಲಾಗುವುದು. ಜೂನ್ 27 ಈ ಕಾರ್ಯಕ್ರಮ ನಡೆಸಲಾಗುವುದು” ಎಂದರು.

“ಬಿಜಿನೆಸ್ ಕಾರಿಡಾರ್‌ನ ಮೊದಲನೇ ಹಂತಕ್ಕೆ ಶೇ.80 ರಷ್ಟು ಜನ ಒಪ್ಪಿಗೆ ನೀಡಿದ್ದಾರೆ. ಎರಡನೇ ಹಂತಕ್ಕೆ ನೋಟಿಫಿಕೇಷನ್ ನೀಡಲಾಗಿದೆ. ರೈತರೂ ಸಹ ಮುಂದಕ್ಕೆ ಬರುತ್ತಿದ್ದಾರೆ. ನಾವು ಕೊಟ್ಟಿರುವ ಪರಿಹಾರವನ್ನು ದೇಶದಲ್ಲಿ ಬೇರೆ ಯಾರೂ ಕೊಟ್ಟಿಲ್ಲ. ಹೊಸೂರು ರಸ್ತೆಯಿಂದ ಮೈಸೂರು ರಸ್ತೆಯವರೆಗೂ 33 ಕಿ.ಮೀ ಬೆಂಗಳೂರು ಬಿಜಿನೆಸ್ ಕಾರಿಡಾರ್ ಅನ್ನು ಬೆಂಗಳೂರು ದಕ್ಷಿಣದಲ್ಲಿ ನಿರ್ಮಾಣ ಮಾಡಲಾಗುವುದು. ದುಪ್ಪಟ್ಟು ಪರಿಹಾರ ನೀಡಲು ಅವಕಾಶ ಇಲ್ಲದಿದ್ದರೂ ನಾನು ಸಚಿವ ಸಂಪುಟ ಸಭೆ ಮುಂದಿಟ್ಟು, ದುಪ್ಪಟ್ಟು ಬೆಲೆ ನೀಡುತ್ತಿದ್ದೇವೆ.

ಟಿಡಿಆರ್, ರಸ್ತೆ ಪಕ್ಕದಲ್ಲೇ 35% ವಾಣಿಜ್ಯ ಭೂಮಿ, ಎಫ್‌ಎಆರ್, ವಸತಿ ಪ್ರದೇಶದಲ್ಲಿ 40% ಭೂಮಿ ಸೇರಿದಂತೆ ಅನೇಕ ಅವಕಾಶ ನೀಡುತ್ತಿದ್ದೇವೆ. ಅವರಿಗೆ ವಾಣಿಜ್ಯ ಜಮೀನು ನೀಡುತ್ತಿರುವುದರಿಂದ ಅವರಿಗೆ ಎಷ್ಟು ನೆರವಾಗಲಿದೆ ಎಂದರೆ ಹೇಳಲು ಸಾಧ್ಯವಿಲ್ಲ. ಈ ರೀತಿ ಪರಿಹಾರವನ್ನು ಇಡೀ ದೇಶದಲ್ಲಿ ಎಲ್ಲೂ ನೀಡಿಲ್ಲ. ಮುಂಬೈನಲ್ಲಿ ಜಮೀನು ಸ್ವಾಧೀನಕ್ಕೆ ಕೇವಲ 12.5% ಮಾತ್ರ ನೀಡಿದ್ದಾರೆ. ಇಲ್ಲಿ ಶಾಸಕರ, ಮಂತ್ರಿಗಳ ಆಸ್ತಿಗಳಿದ್ದವು ಅವರು ಸಹ ಮುಂದೆ ಬಂದಿದ್ದಾರೆ. ಅವರು ಸಹ ಒಳ್ಳೆಯ ಯೋಜನೆ ಎಂದಿದ್ದಾರೆ. ಯಾವುದೇ ಕಾರಣಕ್ಕೂ ನಾವು ಇದನ್ನು ಡಿನೋಟಿಫೈ ಮಾಡಲು ಸಾಧ್ಯವಿಲ್ಲ” ಎಂದರು.

### ಕಟ್ಟಡ ಉಲ್ಲಂಘನೆ ವಿನಾಯಿತಿ ಮಿತಿ ಶೇ.5 ರಿಂದ ಶೇ.15ಕ್ಕೆ ಹೆಚ್ಚಳ

“ಕಟ್ಟಡದ ಉಲ್ಲಂಘನೆ ವಿನಾಯಿತಿ ಮಿತಿಯನ್ನು (ಎತ್ತರ, ಎಫ್ ಎಆರ್, ಸೆಟ್ ಬ್ಯಾಕ್) ಶೇ.5ರ ಬದಲಾಗಿ ಶೇ.15ಕ್ಕೆ ಹೆಚ್ಚಿಸಲಾಗಿದೆ. ಶೇ.15 ರಷ್ಟು ಪ್ರಮಾಣದ ಉಲ್ಲಂಘನೆಗಳಿಗೆ ದಂಡ ಪಾವತಿಸಿಕೊಂಡು ಸ್ವಾಧೀನಾನುಭವ ಪ್ರಮಾಣ ಪತ್ರ ನೀಡಲು ಒಪ್ಪಿಗೆ ನೀಡಲಾಗಿದೆ.

ಸುಪ್ರೀಂ ಕೋರ್ಟ್ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯದ ಕಟ್ಟಡಗಳಿಗೆ ವಿದ್ಯುತ್ ಹಾಗೂ ನೀರು ಸರಬರಾಜು ಸೌಕರ್ಯ ಒದಗಿಸಬಾರದೆಂದು ಆದೇಶಿಸಿದೆ. ಈ ಸಮಸ್ಯೆ ನಿವಾರಿಸಲು ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಇದರ ಬಗ್ಗೆ ತೀರ್ಮಾನ ಮಾಡಲಾಗುತ್ತಿದೆ” ಎಂದು ಹೇಳಿದರು.

“ನಾವು ಅಕ್ರಮ ಅಕ್ರಮ ಮಾಡುತ್ತಿಲ್ಲ. ನಗರದಲ್ಲಿ ಭೂಮಿಯ ತೀವ್ರ ಬೇಡಿಕೆಯಿಂದ ಹಾಗೂ ದಿನೇ ದಿನೇ ಬೆಳವಣಿಗೆಗಳ ಒತ್ತಡದಿಂದ ನಿವೇಶನ/ಸ್ವತ್ತಿನ ಮಾಲೀಕರು ನಿಯಮಾನುಸಾರ ಸೆಟ್ ಬ್ಯಾಕ್ ಬಿಡದೆ ನಕ್ಷೆ ಉಲ್ಲಂಘನೆ ಮಾಡಿ ಕಟ್ಟಡಗಳನ್ನು ನಿರ್ಮಾಣ ಮಾಡಿದ್ದಾರೆ. 20/30, 30/40, 40/60 ಅಳತೆಯ ನಿವೇಶನಗಳಿಗೆ ಗರಿಷ್ಟ ಶೇ.50 ರಷ್ಟು ಸೆಟ್ ಬ್ಯಾಕ್ ರಿಯಾಯಿತಿ ನೀಡಲು ಕಾಯ್ದೆಯಲ್ಲಿ ಅವಕಾಶವಿದೆ. ನಾವೀಗ ಶೇ.15ರಷ್ಟು ವಿನಾಯಿತಿ ನೀಡಿದ್ದೇವೆ” ಎಂದರು.

---

# 31ಕ್ಕೆ ಚಿಕ್ಕಬಳ್ಳಾಪುರದಲ್ಲಿ ರಾಜ್ಯ ಮಟ್ಟದ ಕೆಯುಡಬ್ಲ್ಯೂಜೆ ಪ್ರತಿಭಾ ಪುರಸ್ಕಾರ: ತಗಡೂರು




ಬೆಂಗಳೂರು

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ)ದ ರಾಜ್ಯ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಚಿಕ್ಕಬಳ್ಳಾಪುರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದೊಂದಿಗೆ ಇದೇ 31 ರಂದು ಭಾನುವಾರ ನಗರದ ಕನ್ನಡ ಭವನದಲ್ಲಿ ನಡೆಸಲು ತೀರ್ಮಾನಿಸಲಾಗಿದೆ.

ಪತ್ರಿಕಾ ಭವನದಲ್ಲಿ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದಲ್ಲಿ ಜಿಲ್ಲಾ ಸಂಘದ ಪದಾಧಿಕಾರಿಗಳೊಂದಿಗೆ ನಡೆದ ಪೂರ್ವಭಾವಿ ಸಭೆಯಲ್ಲಿ ಈ ಬಗ್ಗೆ ನಿರ್ಣಯಿಸಲಾಗಿದೆ.

ಸಭೆಯಲ್ಲಿ ಮಾತನಾಡಿದ ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಮೋಕ್ಷಗುಂಡಂ ಸರ್.ಎಂ. ವಿಶೇಶ್ವರಯ್ಯ ಜನ್ಮ ಸ್ಥಳ, ನಂದಿ ಬೆಟ್ಟದ ಸೊಬಗು, ದ್ರಾಕ್ಷಿಯ ನಾಡಿನಲ್ಲಿ ಮೊಟ್ಟ ಮೊದಲ ಬಾರಿಗೆ ರಾಜ್ಯ ಮಟ್ಟದ ಪ್ರತಿಭಾ ಪುರಸ್ಕಾರ ಆಯೋಜಿಸುತ್ತಿರುವುದು ಸಂತೋಷದ ಸಂಗತಿ ಎಂದು ಹೇಳಿದರು.

ಎಸ್ಸೆಸ್ಸೆಲ್ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ಪತ್ರಕರ್ತರ ಸಂಘದ ಸದಸ್ಯರ ಮಕ್ಕಳಿಗೆ ರಾಜ್ಯ ಸಂಘದಿಂದ ಪ್ರತಿಭಾ ಪುರಸ್ಕಾರ ಹಮ್ಮಿಕೊಂಡಿದ್ದು ಇದು ರಾಜ್ಯ ಮಟ್ಟದ 6ನೇ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಇದಾಗಿದೆ ಎಂದರು.

ಬೀದರ್‌ನಿಂದ ಚಾಮರಾಜಪೇಟೆಯವರೆಗೂ ಕೊಡುಗು-ಕೋಲಾರದಿಂದ ಹಿಡಿದು ರಾಜ್ಯದ 31 ಜಿಲ್ಲೆಗಳ ಪತ್ರಕರ್ತರ ಮಕ್ಕಳು ಹಾಗೂ ಪೋಷಕರು ಸೇರಿ ಸುಮಾರು 400 ರಿಂದ 500ಕ್ಕೂ ಹೆಚ್ಚು ಮಂದಿ ಈ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದರು.

ಪ್ರತಿಭಾ ಪುರಸ್ಕಾರ ಸ್ವೀಕರಿಸಲು ಬರುವ ದೂರದ ಜಿಲ್ಲೆಗಳ ವಿದ್ಯಾರ್ಥಿ ಪೋಷಕರಿಗೆ ಸೂಕ್ತ ವಸತಿ, ಊಟ, ತಿಂಡಿ ಸೌಕರ್ಯ ಮಾಡಲು ಜಿಲ್ಲಾ ಸಂಘಕ್ಕೆ ಸೂಚಿಸಿದ ಅವರು, ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಮಿನಿ ರಾಜ್ಯ ಪತ್ರಕರ್ತರ ಸಮ್ಮೇಳನದ ಮಾದರಿಯಲ್ಲಿ ನಡೆಯುವಂತೆ ಸಲಹೆ ನೀಡಿದರು.

ಪ್ರತಿಭಾ ಪುರಸ್ಕಾರ ವಿತರಣಾ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆಗೆ ಆದ್ಯತೆ ನೀಡಬೇಕು, ಜಿಲ್ಲೆಯ ಕಲೆ, ಸಂಸ್ಕೃತಿಯ ಹಿರಿಮೆಯನ್ನು ಪರಿಚಯಿಸುವ ವಸ್ತು ಪ್ರದರ್ಶನ ಆಯೋಜನೆಗೆ ಸಲಹೆ ನೀಡಿ ಒಟ್ಟಾರೆ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಪತ್ರಕರ್ತರ ನೆನಪಿನಲ್ಲಿ ಉಳಿಯುವ ರೀತಿಯಲ್ಲಿ ಆಯೋಜಿಸಬೇಕು ಎಂದರು.

ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳಿಗೆ ರಾಜ್ಯ ಸಂಘದಿಂದ ನಗದು, ಪ್ರಶಸ್ತಿ ಪತ್ರ ಬಹುಮಾನದ ಜೊತೆಗೆ ಸ್ಮರಣಿಕೆ ನೀಡಲಾಗುವುದೆಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಸಂಘದ ಜಿಲ್ಲಾಧ್ಯಕ್ಷ ವಿ.ರವಿಕುಮಾರ್ ಮಾತನಾಡಿ, ರಾಜ್ಯ ಸಂಘದ ನಿರೀಕ್ಷೆಗೂ ಮೀರಿ ಜಿಲ್ಲಾ ಸಂಘವೂ ರಾಜ್ಯ ಮಟ್ಟದ ಪ್ರತಿಭಾ ಪುರಸ್ಕಾರ ವಿತರಣಾ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಸಂಘಟಿಸಲಿದೆ. ಎಂದರು.

ಕಾರ್ಯಕ್ರಮದ ಯಶಸ್ವಿಗೆ ಜಿಲ್ಲಾ ಸಂಘ ತಾಲೂಕು ಸಂಘಗಳ ಪದಾಧಿಕಾರಿಗಳನ್ನು ಕರೆದು ವಿವಿಧ ಜವಾಬ್ದಾರಿಗಳನ್ನು ನೀಡಲು ಉಪ ಸಮಿತಿಗಳನ್ನು ರಚಿಸಲಾಗುವುದು, ರಾಜ್ಯದ ವಿವಿಧ ಜಿಲ್ಲೆಗಳಿಂದ ಬರುವ ವಿದ್ಯಾರ್ಥಿ ಪೋಷಕರಿಗೆ ಜಿಲ್ಲೆಯ ಪ್ರಮುಖ ಸ್ಥಳಗಳ ಭೇಟಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ.ಲೋಕೇಶ್, ರಾಜ್ಯ ಖಜಾಂಚಿ ವಾಸುದೇವಹೊಳ್ಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಗತಿ ನಾಗರಾಜಪ್ಪ, ರಾಜ್ಯ ಸಮಿತಿ ಸದಸ್ಯರಾದ ಎನ್.ಚಂದ್ರಶೇಖರ್ ಮತ್ತಿತರರು ವೇದಿಕೆಯಲ್ಲಿದ್ದರು.

ಸಭೆಯಲ್ಲಿ ಜಿಲ್ಲಾ ಸಂಘದ ಪದಾಧಿಕಾರಿಗಳು, ಕಾರ್ಯಕಾರಣಿ ಮಂಡಳಿ ಸದಸ್ಯರು, ವಿವಿಧ ತಾಲೂಕು ಸಂಘಗಳ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಜಿಲ್ಲಾ ಕೇಂದ್ರದ ಹಿರಿಯ ಪತ್ರಕರ್ತರು, ನಿಕಟಪೂರ್ವ ಪದಾಧಿಕಾರಿಗಳು ಉಪಸ್ಥಿತರಿದ್ದು, ಪ್ರತಿಭಾ ಪುರಸ್ಕಾರ ಸಮಾರಂಭದ ಯಶಸ್ವಿನ ಬಗ್ಗೆ ಉಪಯುಕ್ತ ಸಲಹೆಗಳನ್ನು ನೀಡಿದರು.

---

# ‘ಎನ್‌ಡಿಎ ಸರ್ಕಾರ ಬರುತ್ತೆ ಆಗ ನಾನೇ ಮಂತ್ರಿ ಆಗ್ತೇನೆ’

ಕೋಲಾರ



ನಾನು ಈ ಹಿಂದೆ ಕಾಂಗ್ರೆಸ್ ಮತ್ತು ಬಿಜೆಪಿಯಿಂದಲೂ ಸ್ಪರ್ಧಿಸಿ ಗೆದ್ದಿದ್ದೆ. ಉಳಿದಂತೆ ಜೆಡಿಎಸ್‌ನಿಂದಲೂ ಸ್ಪರ್ಧಿಸಿ ಗೆದ್ದಿದ್ದೇನೆ. ಯಾವ ಪಕ್ಷಕ್ಕೂ ನಾನು ಅರ್ಜಿ ಹಾಕಿರಲಿಲ್ಲ. ಮುಂದಿನ 2028ರ ಚುನಾವಣೆಯಲ್ಲಿ ಜೆಡಿಎಸ್ ಪಕ್ಷದಿಂದ ಸ್ಪರ್ಧಿಸುತ್ತೇನೆ. ನನಗೆ ಯಾರೂ ಎದುರಾಳಿಗಳು ಇಲ್ಲ. ಆಗ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬರುತ್ತೆ. ನಾನೇ ಮಂತ್ರಿ ಆಗುತ್ತೇನೆ ಎಂದು ಶಾಸಕ ಜಿ.ಕೆ. ವೆಂಕಟಶಿವಾರೆಡ್ಡಿ ಹೇಳಿದರು.

ಶ್ರೀನಿವಾಸಪುರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಪತ್ರಕರ್ತರ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ನಾನು ಈಗಾಗಲೇ ಹತ್ತು ಚುನಾವಣೆಗಳನ್ನು ಎದುರಿಸಿದವನು. ಎಲ್ಲ ಚುನಾವಣೆಗಳಲ್ಲೂ ಗೆದ್ದಿದ್ದೇನೆ. ಯಾರಾದರೂ ನನ್ನ ವಿರುದ್ಧ ಚಿತಾವಣೆ ಮಾಡಿದ್ದಾರಾ? ಈಗಲೂ ಅಷ್ಟೇ. ನಮ್ಮ ಪಕ್ಷದಲ್ಲಿ ನಾನೇ ಹಿರಿಯ ಶಾಸಕ. ಈ ಬಾರಿ ಚುನಾವಣೆಯಲ್ಲಿ ಗೆದ್ದು ಮಂತ್ರಿಯಾಗುತ್ತೇನೆ. ಆಗ ತಾಲೂಕಿನಾದ್ಯಂತ ಅಭಿವೃದ್ಧಿಯ ಹೊಳೆ ಹರಿಸುತ್ತೇನೆ. ನೂರಕ್ಕೆ ನೂರರಷ್ಟು ಬದ್ಧತೆಯಿಂದ ಜನಸೇವೆ ಮಾಡುತ್ತೇನೆ. ಜನರು ಆನಂದವಾಗಿರಲು ಏನುಬೇಕೋ ಅದೆಲ್ಲ ಅಭಿವೃದ್ಧಿ ಕಾರ್ಯಗಳನ್ನು ಮಾಡುತ್ತೇನೆ. ನನ್ನ ಕ್ಷೇತ್ರದಲ್ಲಿ ನಾನೇ ಅಭ್ಯರ್ಥಿ. ನನಗೆ ಯಾರಾದರೂ ಚಾಲೆಂಜ್ ಮಾಡ್ತಾರಾ? ನನ್ನದು ಒಂದೇ ಕ್ಷೇತ್ರ. ಒಬ್ಬರೇ ಶತೃ. ಬಹುಶಃ ನನಗಿದು ಕೊನೆಯ ಚುನಾವಣೆ. ನನ್ನ ಕ್ಷೇತ್ರಕ್ಕೆ ನಾನೇ ಅಭ್ಯರ್ಥಿ ಎಂದಾಗ ಎಲ್ಲರೂ ಸಮ್ಮತಿಸುತ್ತಾರೆ ಎನ್ನುವ ವಿಶ್ವಾಸವಿದೆ ಎಂದು ವೆಂಕಟಶಿವಾರೆಡ್ಡಿ ತಿಳಿಸಿದ್ದಾರೆ.

### ಸ್ಪೀಕರ್ ಯು.ಟಿ.ಖಾದರ್ ಮೇಲೆ ಹಲ್ಲೆ ಯತ್ನ ಆರೋಪ: 11 ಜನರ ವಿರುದ್ಧ ಎಫ್‌ಐಆರ್

ಬೆಂಗಳೂರು

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆದ ಪ್ರತಿಭಟನೆಯ ಸಂದರ್ಭದಲ್ಲಿ ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ಅವರ ಮೇಲೆ ಹಲ್ಲೆಗೆ ಯತ್ನಿಸಿದ ಆರೋಪದ ಮೇಲೆ 11 ಜನರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ.

ಮೇ 7 ರಂದು ಮಂಗಳೂರು ಬಳಿಯ ಉಳ್ಳಾಲ ಪ್ರದೇಶದ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿದ ನಂತರ ಖಾದರ್ ಅವರು ಬೆಂಗಾವಲು ಪಡೆಯಲ್ಲಿ ಪ್ರಯಾಣಿಸುತ್ತಿದ್ದಾಗ ಈ ಘಟನೆ ನಡೆದಿದೆ ಎಂದು ಪೊಲೀಸರು ಹೇಳಿದ್ದಾರೆ.

ಪ್ರತಿಭಟನಾಕಾರರ ಗುಂಪೊಂದು ಬೆಂಗಾವಲು ಪಡೆಯನ್ನು ತಡೆಯಲು ಪ್ರಯತ್ನಿಸಿತು ಮತ್ತು ಅವರ ವಿರುದ್ಧ ಘೋಷಣೆಗಳನ್ನು ಕೂಗಿತು ಎಂದು ಪೊಲೀಸರು ತಿಳಿಸಿದ್ದಾರೆ.

ಸಭಾಪತಿಯ ಗನ್ ಮ್ಯಾನ್ ಮೊಹಮ್ಮದ್ ಯಾಸೀನ್ ನೀಡಿದ ದೂರಿನ ಪ್ರಕಾರ, ಕುತ್ತಾರ್ ಪೊಲೀಸ್ ಠಾಣೆ ವ್ಯಾಪ್ತಿಗೆ ಬರುವ ಬಾಪುನಿ ಸರ್ಕಾರಿ ಅತಿಥಿ ಗೃಹದ ಮುಂದೆ ಜನರ ಗುಂಪೊಂದು ಸ್ಪೀಕರ್ ಅವರ ಬೆಂಗಾವಲು ಪಡೆಯನ್ನು ತಡೆದು, ಭದ್ರತಾ ಅಧಿಕಾರಿಗಳನ್ನು ಕೈಗಳಿಂದ ತಳ್ಳಿತು.

ತಮ್ಮ ಸಮಸ್ಯೆಗಳ ಕುರಿತು ಸ್ಪೀಕರ್ ಜೊತೆ ಮಾತನಾಡಲು ಅವಕಾಶ ನೀಡಬೇಕೆಂದು ಅವರು ಒತ್ತಾಯಿಸಿದರು. ಆದರೆ ರಾತ್ರಿ 10.30 ಆಗಿದ್ದರಿಂದ, “ನಾನು ಅವರಿಗೆ ಸ್ಪೀಕರ್ ಭೇಟಿ ಮಾಡಲು ಅವಕಾಶ ನೀಡಲಿಲ್ಲ” ಎಂದು ಯಾಸೀನ್ ದೂರಿನಲ್ಲಿ ತಿಳಿಸಿದ್ದಾರೆ.

---

# ದೇಶದ ಹಿತದೃಷ್ಟಿಯಿಂದ ಮೋದಿ ಸಲಹೆ

## ಸಿದ್ದು- ಡಿಕೆಶಿ ವಿರೋಧ ಕೈಬಿಡಲಿ: ರವಿಕುಮಾರ್

ಬೆಂಗಳೂರು

ಪ್ರಧಾನಿಯವರು ದೇಶದ ಹಿತದೃಷ್ಟಿಯಿಂದ ಕೆಲವು ಸಲಹೆಗಳನ್ನು ನೀಡಿದ್ದು, ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಅವರು ವಿರೋಧ ಮಾಡುವುದನ್ನು ಕೈಬಿಡಬೇಕು ಎಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್ ರವಿಕುಮಾರ್ ಅವರು ಆಗ್ರಹಿಸಿದ್ದಾರೆ.



ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರಧಾನಿಯವರ ಹೇಳಿಕೆ ಗಮನಿಸಿ ಅನೇಕ ಕಂಪೆನಿಗಳು ವಾರದಲ್ಲಿ 3 ದಿನ ಮನೆಯಿಂದಲೇ ಕೆಲಸ ಮಾಡಿಸುವುದಾಗಿ ಮುಂದೆ ಬರುತ್ತಿವೆ ಎಂದು ತಿಳಿಸಿದರು. ಅನುಭವಿ ರಾಜಕಾರಣಿ ಬಿ.ಕೆ.ಹರಿಪ್ರಸಾದ್ ಅವರು ಅಪ್ರಬುದ್ಧ ಹಾಗೂ ಅತ್ಯಂತ ಹಗುರವಾದ ಹೇಳಿಕೆ ಕೊಡುತ್ತಾರೆ. ಅವರ ಬಗ್ಗೆ ಹೇಳಿಕೆ ಕೊಡುವುದರಲ್ಲಿ ಏನೇನೂ ಅರ್ಥ ಇಲ್ಲ ಎಂದು ನುಡಿದರು.

ಪೆಟ್ರೋಲಿಯಂ ಉತ್ಪನ್ನ, ಗ್ಯಾಸ್ ಬಳಕೆ ಕಡಿಮೆ ಮಾಡಿ, ಒಂದು ವರ್ಷ ಕಾಲ ಚಿನ್ನ ಖರೀದಿಯನ್ನು ಅಗತ್ಯವಿದ್ದರೆ ಮಾತ್ರ ಕಡಿಮೆ ಮಾಡಿ, ಸಾಮೂಹಿಕ ಸಾರಿಗೆ ವ್ಯವಸ್ಥೆ ಬಳಸಿ ಎಂದು ಪ್ರಧಾನಿಯವರು ಹೇಳಿದ್ದಾರೆ. ಇದರ ಉದ್ದೇಶ ಜನರಿಗೆ ತೊಂದರೆ ಕೊಡುವುದಲ್ಲ; ಯುದ್ಧದ ಕಾರಣ ಪೆಟ್ರೋಲಿಯಂ ಉತ್ಪನ್ನ, ಗ್ಯಾಸ್ ಸರಿಯಾಗಿ ಬರುತ್ತಿಲ್ಲ; ಮಾತುಕತೆ ಸರಿಯಾಗಿ ನಡೆಯದೆ ಯುದ್ಧ ನಿಲ್ಲುತ್ತಿಲ್ಲ ಎಂದು ಗಮನಕ್ಕೆ ತಂದರು.

ಪ್ರಧಾನಿಯವರ ಕರೆಗೆ ಜನರು, ಸರಕಾರಗಳೂ ಸ್ಪಂದಿಸುತ್ತಿವೆ. ಕೇಂದ್ರವನ್ನು ಟೀಕಿಸಬೇಕು; ವಿರೋಧಿಸ ಬೇಕೆಂಬ ಚಾಳಿ ಇರುವ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ಪಕ್ಷದವರು ಇದನ್ನು ವಿರೋಧಿಸುವ ಮನಸ್ಥಿತಿ ಹೊಂದಿದ್ದಾರೆ ಎಂದು ಟೀಕಿಸಿದರು. ನಮ್ಮ ದೇಶದ ಅರ್ಥವ್ಯವಸ್ಥೆ, ಜನರ ಉದ್ಯೋಗ ಮತ್ತು ವಿದೇಶಿ ವಿನಿಮಯವನ್ನು ಕಾಪಾಡಲು ಪ್ರಧಾನಿಯವರ ಕರೆ ಸ್ವಾಗತಾರ್ಹ. ಜನರು ಇದನ್ನು ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಅಂಕೋಲಾದಲ್ಲಿ ನಮ್ಮ ಕಾರ್ಯಕರ್ತ ನಾಗರಾಜ್ ನಾಯಕ್ ಅವರ ಮೇಲೆ ಶೋಷಣೆ ಮಾಡಲಾಗುತ್ತಿದೆ. ಅವರ ಮೇಲೆ ಹಲ್ಲೆ ಮಾಡಲು ಮುಂದಾದ ಗೋಪಾಲಕೃಷ್ಣ ನಾಯಕ್ ಮೇಲೆ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು. ನಾಗರಾಜ್ ನಾಯಕ್ ಅವರು ಒಂದು ವಾರದಿಂದ ಧರಣಿ ಸತ್ಯಾಗ್ರಹ ಮಾಡುತ್ತಿದ್ದಾರೆ ಎಂದು ವಿವರಿಸಿದರು.

---

# ರಾಜ್ಯದಲ್ಲಿ ಒಂದು ವಾರ ಸಾಧಾರಣ ಮಳೆ ನಿರೀಕ್ಷೆ: ನಿಗದಿತ ಅವಧಿಗೂ ಮುನ್ನ ಮುಂಗಾರು ನಿರೀಕ್ಷೆ

ಬೆಂಗಳೂರು

ರಾಜ್ಯದ ಕೆಲವೆಡೆ ಮುಂದಿನ ಒಂದು ವಾರ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

20 ಜಿಲ್ಲೆಗಳಿಗೆ ‘ಯೆಲ್ಲೊ ಅಲರ್ಟ್ ಘೋಷಿಸಲಾಗಿದೆ. ಕರಾವಳಿಯ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಒಂದು ಅಥವಾ ಎರಡು ಸ್ಥಳಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ಉತ್ತರ ಒಳನಾಡಿನ ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಕೊಪ್ಪಳ, ರಾಯಚೂರು ಜಿಲ್ಲೆಯ ಒಂದು ಅಥವಾ ಎರಡು ಸ್ಥಳದಲ್ಲಿ ಮಳೆಯಾಗುವ ಸಂಭವವಿದೆ ಎಂದು ಇಲಾಖೆ ತಿಳಿಸಿದೆ.

ಉತ್ತರ ಒಳನಾಡು ಹಾಗೂ ದಕ್ಷಿಣ ಒಳನಾಡಿನ ಜಿಲ್ಲೆಗಳ ಕೆಲವೆಡೆ ಗುರುವಾರ ಮತ್ತು ಶುಕ್ರವಾರ ಬಿರುಗಾಳಿ ಸಹಿತ ಮಳೆ ಸುರಿಯುವ ಸಂಭವವಿದೆ.

ಈ ವರ್ಷ ನೈಋತ್ಯ ಮುಂಗಾರು ದೇಶಕ್ಕೆ ನಿಗದಿತ ಸಮಯಕ್ಕಿಂತ ಮುಂಚೆಯೇ ಆಗಮಿಸುವ ನಿರೀಕ್ಷೆಯಿದೆ.

ಈ ವಾರದ ಅಂತ್ಯದ ವೇಳೆಗೆ, ದಕ್ಷಿಣ ಬಂಗಾಳ ಕೊಲ್ಲಿ, ಅಂಡಮಾನ್ ಸಮುದ್ರ ಹಾಗೂ ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ ಕೆಲವು ಭಾಗಗಳಲ್ಲಿ, ನೈಋತ್ಯ ಮಾನ್ಸೂನ್ ಮುಂದುವರಿಯಲು ಪರಿಸ್ಥಿತಿಗಳು ಅನುಕೂಲಕರವಾಗುತ್ತಿವೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ನೈಋತ್ಯ ಮಾನ್ಸೂನ್ ಸಾಮಾನ್ಯವಾಗಿ ಪ್ರತಿ ವರ್ಷ, ಜೂನ್ 1ರ ಸುಮಾರಿಗೆ ಕೇರಳದಲ್ಲಿ ಪ್ರಾರಂಭವಾಗುತ್ತದೆ.

### ಪ್ರಧಾನಿಗಳ ಹೇಳಿಕೆ ರಾಷ್ಟ್ರದ ಹಿತಾಸಕ್ತಿಗೆ ಪೂರಕ: ಸುಧಾಮೂರ್ತಿ

ಬೆಂಗಳೂರು



ಪಶ್ಚಿಮ ಏಷ್ಯಾ ಸಂಘರ್ಷದಿಂದ ಉಂಟಾಗಿರುವ ಪೂರೈಕೆ ಅಡೆತಡೆ ಗಳನ್ನು ಎದುರಿಸಲು ಪ್ರಧಾನಿ ಮೋದಿ ಅವರು ನೀಡಿರುವ ಸಲಹೆ ಗಳು ರಾಷ್ಟ್ರದ ಹಿತಾಸಕ್ತಿಗೆ ಪೂರಕ ವಾದ ಕ್ರಮಗಳಾಗಿವೆ ಎಂದು ರಾಜ್ಯಸಭಾ ಸಂಸದೆ ಸುಧಾ ಮೂರ್ತಿ ಹೇಳಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಇಂಧನ ಬಳಕೆ ಮತ್ತು ವರ್ಚುವಲ್ ಸಭೆಗಳನ್ನು ಅಳವಡಿಸಿಕೊಳ್ಳುವ ಬಗ್ಗೆ ಪ್ರಧಾನಿ ಮೋದಿ ಅವರು ನೀಡಿರುವ ಸಲಹೆಗಳನ್ನು ಸ್ವಾಗತಿಸಿದ್ದಾರೆ. ಪಶ್ಚಿಮ ಏಷ್ಯಾ ಬಿಕ್ಕಟ್ಟಿನಿಂದ ಇಂಧನ ಮತ್ತು ಅಗತ್ಯ ವಸ್ತುಗಳ ಪೂರೈಕೆ ಸರಪಳಿಯಲ್ಲಿ ಅಡೆತಡೆ ಉಂಟಾಗಿದೆ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
15/05/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಜಿಲೆಟಿನ್ ಕಡ್ಡಿ ಪತ್ತೆ: ತ.ನಾಡಿಗೆ ಹೋಗಿ ಬಂದಿದ್ದ ಆರೋಪಿ

ಬೆಂಗಳೂರು

ನಗರದ ಹೊರವಲಯದ ತಾತಗುಣಿ ಬಳಿ ಜಿಲೆಟಿನ್ ಕಡ್ಡಿಗಳು ಪತ್ತೆಯಾಗಿರುವುದು ಈಗ ತನಿಖಾ ತಂಡಗಳಲ್ಲಿ ಹಲವು ಅನುಮಾನಗಳಿಗೆ ಕಾರಣವಾಗಿದೆ. ಈ ಘಟನೆಯು ಕೇವಲ ಕಾಕತಾಳೀಯವೇ ಅಥವಾ ಇದರ ಹಿಂದೆ ಯಾವುದಾದರೂ ಉದ್ದೇಶಪೂರ್ವಕ ಸಂಚು ಅಡಗಿದೆಯೇ ಎಂಬ ನಿಟ್ಟಿನಲ್ಲಿ ಪೊಲೀಸರು ಎರಡು ಆಯಾಮಗಳಲ್ಲಿ ತನಿಖೆ ನಡೆಸುತ್ತಿದ್ದಾರೆ. ಬೆದರಿಕೆ ಕರೆ ಮಾಡಿದ್ದ ಹಿನ್ನೆಲೆಯಲ್ಲಿ ಪೊಲೀಸರ ವಶದಲ್ಲಿರುವ ಲೋಹಿತ್ ಎಂಬಾತನನ್ನು ತೀವ್ರ ವಿಚಾರಣೆಗೆ ಒಳಪಡಿಸಲಾಗಿದೆ. ಆತನ ಟ್ರಾವೆಲ್ ಹಿಸ್ಟರಿ ಪರಿಶೀಲಿಸಿದಾಗ ಸ್ಫೋಟಕ ಮಾಹಿತಿ ಲಭ್ಯವಾಗಿದೆ. ಪ್ರಧಾನಿ ನರೇಂದ್ರ ಮೋದಿ ಬೆಂಗಳೂರಿಗೆ ಭೇಟಿ ನೀಡುವ ಕೇವಲ ಒಂದು ದಿನದ (ಮೇ 9) ಮೊದಲು ಲೋಹಿತ್ ತಮಿಳುನಾಡಿಗೆ ಹೋಗಿ ಬಂದಿರುವುದು ಪತ್ತೆಯಾಗಿದೆ.

ತಮಿಳುನಾಡಿನಲ್ಲಿ ಜಿಲೆಟಿನ್ ತಯಾರಿಕಾ ಘಟಕಗಳು ಮತ್ತು ಮಾರಾಟಗಾರರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಈ ಹಿನ್ನೆಲೆಯಲ್ಲಿ ಆತ ಅಲ್ಲಿಗೆ ಭೇಟಿ ನೀಡಿದ್ದು ಯಾಕೆ? ಸ್ಫೋಟಕಗಳನ್ನು ತರಲು ಹೋಗಿದ್ದನೇ? ಎಂಬ ಅನುಮಾನ ಪೊಲೀಸರನ್ನು ಕಾಡುತ್ತಿದೆ. ಪ್ರಸ್ತುತ ತಮಿಳುನಾಡಿನ ಸ್ಫೋಟಕ ಮಾರಾಟಗಾರರ ಬಗ್ಗೆ ಪೊಲೀಸರು ಮಾಹಿತಿ ಕಲೆಹಾಕುತ್ತಿದ್ದಾರೆ.

ತಾತಗುಣಿಯಲ್ಲಿ ಸಿಕ್ಕಿರುವ ಕಡ್ಡಿಗಳು ಸುಮಾರು ಎರಡು ವರ್ಷಕ್ಕಿಂತಲೂ ಹಳೆಯವು. ಸಾಮಾನ್ಯವಾಗಿ ಎರಡು ವರ್ಷ ಕಳೆದ ಜಿಲೆಟಿನ್ ಕಡ್ಡಿಗಳು ಶಕ್ತಿ ಕಳೆದುಕೊಳ್ಳುತ್ತವೆ. ಒಂದು ವೇಳೆ ಇವುಗಳನ್ನು ಸ್ಫೋಟಿಸಿದರೂ ನಿಗದಿತ ಪ್ರಮಾಣದ ಹಾನಿ ಉಂಟುಮಾಡುವ ಸಾಮರ್ಥ್ಯ ಹೊಂದಿರುವುದಿಲ್ಲ. ಹಾಗಾಗಿ ಸ್ಥಳೀಯ ಕಲ್ಲಿನ ಕ್ವಾರಿಗಳಲ್ಲಿ ಕೆಲಸ ಮಾಡುವವರು ಬಳಕೆಗೆ ಬಾರದ ಹಳೆಯ ಕಡ್ಡಿಗಳನ್ನು ಇಲ್ಲಿಗೆ ತಂದು ಬಿಸಾಡಿರಬಹುದು ಎನ್ನುವ ಕೋನದಲ್ಲೂ ತನಿಖೆ ನಡೆಯುತ್ತಿದೆ.



ಬೆಂಗಳೂರಿನ ವಿಧಾನಸೌಧದ ಆವರಣದಲ್ಲಿ ಬುಧವಾರ ಉಗ್ರರ ವಿರುದ್ಧ ಹೇಗೆ ಕಾರ್ಯಾಚರಣೆ ಮಾಡಬೇಕು ಎಂಬ ಬಗ್ಗೆ ಮಾಕ್ ಡ್ರಿಲ್ ನಡೆಯಿತು. ವಿಧಾನಸೌಧದಲ್ಲಿ ಎನ್‌ಎಸ್‌ಜಿ ಕಮಾಂಡೋಗಳು ಹಾಗೂ ಪೊಲೀಸರು ಜಂಟಿಯಾಗಿ ಭದ್ರತಾ ಕಸರತ್ತು ನಡೆಸಿದರು. ಬಾಂಬ್ ಬ್ಲಾಸ್ಟ್, ಭಯೋತ್ಪಾದಕರ ದಾಳಿ ಸಮಯದಲ್ಲಿ ಹೇಗೆ ರೆಸ್ಪಾನ್ಸ್ ಮಾಡಬೇಕು? ಉಗ್ರರ ವಿರುದ್ಧ ಹೇಗೆ ಕಾರ್ಯಾಚರಣೆ ಮಾಡಬೇಕೆಂದು ಎನ್ ಸಿ ಜಿ ಕಮಾಂಡೋಗಳು ಅಣುಕು ಪ್ರದರ್ಶನ ಮಾಡಿದವು. ಅಣುಕು ಪ್ರದರ್ಶನದ ಸಾಹಸಮಯ ದೃಶ್ಯಗಳು ಮೈನವಿರೇಳಿಸುವಂತಿತ್ತು.

## 24 ಶಾಸಕರಿಗೆ ಎಐಎಡಿಎಂಕೆ ಗೇಟ್‌ಪಾಸ್

ಚೆನ್ನೈ

ತಮಿಳುನಾಡು ಮುಖ್ಯಮಂತ್ರಿ ವಿಜಯ್ ಅವರಿಗೆ ಇಂದು ವಿಧಾನಸಭೆಯಲ್ಲಿ ಬೆಂಬಲವಾಗಿ ಮತ ಚಲಾಯಿಸಿದ ತನ್ನ ಪಕ್ಷದ 24 ಶಾಸಕರನ್ನು, ಪಕ್ಷಾಂತರ ವಿರೋಧಿ ಕಾನೂನಿನಡಿ ಅನರ್ಹಗೊಳಿಸುವಂತೆ ಅರ್ಜಿ ಸಲ್ಲಿಸಲಾಗಿದೆ ಎಂದು ಎಐಎಡಿಎಂಕೆ ತಿಳಿಸಿದೆ.

ಪಕ್ಷದ ಹೇಳಿಕೆಯ ಪ್ರಕಾರ, ಈ ಶಾಸಕರು ಪಕ್ಷದಿಂದ ಹೊರಡಿಸಲಾದ ವಿಪ್ ಆದೇಶವನ್ನು ಉಲ್ಲಂಘಿಸಿದ್ದಾರೆ. ಆ ವಿಪ್ ಪ್ರಕಾರ, ಇಂದು ವಿಶ್ವಾಸ ಮತ ಸಾಬೀತಿಗೆ ಒಳಗಾದ ಟಿಗಿಪಿ ಸರ್ಕಾರದ ವಿರುದ್ಧ ಮತ ಚಲಾಯಿಸಬೇಕಿತ್ತು. ವಿಜಯ್ ಅವರ ಪಕ್ಷದಲ್ಲಿ ಒಟ್ಟು 105 ಶಾಸಕರು ಇದ್ದರು. ವಿಜಯ್ ಒಂದು ಸ್ಥಾನಕ್ಕೆ ರಾಜೀನಾಮೆ ನೀಡಿದ್ದರೆ ಮತ್ತೊಬ್ಬ ಶಾಸಕ ಸಭಾಧ್ಯಕ್ಷರಾಗಿದ್ದಾರೆ ಮತ್ತು ಇನ್ನೊಬ್ಬರ ಜಯಕ್ಕೆ ನ್ಯಾಯಾಲಯದಲ್ಲಿ ಆಕ್ಷೇಪಣೆ ಬಂದಿದ್ದರಿಂದ ಅವರಿಗೆ ಮತದಾನ ಹಕ್ಕು ಇರಲಿಲ್ಲ. ಇಂತಹ ಪರಿಸ್ಥಿತಿಯಲ್ಲಿ ವಿಜಯ್ ಅವರಿಗೆ 144 ಶಾಸಕರ ಬೆಂಬಲ ದೊರೆತಿದೆ.

# ವೃತ್ತಿ ಆಧಾರಿತ ಕಂಪ್ಯೂಟರ್ ತರಬೇತಿಗೆ ಚಾಲನೆ

ತುಮಕೂರು

ಗುಬ್ಬಿ ತಾಲ್ಲೂಕಿನ ಚೇಳೂರುನ ಸೃಜನ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ತಾಲೂಕು ಪಂಚಾಯಿತಿ ಗುಬ್ಬಿ, ಡಾ. ಬಿ.ಆರ್. ಅಂಬೇಡ್ಕರ್ ಯುವಜನ ಮತ್ತು ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಹಾಗೂ ಸೃಜನ ಕೈಗಾರಿಕಾ ತರಬೇತಿ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ 2025–26ನೇ ಸಾಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯುವಕ–ಯುವತಿಯರಿಗಾಗಿ ವೃತ್ತಿ ಆಧಾರಿತ ಕಂಪ್ಯೂಟರ್ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.



ಕಾರ್ಯಕ್ರಮದಲ್ಲಿ ಪ್ರಮಾಣ ಪತ್ರ ವಿತರಿಸಿ ಮಾತನಾಡಿದ ಚೇಳೂರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪುಟ್ಟರಾಜು, "ಇಂದಿನ ಡಿಜಿಟಲ್ ಯುಗದಲ್ಲಿ ಯುವಜನತೆ ಶಿಕ್ಷಣದ ಜೊತೆಗೆ ಕಂಪ್ಯೂಟರ್ ಜ್ಞಾನವನ್ನು ಹೊಂದುವುದು ಅತ್ಯವಶ್ಯಕ. ಗ್ರಾಮೀಣ ಭಾಗದ ಯುವಕರು ತಂತ್ರಜ್ಞಾನವನ್ನು ಅಳವಡಿಸಿಕೊಂಡು ಕೌಶಲ್ಯಾಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಬೇಕು," ಎಂದು ಹೇಳಿದರು.

ನಂತರ ಮಾತನಾಡಿದ ಸಂಸ್ಥೆಯ ಅಧ್ಯಕ್ಷ ರಾಜಶೇಖರ್, ಸರ್ಕಾರದಿಂದ ಉಚಿತವಾಗಿ ನೀಡಲಾಗುತ್ತಿರುವ ತರಬೇತಿ ಕಾರ್ಯಕ್ರಮಗಳನ್ನು ಸದ್ಬಳಕೆ ಮಾಡಿಕೊಂಡು ಸ್ವಾವಲಂಬಿ ಜೀವನ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು. ತರಬೇತಿ ಪಡೆದ ಯುವಕರು ಡೇಟಾ ಎಂಟ್ರಿ ಆಪರೇಟರ್, ಕಂಪ್ಯೂಟರ್ ಆಪರೇಟರ್, ಕಚೇರಿ ಸಹಾಯಕ ಸೇರಿದಂತೆ ಸರ್ಕಾರಿ ಹಾಗೂ ಖಾಸಗಿ ಕ್ಷೇತ್ರಗಳಲ್ಲಿ ಉದ್ಯೋಗಾವಕಾಶಗಳನ್ನು ಪಡೆಯಬಹುದು ಎಂದು ತಿಳಿಸಿದರು.

"ಡಾ. ಬಿ.ಆರ್. ಅಂಬೇಡ್ಕರ್ ಅವರು ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿಗೆ ನೀಡಿದ ಮಹತ್ವವನ್ನು ಪ್ರತಿಯೊಬ್ಬರೂ ಅರಿತುಕೊಳ್ಳಬೇಕು. ಶಿಕ್ಷಣದಿಂದ ಮಾತ್ರ ಸಮಾಜದಲ್ಲಿ ಉತ್ತಮ ಸ್ಥಾನಮಾನ ಗಳಿಸಲು ಸಾಧ್ಯ," ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸೃಜನ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಂಶುಪಾಲ ಮನೋಹರ್ ಎಸ್ ಮಾತನಾಡಿ, ಗ್ರಾಮೀಣ ವಿದ್ಯಾರ್ಥಿಗಳಿಗೆ ತಾಂತ್ರಿಕ ಹಾಗೂ ವೃತ್ತಿ ಆಧಾರಿತ ಶಿಕ್ಷಣ ನೀಡುವ ಉದ್ದೇಶದಿಂದ ಸಂಸ್ಥೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ ಎಂದು ತಿಳಿಸಿದರು.

ಈ ತರಬೇತಿ ಕಾರ್ಯಕ್ರಮದಲ್ಲಿ ಮೂಲಭೂತ ಕಂಪ್ಯೂಟರ್ ಜ್ಞಾನ, ಎಂಎಸ್ ಆಫೀಸ್, ಇಂಟರ್‌ನೆಟ್ ಬಳಕೆ, ಡಿಜಿಟಲ್ ಸೇವೆಗಳು, ಆನ್‌ಲೈನ್ ಅರ್ಜಿ ಸಲ್ಲಿಕೆ ಹಾಗೂ ಕಚೇರಿ ನಿರ್ವಹಣೆ ಕುರಿತು ಪ್ರಾಯೋಗಿಕ ತರಬೇತಿ ನೀಡಲಾಗುವುದು ಎಂದು ಆಯೋಜಕರು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಅನಿಲ್ ಕುಮಾರ್ ಎನ್. ನಿರೂಪಣೆ ನಡೆಸಿ, ಉನ್ನತಿ ಪ್ರಾರ್ಥಿಸಿ, ಬಾಂಧವ್ಯ ಸ್ವಾಗತಿಸಿ, ಸಲಾಲುದ್ದೀನ್ ವಂದಿಸಿದರು. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಯುವಕ–ಯುವತಿಯರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# 'ಪ್ರತಿಭಾ ಪುರಸ್ಕಾರ ವಿದ್ಯಾರ್ಥಿಗಳಿಗೆ ಪ್ರೇರಣೆ'

ತಿಪಟೂರು

ವಿದ್ಯಾರ್ಥಿಗಳು ಶಿಕ್ಷಣ ಕ್ಷೇತ್ರದಲ್ಲಿ ಇನ್ನಷ್ಟು ಸಾಧನೆ ಮಾಡಿ ಉನ್ನತ ಮಟ್ಟ ತಲುಪುವಂತೆ ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ ಎಂದು ಟೈಮ್ಸ್ ಪಿಯು ಕಾಲೇಜಿನ ಪ್ರಾಂಶುಪಾಲ ಬಿ. ಪ್ರದೀಪ್ ಹೇಳಿದರು.

ನಗರದ ಕೆ.ಆರ್. ಬಡಾವಣೆಯಲ್ಲಿರುವ ಯಶಸ್ವಿನಿ ವೃದ್ಧಾಶ್ರಮದಲ್ಲಿ ಜಯಕರ್ನಾಟಕ ಜನಪರ ವೇದಿಕೆ ವತಿಯಿಂದ ಪತ್ರಿಕಾ ವಿತರಕರ ಮಕ್ಕಳಿಗೆ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



"ನಮ್ಮ ದೇಶದ ಸೈನಿಕರು ದೇಶವನ್ನು ಕಾಯುವಂತೆ, ಪತ್ರಿಕಾ ವಿತರಕರು ಮಳೆ, ಚಳಿ, ಬಿಸಿಲು ಲೆಕ್ಕಿಸದೆ ಪ್ರತಿದಿನ ಬೆಳಗಿನ ಜಾವ ಮನೆಮನೆಗೂ ಸುದ್ದಿಯನ್ನು ತಲುಪಿಸುತ್ತಾರೆ. ಇಂತಹ ವಿತರಕರ ಮಕ್ಕಳನ್ನು ಗುರುತಿಸಿ ಸನ್ಮಾನಿಸುತ್ತಿರುವುದು ಸಂಘಟನೆಯ ಸಾಮಾಜಿಕ ಕಾಳಜಿಗೆ ಸಾಕ್ಷಿಯಾಗಿದೆ," ಎಂದು ಹೇಳಿದರು.

ಹುಚ್ಚಗೊಂಡನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಬಿ.ಬಿ. ಬಸವರಾಜು ಮಾತನಾಡಿ, ಜಯಕರ್ನಾಟಕ ಜನಪರ ವೇದಿಕೆಯ ಅಧ್ಯಕ್ಷ ಬಿ.ಟಿ. ಕುಮಾರ್ ಪ್ರತಿವರ್ಷ ತಮ್ಮ ಹುಟ್ಟುಹಬ್ಬದ ಅಂಗವಾಗಿ ಆರೋಗ್ಯ ಶಿಬಿರ, ನೋಟ್‌ಬುಕ್ ವಿತರಣೆ, ಕ್ರೀಡಾ ಚಟುವಟಿಕೆ ಸೇರಿದಂತೆ ಹಲವು ಸಾಮಾಜಿಕ ಸೇವೆಗಳನ್ನು ನಡೆಸುತ್ತಿದ್ದಾರೆ ಎಂದು ಶ್ಲಾಘಿಸಿದರು.

ನಗರಸಭೆಯ ಮಾಜಿ ಸದಸ್ಯ ಲೋಕನಾಥ್ ಸಿಂಗ್ ಮಾತನಾಡಿ, "ಹಿರಿಯ ನಾಗರಿಕರೊಂದಿಗೆ ಹುಟ್ಟುಹಬ್ಬ ಆಚರಿಸುವುದು ಹಾಗೂ ಪತ್ರಿಕಾ ವಿತರಕರ ಮಕ್ಕಳನ್ನು ಗುರುತಿಸಿ ಪ್ರೋತ್ಸಾಹಿಸುವುದು ಸಂಘಟನೆಯ ಸೇವಾ ಮನೋಭಾವವನ್ನು ತೋರಿಸುತ್ತದೆ," ಎಂದು ಹೇಳಿದರು.

ಈ ಸಂದರ್ಭದಲ್ಲಿ ಹಿರಿಯ ಪತ್ರಿಕಾ ವಿತರಕ ಪಾಂಡುರಂಗ ರಾವ್ ಅವರ ಪುತ್ರ ಟಿ.ಪಿ. ನಿತೀಶ್ (ದ್ವಿತೀಯ ಪಿಯುಸಿ) ಮತ್ತು ಗಾಂಧಿನಗರ ಪಾಂಡು ಅವರ ಪುತ್ರ ಟಿ.ಪಿ. ಮನೋಜ್ (ಎಸ್‌ಎಸ್‌ಎಲ್‌ಸಿ) ಅವರನ್ನು ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು.

ವೃದ್ಧಾಶ್ರಮದ ಹಿರಿಯರಿಗೆ ಸಿಹಿ ವಿತರಣೆ ಹಾಗೂ ಊಟದ ವ್ಯವಸ್ಥೆ ಮಾಡಲಾಗಿತ್ತು. ಕಾರ್ಯಕ್ರಮಕ್ಕೂ ಮುನ್ನ ನಿಧನರಾದ ಸಚಿವ ಡಿ. ಸುಧಾಕರ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಕರವೇ ಅಧ್ಯಕ್ಷ ಸತೀಶ್ ಮಾರನಗೆರೆ, ಲೋಕೇಶ್, ಮಹೇಶ್, ಯೋಗೇಶ್, ಕೃಷ್ಣ (ಶಿವಾಜಿ), ಬಾಳೆಕಾಯಿ ನಟರಾಜು, ಮದನ್, ಕಿರಣ್ ಕುಮಾರ್, ಕಿರುತೆರೆ ನಟ ದಯಾನಂದ್ ಸಾಗರ್, ನವೀನ್, ನರಸಿಂಹಯ್ಯ, ತಿಲಕ್ ಕುಮಾರ್, ಶಿವು ಉಗ್ರಯ್ಯ, ರೋಹನ್ ರಾಜ್, ಮನು, ಮಂಜು, ಉಮೇಶ್ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು, ಮುಖಂಡರು ಮತ್ತು ಪತ್ರಿಕಾ ವಿತರಕರು

# ತಿಪಟೂರಿನಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟನೆ

ತಿಪಟೂರು

ನಗರದ ಎಸ್.ಕೆ.ಪಿ.ಟಿ ರಸ್ತೆಯಲ್ಲಿರುವ ಶ್ರೀ ಕನ್ನಿಕಾಪರಮೇಶ್ವರಿ ದೇವಸ್ಥಾನದ ಸಭಾಂಗಣದಲ್ಲಿ ಸಪ್ತಗಿರಿ ಆಸ್ಪತ್ರೆ, ಆರ್ಯವೈಶ್ಯ ಮಂಡಳಿ ಟ್ರಸ್ಟ್, ವೈಶ್ಯ ಕೋ–ಆಪರೇಟಿವ್ ಸೊಸೈಟಿ ಹಾಗೂ ಅಥರ್ವ ಹೆಲ್ತ್ ಕ್ಲಿನಿಕ್ ತಿಪಟೂರು ಸಹಯೋಗದಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ಇಂದಿನ ಕಾಲಘಟ್ಟದಲ್ಲಿ ಫಾಸ್ಟ್ ಫುಡ್ ಸೇವನೆಯ ಪರಿಣಾಮದಿಂದ ಯುವಕರು, ಮಹಿಳೆಯರು ಹಾಗೂ ಮಕ್ಕಳಲ್ಲಿ ವಿವಿಧ ಕಾಯಿಲೆಗಳು ಹೆಚ್ಚಾಗುತ್ತಿದ್ದು, ಸಾರ್ವಜನಿಕರು ಪೌಷ್ಟಿಕಾಂಶಯುಕ್ತ ಆಹಾರ ಮತ್ತು ತರಕಾರಿಗಳನ್ನು ಸೇವಿಸಿ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಸಲಹೆ ನೀಡಿದರು.

"ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು ಅತ್ಯಗತ್ಯ. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸದೇ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಿದರೆ ಅನೇಕ ರೋಗಗಳಿಂದ ದೂರವಿರಬಹುದು," ಎಂದು ತಿಳಿಸಿದರು.

ಶಿಬಿರದಲ್ಲಿ ಸುಮಾರು 460ಕ್ಕೂ ಹೆಚ್ಚು ಮಂದಿ ಭಾಗವಹಿಸಿ ಆರೋಗ್ಯ ತಪಾಸಣೆಗೆ ಒಳಪಟ್ಟರು.

ಕಾರ್ಯಕ್ರಮದಲ್ಲಿ ಡಾ. ಸೃಜನ್ ಸೇರಿದಂತೆ ಸಪ್ತಗಿರಿ ಆಸ್ಪತ್ರೆಯ ವೈದ್ಯರು, ಸಿಬ್ಬಂದಿ, ಸಂಘದ ಪದಾಧಿಕಾರಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

# ವೈಜ್ಞಾನಿಕ ಪದ್ಧತಿಗಳನ್ನು ಅನುಸರಿಸಲು ಕರೆ

ವಿಜಯಪುರ

ಹೋಬಳಿಯ ಬಿಜ್ಜವಾರ ಗ್ರಾಮದ ವೇಣುಗೋಪಾಲಸ್ವಾಮಿ ದೇವಸ್ಥಾನದ ಬಳಿ, ತೋಟಗಾರಿಕೆ ವಿಜ್ಞಾನಿಗಳ ವಿಶ್ವವಿದ್ಯಾಲಯ ಬಾಗಲಕೋಟೆ ಹಾಗೂ ಬೆಂಗಳೂರಿನ ತೋಟಗಾರಿಕೆ ಮಹಾವಿದ್ಯಾಲಯದ ವತಿಯಿಂದ ಆಯೋಜಿಸಿದ್ದ ಗ್ರಾಮೀಣ ತೋಟಗಾರಿಕೆ ಕಾರ್ಯಾನುಭವ ಕಾರ್ಯಕ್ರಮ–2025–26 ರ ಅಂಗವಾಗಿ ಆಧುನಿಕ ಗುಲಾಬಿ ಬೇಸಾಯ ಕ್ರಮದ ಬಗ್ಗೆ ರೈತರಿಗೆ ತರಬೇತಿ ನೀಡಲಾಯಿತು.



ನಿವೃತ್ತ ಡೀನ್ ಡಾ.ಜಿ.ಎಸ್. ಕೆ.ಸ್ವಾಮಿ ಮಾತನಾಡಿ, ರೈತರು, ಕಡಿಮೆ ಸಂಪನ್ಮೂಲಗಳನ್ನು ಬಳಕೆ ಮಾಡಿಕೊಳ್ಳುವುದರ ಜೊತೆಗೆ, ವೈಜ್ಞಾನಿಕ ಪದ್ಧತಿಗಳನ್ನು ಅನುಸರಿಸುವ ಮೂಲಕ, ಉತ್ತಮ ಇಳುವರಿಯ ಗುಲಾಬಿ ಹೂಗಳನ್ನು ಬೆಳೆಯುವುದಕ್ಕೆ ಸಾಧ್ಯವಾಗುತ್ತದೆ. ರೈತರು, ಹೆಚ್ಚು ಜಾಗೃತರಾಗಬೇಕು. ರಾಸಾಯನಿಕ ಔಷಧಿಗಳ ಸಿಂಪಡಣೆಯನ್ನು ಸಾಧ್ಯವಾದಷ್ಟು ಕಡಿಮೆ ಮಾಡಿಕೊಳ್ಳಬೇಕು. ಸಾಧ್ಯವಾದಷ್ಟು ಸಾವಯವ ಗೊಬ್ಬರ ಬಳಕೆಯತ್ತ ರೈತರು ಗಮನಹರಿಸಬೇಕಿದೆ. ಹಸಿರು ಮನೆ ಅಥವಾ ಪಾಲಿಹೌಸ್ ಗಳ ಮೂಲಕ ಹೂಗಳನ್ನು ಬೆಳೆಯುವುದರಿಂದ ಹೆಚ್ಚು ಇಳುವರಿಯ ಜೊತೆಗೆ, ಗುಣಮಟ್ಟದಲ್ಲೂ ಉತ್ತಮ ಪಡಿಸಬಹುದಾಗಿದೆ. ರೈತರು, ವಿದ್ಯಾರ್ಥಿಗಳಿಗೆ ನೀಡುತ್ತಿರುವ ಪ್ರೋತ್ಸಾಹ ಹಾಗೂ ಅವರು ಹೆಚ್ಚು ಕಲಿಯಲು ನೀಡುತ್ತಿರುವ ಮಾರ್ಗದರ್ಶನ ಶ್ಲಾಘನೀಯವಾಗಿದೆ. ಭವಿಷ್ಯದ ಆಧುನಿಕ ರೈತರನ್ನಾಗಿ ಮಾಡುವುದು ಅಗತ್ಯವಾಗಿದೆ ಎಂದರು.

ಕಿಸಾನ್ ಕವಚ್ ಕಂಪನಿಯ ವ್ಯವಸ್ಥಾಪಕ ವೆಂಕಟೇಶ್ ಮಾತನಾಡಿ, ರೈತರು, ತಮ್ಮ ಬೆಳೆಗಳಿಗೆ ಕೀಟನಾಶಕಗಳನ್ನು ಸಿಂಪಡಣೆ ಮಾಡುವಾಗ, ಹೆಚ್ಚು ಜಾಗ್ರತೆ ವಹಿಸುವುದರ ಜೊತೆಗೆ, ಕೀಟನಾಶಕಗಳನ್ನು ಎಷ್ಟರ ಪ್ರಮಾಣದಲ್ಲಿ ಸಿಂಪಡಣೆ ಮಾಡಬೇಕು ಎನ್ನುವ ಬಗ್ಗೆ ತಿಳಿದುಕೊಳ್ಳಬೇಕು. ಬೆಳೆಗಳ ಮೇಲೆ ದುಷ್ಪರಿಣಾಮ ಬೀರದಂತಹ ಕೀಟನಾಶಕಗಳ ಬಗ್ಗೆಯೂ ತಿಳಿದುಕೊಳ್ಳಬೇಕಿದೆ. ಕಿಸಾನ್ ಕವಚ್ ಎಂಬ ರಕ್ಷಣಾ ಕವಚವು ಕೀಟನಾಶಕವು ರೈತರ ದೇಹದಲ್ಲಿನ ರಂಧ್ರಗಳಿಂದ ದೇಹವನ್ನು ಪ್ರವೇಶ ಮಾಡದಂತೆ ತಡೆಗಟ್ಟಲು ಸಹಕಾರಿಯಾಗಿದೆ ಎಂದು ಹೇಳಿದರು.

## ನೀಟ್ ಪರೀಕ್ಷೆ ರದ್ದುಗೊಳಿಸಿ, ವಿದ್ಯಾರ್ಥಿಗಳ ಕನಸು ಭಗ್ನಗೊಳಿಸಿದ ಕೇಂದ್ರ ಸರಕಾರ

ವಿಜಯಪುರ

ನೀಟ್ ಪರೀಕ್ಷೆಯನ್ನು ರದ್ದುಗೊಳಿಸಿರುವ ಕಾರಣ, ಸತತವಾಗಿ ಎರಡು ವರ್ಷಗಳ ಕಾಲ, ತುಂಬಾ ಕಷ್ಟಪಟ್ಟು, ಸಾಲ ಸೋಲ ಮಾಡಿಕೊಂಡು ನಿರಂತರವಾಗಿ ನೀಟ್ ಪರೀಕ್ಷೆಗಾಗಿ ಸಿದ್ಧತೆ ಮಾಡಿಕೊಂಡಿದ್ದ ವಿದ್ಯಾರ್ಥಿಗಳು ಹಾಗೂ ಅವರ ಪೋಷಕರ ಕನಸುಗಳು ಭಗ್ನಗೊಂಡಿವೆ. ಇಂತಹ ಬೆಳವಣಿಗೆಗಳಿಗೆ ಕೇಂದ್ರ ಸರಕಾರವೇ ನೇರ ಹೊಣೆಯಾಗುತ್ತದೆ ಎಂದು ಕೆಪಿಸಿಸಿ ಕಾರ್ಯದರ್ಶಿ ವಿ.ಮಂಜುನಾಥ್ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದಲ್ಲಿ ಈ ಕುರಿತು, ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನೀಟ್ ಪರೀಕ್ಷೆ ರದ್ದುಗೊಳಿಸಿ, ಈಗ ಪುನಃ ಮರುಪರೀಕ್ಷೆ ನಡೆಸಬೇಕಾದರೂ ಕನಿಷ್ಠ 3 ತಿಂಗಳು ಬೇಕಾಗುತ್ತದೆ, ವಿದ್ಯಾರ್ಥಿಗಳಲ್ಲಿ ಅಷ್ಟೊಂದು ಉತ್ಸಾಹ, ಮನೋಬಲ, ಕಾಯ್ದುಕೊಳ್ಳಲು ಸಾಧ್ಯವೇ? ಆಯಾ ರಾಜ್ಯಗಳಲ್ಲಿನ ಪರೀಕ್ಷಾ ಮಂಡಳಿಗಳು ಪರೀಕ್ಷೆಗೆ ತಯಾರಿ ನಡೆಸಬೇಕಾಗುತ್ತದೆ.

ಪರೀಕ್ಷೆ ಜುಲೈ ಅಥವಾ ಆಗಸ್ಟ್ ನಲ್ಲಿ ನಡೆದರೂ, ಆಯ್ಕೆಯಾದ ಅಭ್ಯರ್ಥಿಗಳನ್ನು ದಾಖಲು ಮಾಡಿಕೊಳ್ಳುವ ಪ್ರಕ್ರಿಯೆಯೂ ವಿಳಂಬವಾಗುತ್ತದೆ. ಸಿ.ಇ.ಟಿ ಮತ್ತು ನೀಟ್ ಪರೀಕ್ಷೆಗಳಲ್ಲಿ ಆಯ್ಕೆಯಾಗಿರುವ ವಿದ್ಯಾರ್ಥಿಗಳನ್ನು ಸೆ–15 ರೊಳಗೆ ದಾಖಲು ಮಾಡಿಕೊಂಡಿರಬೇಕು ಎಂದು ಅಂತಿಮ ಗಡುವು ಕೊಟ್ಟಿದ್ದಾರೆ. ಅದನ್ನೂ ವಿಸ್ತರಿಸಬೇಕಾಗುತ್ತದೆ. ಈ ಶೈಕ್ಷಣಿಕ ವರ್ಷ ಆರಂಭವೂ ತಡವಾಗುವ ಸಾಧ್ಯತೆ ಇದೆ.

2023–24 ನೇ ಸಾಲಿನಲ್ಲೂ ಒಮ್ಮೆ ನೀಟ್ ಪರೀಕ್ಷೆಯನ್ನು ರದ್ದುಗೊಳಿಸಲಾಗಿತ್ತು. ಆದರೂ ಕೇಂದ್ರ ಸರಕಾರ ಇನ್ನೂ ಬುದ್ಧಿ ಕಲಿತಿಲ್ಲ. ಇಂತಹ ಘಟನೆಗಳು ಪದೇ ಪದೇ ಮರುಕಳಿಸುತ್ತಿದ್ದರೆ, ವಿದ್ಯಾರ್ಥಿಗಳಲ್ಲಿನ ಆತ್ಮಸ್ಥೈರ್ಯ ಕುಗ್ಗುತ್ತದೆ. ಅವರು ತಮ್ಮ ಜೀವನದಲ್ಲಿ ಕಟ್ಟಿಕೊಂಡಿರುವ ಕನಸುಗಳು ನನಸಾಗುವುದಕ್ಕೆ ಹೆಚ್ಚು ತೊಡಕುಂಟಾಗುತ್ತದೆ. ಸರಕಾರಗಳು ವಿದ್ಯಾರ್ಥಿಗಳ ಜೀವನದೊಂದಿಗೆ ಚೆಲ್ಲಾಟವಾಡಬಾರದು ಎಂದರು.

## ವಿದ್ಯುತ್ ವ್ಯತ್ಯಯ

ವಿಜಯಪುರ

ವಿಜಯಪುರದ 66/11 ಕೆ.ವಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ, ಪರಿವರ್ತಕಗಳ ಮತ್ತು 66 ಕೆ.ವಿ. ವಿದ್ಯುತ್ ಮಾರ್ಗಗಳ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ವಿಭಾಗದವರು, ಹಾಗೂ ಲೋಕೋಪಯೋಗಿ ಇಲಾಖೆಯಿಂದ ರಸ್ತೆ ಅಗಲೀಕರಣ ಕಾಮಗಾರಿಯನ್ನು ಮೇ.14 ರಂದು ಗುರುವಾರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆವರೆಗೆ ಕೈಗೊಂಡಿರುವ ಕಾರಣ, ವಿಜಯಪುರ ಪಟ್ಟಣ, ಯಲುವಹಳ್ಳಿ, ಧರ್ಮಪುರ, ಬೀಡಿಗಾನಹಳ್ಳಿ, ಬಳುವನಹಳ್ಳಿ, ವೆಂಕಟಗಿರಿಕೋಟೆ, ಹುರುಳುಗುರ್ಕಿ, ಮುದುಗುರ್ಕಿ, ಬಿಜ್ಜವಾರ, ಹಾರೋಹಳ್ಳಿ, ದಂಡಿಗಾನಹಳ್ಳಿ, ಕೊಮ್ಮಸಂದ್ರ, ತಿಮ್ಮಹಳ್ಳಿ, ಮುದ್ದೇನಹಳ್ಳಿ, ನಾರಾಯಣಪುರ, ಗೊಡ್ಲುಮುದ್ದೇನಹಳ್ಳಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಸುತ್ತಮುತ್ತಲ ಹಳ್ಳಿಗಳಿಗೆ ವಿದ್ಯುತ್ ಸಂಪರ್ಕವಿರುವುದಿಲ್ಲ. ಹಾಗೂ ಕೃಷಿ ಫೀಡರ್ನ ಪಾಳಿ ಸಮಯವು ರಾತ್ರಿಯ ವೇಳೆಗೆ ಬದಲಿಸಲಾಗುವುದು. ಆದದ್ದರಿಂದ ಸಾರ್ವಜನಿಕರು ಸಹಕರಿಸಬೇಕು ಎಂದು ಬೆಸ್ಕಾಂ ಇಲಾಖೆಯ ಎಇಇ ಲಕ್ಷ್ಮೀಕಾಂತ್ ತಿಳಿಸಿದ್ದಾರೆ.

# ಹಿಜಾಬ್ ಆದೇಶದ ವಿರುದ್ಧ ಸಿಡಿದ ಕೇಸರಿ ಪಡೆ: ಕಾನೂನು ಹೋರಾಟ

ಬೆಂಗಳೂರು

ಕರ್ನಾಟಕದ ಶಾಲಾ–ಕಾಲೇಜುಗಳಲ್ಲಿ ಹಿಜಾಬ್ ಹಾಗೂ ಧಾರ್ಮಿಕ ವಸ್ತುಗಳನ್ನು ಧರಿಸಲು ಅವಕಾಶ ನೀಡಿ ಸಿದ್ದರಾಮಯ್ಯ ಸರ್ಕಾರ ಆದೇಶ ಹೊರಡಿಸಿದೆ. ಹೌದು 2022ರಲ್ಲಿ ಬಿಜೆಪಿ ಸರ್ಕಾರದ ಆದೇಶವನ್ನು ಹಿಂಪಡೆದು ಜನಿವಾರ, ಶಿವದಾರ, ರುದ್ರಾಕ್ಷಿ, ಹಿಜಾಬ್, ಪೇಟ ಸೇರಿದಂತೆ ನಿಗದಿತ ಸಮವಸ್ತ್ರದೊಂದಿಗೆ ಧಾರ್ಮಿಕ ವಸ್ತ್ರಗಳನ್ನು ಧರಿಸಲು ಅವಕಾಶ ನೀಡಲಾಗಿದೆ. ಸರ್ಕಾರದ ಈ ನಿರ್ಣಯದಿಂದ ಹಿಜಾಬ್ ವಿವಾದ ಮತ್ತೆ ಮುನ್ನೆಲೆಗೆ ಬಂದಿದ್ದು, ರಾಜ್ಯ ಸರ್ಕಾರದ ವಿರುದ್ಧ ವಿಪಕ್ಷ ಬಿಜೆಪಿ ಹಾಗೂ ಹಿಂದೂಪರ ಸಂಘಟನೆಗಳು ಆಕ್ರೋಶಗೊಂಡಿವೆ.

ಶಾಲಾ–ಕಾಲೇಜುಗಳಲ್ಲಿ ಹಿಜಾಬ್ ಹಾಗೂ ಧಾರ್ಮಿಕ ವಸ್ತುಗಳನ್ನು ಧರಿಸಲು ಅವಕಾಶ ನೀಡಲಾಗುವುದು ಎಂದು ಸರ್ಕಾರ ನಿರ್ಧಾರ ಮಾಡಿದ್ದು, ಈ ಬೆನ್ನಲ್ಲೇ ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಆರ್. ಅಶೋಕ್ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ನಮ್ಮ ಸರ್ಕಾರ ಅಧಿಕಾರದಲ್ಲಿದ್ದಾಗ ಹಿಜಾಬ್ ಅನ್ನು ನಿಷೇಧಿಸಲಾಗಿತ್ತು. ಪಶ್ಚಿಮ ಬಂಗಾಳದಲ್ಲಿ ಅತಿ ಓಲೈಕೆ ಮಾಡಿ ಮಮತಾ ಬ್ಯಾನರ್ಜಿ ಸೋತು ಮನೆಗೆ ಸೇರಿದ್ದಾರೆ. ತಮಿಳುನಾಡಲ್ಲಿ ಹಿಂದುಗಳನ್ನು ಬೈದು ಸ್ಟಾಲಿನ್ ಸೋತರು. ಅದೇ ರೀತಿಯಲ್ಲಿ ಕೇರಳ ಸಿಎಂ ಆಗಿದ್ದ ಪಿಣರಾಯಿಯನ್ನೂ ಸೋಲಿಸಿದ್ದಾರೆ.

ದಾವಣಗೆರೆ ಉಪಚುನಾವಣೆ ಸುತ್ತ ನಡೆದ ಘಟನೆಗಳ ನಂತರ ಅಲ್ಪಸಂಖ್ಯಾತರ ಆಕ್ರೋಶಕ್ಕೆ ಕಾಂಗ್ರೆಸ್ ಸರ್ಕಾರ ಬೆದರಿದೆ. ಹೀಗಾಗಿ ತನ್ನ ಮತಬ್ಯಾಂಕ್ ಉಳಿಸಿಕೊಳ್ಳಲು ಹಿಜಾಬ್ ಅಸ್ತ್ರ ಕೈಗೆತ್ತಿಕೊಂಡಿದೆ. ರಾಜ್ಯದ ನೈಜ ಸಮಸ್ಯೆಗಳಾದ ಬೆಲೆ ಏರಿಕೆ, ಭ್ರಷ್ಟಾಚಾರ, ರೈತರ ಸಂಕಷ್ಟ, ಕಾನೂನು ಸುವ್ಯವಸ್ಥೆಯ ವೈಫಲ್ಯ ಇವೆಲ್ಲದರ ಬಗ್ಗೆ ಸರ್ಕಾರ ಮೌನವಾಗಿದ್ದು, ಮುನಿಸಿಕೊಂಡಿರುವ ಮುಸ್ಲಿಂ ಮತ ಬ್ಯಾಂಕ್‌ಗೆ ಹಿಜಾಬ್ ಮೂಲಕ ಮುಲಾಮು ಹಚ್ಚಲು ರಾಜ್ಯ ಕಾಂಗ್ರೆಸ್ ಸರ್ಕಾರ ಮುಂದಾಗಿದೆ ಎಂದು ಕಿಡಿಕಾರಿದ್ದಾರೆ.

ಶಾಲಾ ಕಾಲೇಜುಗಳಲ್ಲಿ ಹಿಜಾಬ್ ನಿಷೇಧಿಸಿ 2022ರಲ್ಲಿ ಅಂದಿನ ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ವಸ್ತ್ರಸಂಹಿತೆಯನ್ನು ಹೈಕೋರ್ಟ್ ಎತ್ತಿ ಹಿಡಿದಿತ್ತು. ಶಿಕ್ಷಣ ಸಂಸ್ಥೆಗಳಲ್ಲಿ ಶಿಸ್ತು ಮುಖ್ಯ ಎಂದು ತೀರ್ಪು ನೀಡಿತ್ತು. ಈಗ ಕೋರ್ಟ್ ಆದೇಶವನ್ನೇ ಗಾಳಿಗೆ ತೂರಿ ಒಂದು ಸಮುದಾಯದ ಓಲೈಕೆಗೆ ಮುಂದಾಗಿರುವುದು ಯಾವ ಸೀಮೆ ಜಾತ್ಯತೀತತೆ? ಎಂದು ಪ್ರಶ್ನಿಸಿದ ಅಶೋಕ್, ಒಂದು ಸಮುದಾಯದ ಹಿಜಾಬ್‌ಗೆ ಹಸಿರು ನಿಶಾನೆ ತೋರಿರುವ ಸಿದ್ದರಾಮಯ್ಯ ಸರ್ಕಾರ ಕೇಸರಿ ಶಾಲುವಿಗೆ ಮಾತ್ರ ನಿಷೇಧ ಹೇರಿದೆ. ಓಲೈಕೆ ರಾಜಕಾರಣ ಹಿಂದೂಗಳಿಗೆ ಅರ್ಥವಾಗಲ್ಲ ಅಂತ ಭಾವಿಸಿದ್ದೀರಾ ಸಿಎಂ? ಶಾಲಾ–ಕಾಲೇಜುಗಳನ್ನು ಸಮಾನತೆಯ ಕೇಂದ್ರಗಳನ್ನಾಗಿ ನೋಡುವ ಬದಲು ಧರ್ಮದ ಆಧಾರದಲ್ಲಿ ಮಕ್ಕಳನ್ನ ವಿಭಜಿಸ್ತಿರುವ ನಿಮ್ಮ ನಡೆಯೇ ನಾಚಿಕೆಗೇಡು ಎಂದು ವಾಗ್ದಾಳಿ ನಡೆಸಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ಟಿಎಂಸಿ ಸರ್ಕಾರ ಅತಿಯಾದ ಓಲೈಕೆ ರಾಜಕಾರಣ ಮಾಡಿ ಯಾವ ದುಸ್ಥಿತಿಗೆ ತಲುಪಿದೆಯೋ ಕರ್ನಾಟಕದಲ್ಲಿ ನಿಮಗೂ ಅದೇ ಗತಿ ಕಾದಿದೆ. ಕರ್ನಾಟಕದಲ್ಲಿ ತುಷ್ಟೀಕರಣದ ಪರಾಕಾಷ್ಠೆ ತಲುಪಿರುವ ಕಾಂಗ್ರೆಸ್ ಪಕ್ಷಕ್ಕೆ ಕನ್ನಡಿಗರು ತಕ್ಕ ಪಾಠ ಕಲಿಸುವುದು ಗ್ಯಾರಂಟಿ. ವೋಟ್ ಬ್ಯಾಂಕ್ ರಾಜಕಾರಣಕ್ಕಾಗಿ ಸಂವಿಧಾನ ಮತ್ತು ನ್ಯಾಯಾಂಗದ ಆಶಯಗಳನ್ನು ಬಲಿ ಕೊಡುತ್ತಿರುವ ಸರ್ಕಾರಕ್ಕೆ ಜನರೇ ಅಂತ್ಯ ಹಾಡಲಿದ್ದಾರೆ ಎಂದು ಟ್ವಿಟ್ಟರ್‌ನಲ್ಲಿ ಬರೆದುಕೊಂಡಿದ್ದಾರೆ.

ಹಿಜಾಬ್‌ಗೆ ಅವಕಾಶ ನೀಡಿ ರಾಜ್ಯ ಸರ್ಕಾರ ಆದೇಶಿಸಿರುವ ಬಗ್ಗೆ ಶ್ರೀರಾಮಸೇನೆ ಮುಖ್ಯಸ್ಥ ಪ್ರಮೋದ್ ಮುತಾಲಿಕ್ ಪ್ರತಿಕ್ರಿಯಿಸಿದ್ದು, ಸರ್ಕಾರದ ಆದೇಶದ ಪ್ರತಿಯನ್ನು ನಾಳೆ ರಾಜ್ಯಾದ್ಯಂತ ಹರಿದು ಹಾಕುತ್ತೇವೆ. ಹೈಕೋರ್ಟ್‌ನಲ್ಲಿ ಪಿಐಎಲ್ ಹಾಕುವ ಬಗ್ಗೆ ಚಿಂತನೆ ಮಾಡುತ್ತಿದ್ದೇವೆ. ಶಾಲಾ, ಕಾಲೇಜುಗಳಲ್ಲಿ ಸಮಾನತೆ, ಏಕತೆ ಸರ್ಕಾರಕ್ಕೆ ಬೇಡವಾಗಿದೆ. ಮುಸ್ಲಿಮರ ತುಷ್ಟೀಕರಣಕ್ಕಾಗಿ ಇಂತಹ ಆದೇಶ ಹೊರಡಿಸಿದ್ದಾರೆ ಎಂದು ಕಿಡಿಕಾರಿದರು.

ಶಾಲಾ ಮಕ್ಕಳಲ್ಲಿ ಭೇದ ಭಾವ ಮಾಡ್ತಿದ್ದಾರೆ. ಹಿಜಾಬ್ ಧರಿಸಿ ಬಂದ ಮೇಲೆ ಅವರು ಮುಸ್ಲಿಮರು ಎಂದು ಗೊತ್ತಾಗುತ್ತದೆ. ಶಿವದಾರ, ಜನಿವಾರ ಒಳಗಡೆ ಇರುತ್ತೆ. ಅದು ಯಾರಿಗೂ ಗೊತ್ತಾಗಲ್ಲ. ರಾಜ್ಯ ಸರ್ಕಾರ ಕಣ್ಣಿಗೆ ಮಣ್ಣು ಹಾಕುವ ಕೆಲಸ ಮಾಡುತ್ತಿದೆ. ಕಾಂಗ್ರೆಸ್ ಸರ್ಕಾರಕ್ಕೆ ಸಮಾನತೆ ಬೇಕಾಗಿಲ್ಲ, ಒಡಕು ಬೇಕಾಗಿದೆ. ಎಸ್‌ಡಿಎಂಸಿ ಹಕ್ಕನ್ನು ಕಸಿದುಕೊಂಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

1965ರಿಂದ ಶಾಲಾ ಕಾಲೇಜುಗಳಲ್ಲಿ ಸಮವಸ್ತ್ರಗಳಿವೆ. ಶಾಲಾ ಕಾಲೇಜಿನಲ್ಲಿ ವಸ್ತ್ರ ಸಂಹಿತೆಯನ್ನ 1969 ರಿಂದ ಕಡ್ಡಾಯ ಮಾಡಲಾಗಿದೆ. 1969 ರಲ್ಲಿ ಯಾವ ಕಾರಣಕ್ಕೆ ಸಮವಸ್ತ್ರ ಜಾರಿ ಮಾಡಿದ್ವಿ ಅನ್ನೋದನ್ನ ಸ್ಪಷ್ಟವಾಗಿ ಉಲ್ಲೇಖ ಮಾಡಿದ್ದಾರೆ.

ಮಕ್ಕಳಲ್ಲಿ ಯಾವುದೇ ಭೇದಭಾವ ತರಬಾರದು ಎಂಬ ಕಾರಣಕ್ಕೆ ಸಮವಸ್ತ್ರ ಜಾರಿ ಮಾಡಲಾಗಿತ್ತು. ಇದೀಗ ಸರ್ಕಾರ ಮತಿಯ ಚಿಹ್ನೆಗಳನ್ನು ಬಳಸಲು ಅವಕಾಶ ನೀಡಿದೆ. ಹಾಗಾದ್ರೆ ಸಮವಸ್ತ್ರದ ಭಾಗನಾ ಮತಿಯ ಚಿಹ್ನೆಗಳು? ಇದನ್ನ ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಮತಿಯ ಚಿಹ್ನೆಗಳು ಬೇರೆ ಸಂಸ್ಕೃತಿಕ ಚಿಹ್ನೆಗಳು ಬೇರೆ. ಹಿಜಾಬ್ ಮತಿಯ ಚಿಹ್ನೆಯೋ ಸಂಸ್ಕೃತಿಯ ಚಿಹ್ನೆಯೋ ಅನ್ನುವುದನ್ನ ಸ್ಪಷ್ಟಪಡಿಸ್ಬೇಕು. ಹಿಜಾಬ್ ಇರಬಾರದು ಅಂತ ನಾವು ಹೇಳಲ್ಲ. ಶಾಲೆಗಳಲ್ಲಿ ಹಿಜಾಬ್ ಇರಬೇಕಾ ಅಥವಾ ಸಮವಸ್ತ್ರ ಇರಬೇಕಾ? ಹಿಜಾಜ್ ಸಮವಸ್ತ್ರದ ಭಾಗವಾದ್ರೆ ಯಾರು ಪ್ರಶ್ನೆ ಮಾಡುವ ಅವಶ್ಯಕತೆ ಇಲ್ಲ. ಅಂತಹ ಶಾಲೆಗಳಲ್ಲಿ ಹಿಜಾಬ್ ಸಮವಸ್ತ್ರದ ಭಾಗವಾದ್ರೆ ಯಾರು ಪ್ರಶ್ನೆ ಮಾಡುವಂತಿಲ್ಲ. ಆದ್ರೆ ಹಿಜಾಬ್ ಸಮವಸ್ತ್ರದ ಭಾಗವಾಗದೆ ಇದ್ರೆ ಸರ್ಕಾರ ಏನ್ ಹೇಳುತ್ತೆ ಈ ವಿಷಯದಲ್ಲಿ ಕೇಸರಿ ಧಾರ್ಮಿಕ ಚಿಹ್ನೆ ಅಲ್ಲ ಅಂತ ಹೇಳುವ ಅಧಿಕಾರ ಕೊಟ್ಟಿದ್ದು ಯಾರು? ನೀವೇನು ಧಾರ್ಮಿಕ ಪಂಡಿತರ? ನೀವು ಹಿಜಾಬ್‌ಗೆ ಅನುಮತಿ ಕೊಟ್ಟು ಕೇಸರಿಗೆ ಅನುಮತಿ ಇಲ್ಲ ಎನ್ನುವುದರ ಅರ್ಥವೇನು? ಹಾಗಾದ್ರೆ ಕೇಸರಿ ಬಣ್ಣದ ಹಿಜಾಬ್ ಹಾಕಿ ಬಂದ್ರೆ ನೀವು ಹೊರಗೆ ಕಳಿಸುತ್ತೀರಾ? ಕೇಸರಿಗೆ ವಿರೋಧ ಯಾಕೆ ನಿಮ್ದು? ಎಂದು ಪ್ರಶ್ನಿಸಿದರು.

# ಬಂಗಾರಪೇಟೆಯಲ್ಲಿ ರೇಷ್ಮೆ ಬೆಳೆಗಾರರಿಗೆ ಅರಿವು ಕಾರ್ಯಾಗಾರ

ಬಂಗಾರಪೇಟೆ

ಜಿಲ್ಲಾ ಪಂಚಾಯತ್ ಕೋಲಾರ ಹಾಗೂ ರೇಷ್ಮೆ ಇಲಾಖೆ ವತಿಯಿಂದ ಬಂಗಾರಪೇಟೆ ಮತ್ತು ಕೆಜಿಎಫ್ ತಾಲ್ಲೂಕು ಮಟ್ಟದ ದ್ವಿತಳಿ ರೇಷ್ಮೆ ಬೆಳೆಗಾರರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಬಂಗಾರಪೇಟೆ ರೇಷ್ಮೆ ಭಿತ್ತನೆಕೋಠಿ ಕಚೇರಿ ಆವರಣದಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಅಧಿಕಾರಿಗಳು ಮತ್ತು ವಿಜ್ಞಾನಿಗಳು ಬದಲಾಗುತ್ತಿರುವ ವಾತಾವರಣದಲ್ಲಿ ರೇಷ್ಮೆ ಬೆಳೆ ಹಾಗೂ ರೇಷ್ಮೆ ಹುಳಗಳನ್ನು ಹೇಗೆ ರಕ್ಷಿಸಿಕೊಳ್ಳಬೇಕು ಎಂಬ ಕುರಿತು ರೈತರಿಗೆ ಕಾರ್ಯಾಗಾರ ನಡೆಸಿ ಮಾಹಿತಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಪಂ ರೇಷ್ಮೆ ಉಪ ನಿರ್ದೇಶಕ ಸಿ.ಆರ್. ಆಂಜನೇಯರೆಡ್ಡಿ ಮಾತನಾಡಿ, ವಾತಾವರಣ ಬದಲಾವಣೆಯ ಸಂದರ್ಭಗಳಲ್ಲಿ ರೇಷ್ಮೆ ಹುಳಗಳ ರಕ್ಷಣೆ, ರೋಗ ನಿಯಂತ್ರಣ ಹಾಗೂ ಗುಣಮಟ್ಟದ ರೇಷ್ಮೆ ಉತ್ಪಾದನೆ ಕುರಿತು ಸಮಗ್ರ ಮಾಹಿತಿ ನೀಡಿದರು. ಜೊತೆಗೆ ರೇಷ್ಮೆ ತೋಟಗಳಲ್ಲಿ ಗುಣಮಟ್ಟದ ಸೊಪ್ಪು ಉತ್ಪಾದನೆ ಮತ್ತು ವಿವಿಧ ಯೋಜನೆಗಳ ಸೌಲಭ್ಯಗಳ ಕುರಿತು ರೈತರಿಗೆ ತಿಳುವಳಿಕೆ ನೀಡಿದರು.

ರೇಷ್ಮೆ ಇಲಾಖೆ ಉಪ ನಿರ್ದೇಶಕ ಶ್ರೀನಿವಾಸ್ ಮಾತನಾಡಿ, ಗುಣಮಟ್ಟದ ರೇಷ್ಮೆ ಗೂಡನ್ನು ಮಾರುಕಟ್ಟೆಗೆ ತರುವ ವಿಧಾನ, ಮಾರಾಟ ಪ್ರಕ್ರಿಯೆ ಹಾಗೂ ಉತ್ತಮ ಆದಾಯ ಗಳಿಸುವ ಮಾರ್ಗಗಳ ಕುರಿತು ಮಾಹಿತಿ ನೀಡಿದರು.

ವಿಜ್ಞಾನಿಗಳಾದ ಮಂಜುನಾಥ್, ಪರಮೇಶ್ವರ್ ನಾಯಕ್, ಶಶಿಧರ್ ಮತ್ತು ಅನಿಲ್ ಕುಮಾರ್ ಬೇಸಿಗೆ ಸಂದರ್ಭದಲ್ಲಿ ರೇಷ್ಮೆ ಬೆಳೆ ಮತ್ತು ಗೂಡನ್ನು ಸಂರಕ್ಷಿಸುವ ಕ್ರಮಗಳ ಬಗ್ಗೆ ರೈತರಿಗೆ ಉಪಯುಕ್ತ ಸಲಹೆಗಳನ್ನು ನೀಡಿದರು.

ಈ ಕಾರ್ಯಕ್ರಮದಲ್ಲಿ ರೇಷ್ಮೆ ಸಹಾಯಕ ನಿರ್ದೇಶಕ ಜಿ.ವಿ. ಶ್ರೀನಿವಾಸಗೌಡ, ರೇಷ್ಮೆ ಉತ್ಪಾದಕರ ಸಂಘದ ಅಧ್ಯಕ್ಷ ರಾಮಚಂದ್ರಪ್ಪ, ರೇಷ್ಮೆ ವಿಸ್ತರಣಾ ಅಧಿಕಾರಿ ಲಾವಣ್ಯ ಸೇರಿದಂತೆ ಹಲವಾರು ರೇಷ್ಮೆ ಬೆಳೆಗಾರರು ಭಾಗವಹಿಸಿದ್ದರು.

# ಶ್ರೀನಿವಾಸನ್ ನಿಯೋಜನೆ ರದ್ದುಪಡಿಸಲು ಮನವಿ

ಕೋಲಾರ

ಜಾಗೃತಿ ಸಮಿತಿಯ ನಿಯಮಗಳನ್ನು ಉಲ್ಲಂಘಿಸಿ ಕಾನೂನುಬಾಹಿರವಾಗಿ ಅಟ್ರಾಸಿಟಿ ಜಾಗೃತಿ ಸಮಿತಿಯನ್ನು ರಚಿಸಲಾಗಿದೆ ಎಂದು ಆರೋಪಿಸಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶ್ರೀನಿವಾಸನ್ ಅವರ ನಿಯೋಜನೆಯನ್ನು ರದ್ದುಪಡಿಸಿ ಇಲಾಖೆಗೆ ನಿಷ್ಠಾವಂತ ಅಧಿಕಾರಿಯನ್ನು ನೇಮಕ ಮಾಡುವಂತೆ ದಲಿತ ಸಂಘಟನೆಗಳ ಸಂಯುಕ್ತ ರಂಗವು ಎಂ.ಎಲ್. ಅನಿಲ್ ಕುಮಾರ್ ಅವರಿಗೆ ಮನವಿ ಸಲ್ಲಿಸಿತು.

ದಲಿತ ಸಂಘಟನೆಗಳ ಸಂಯುಕ್ತ ರಂಗದ ಅಧ್ಯಕ್ಷ ಡಿಪಿಎಸ್ ಮುನಿರಾಜು ಮಾತನಾಡಿ, ಜಿಲ್ಲಾ ಜಾಗೃತಿ ಸಮಿತಿ ರಚನೆಯಲ್ಲಿ ಅನೇಕ ನಿಯಮ ಹಾಗೂ ಷರತ್ತುಗಳನ್ನು ಕಡೆಗಣಿಸಲಾಗಿದೆ ಎಂದು ಆರೋಪಿಸಿದರು. ಸಮಿತಿ ರಚನೆಗೂ ಮುನ್ನ ಅರ್ಜಿ ಆಹ್ವಾನಿಸಿ, ದಲಿತ ಸಂಘಟನೆಗಳು ಹಾಗೂ ಸಮಾಜ ಸೇವಕರಿಗೆ ಅವಕಾಶ ಕಲ್ಪಿಸಬೇಕಾಗಿತ್ತು. ಆದರೆ ಯಾವುದೇ ಸಾರ್ವಜನಿಕ ಪ್ರಕ್ರಿಯೆ ಅನುಸರಿಸದೆ ಆಯ್ಕೆ ಮಾಡಲಾಗಿದೆ ಎಂದು ದೂರಿದರು.

“ಸಮುದಾಯದ ಬಡವರ ಪರವಾಗಿ ಸೇವೆ ಸಲ್ಲಿಸಿರುವವರಿಗೆ ಆದ್ಯತೆ ನೀಡಬೇಕಾಗಿತ್ತು. ಆದರೆ ಜೆಡಿ ಶ್ರೀನಿವಾಸನ್ ತಮ್ಮ ಇಷ್ಟದವರಿಗೆ ಮಾತ್ರ ಅರ್ಜಿಗಳನ್ನು ಪಡೆದು ಆಯ್ಕೆ ಮಾಡಿದ್ದಾರೆ,” ಎಂದು ಆರೋಪಿಸಿದರು.

ಹಿಂದಿನ ವರ್ಷಗಳಲ್ಲಿ ಜಾಗೃತಿ ಸಮಿತಿಗೆ ನೂರಾರು ಅರ್ಜಿಗಳು ಬಂದಿದ್ದ ದಾಖಲೆಗಳಿವೆ. ಆದರೆ ಈ ಬಾರಿ ಕೆಲ ಶಾಸಕರ ಶಿಫಾರಸ್ಸಿನ ಆಧಾರದಲ್ಲಿ ರಾಜಕೀಯ ಏಜೆಂಟರು ಹಾಗೂ ಸಮುದಾಯದ ಬಗ್ಗೆ ಅರಿವು ಇಲ್ಲದವರನ್ನು ಆಯ್ಕೆ ಮಾಡಿ ಜಿಲ್ಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಲಾಗಿದೆ ಎಂದು ಅವರು ಟೀಕಿಸಿದರು.

ದಮನಿತರ ಸೇವಾ ಸಮಿತಿ ಸಂಸ್ಥಾಪಕ ರಾಜ್ಯಾಧ್ಯಕ್ಷ ಮೇಡಿಹಾಳ ಮುನಿಅಂಜಿನಪ್ಪ ಮಾತನಾಡಿ, ಶ್ರೀನಿವಾಸನ್ ಮೂಲತಃ ತೋಟಗಾರಿಕೆ ಇಲಾಖೆಯ ಅಧಿಕಾರಿ ಆಗಿದ್ದು, ಪ್ರಭಾರಿಯಾಗಿ ಸಮಾಜ ಕಲ್ಯಾಣ ಇಲಾಖೆಗೆ ನಿಯೋಜನೆಗೊಂಡಿದ್ದಾರೆ. ಹಿಂದಿನ ವರ್ಷಗಳಲ್ಲಿ ಜಾಗೃತಿ ಸಮಿತಿಗೆ ನೂರಾರು ಅರ್ಜಿಗಳು ಬಂದಿದ್ದ ದಾಖಲೆಗಳಿವೆ. ಆದರೆ ಈ ಬಾರಿ ಕೆಲ ಶಾಸಕರ ಶಿಫಾರಸ್ಸಿನ ಆಧಾರದಲ್ಲಿ ರಾಜಕೀಯ ಏಜೆಂಟರು ಹಾಗೂ ಸಮುದಾಯದ ಬಗ್ಗೆ ಅರಿವು ಇಲ್ಲದವರನ್ನು ಆಯ್ಕೆ ಮಾಡಿ ಜಿಲ್ಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಲಾಗಿದೆ ಅವರಿಗೆ ದಲಿತರ ಸಮಸ್ಯೆಗಳು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಕಾರ್ಯವೈಖರಿ ಬಗ್ಗೆ ಅರಿವು ಇಲ್ಲ ಎಂದು ಆರೋಪಿಸಿದರು.

ಇದಲ್ಲದೆ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆಯುತ್ತಿದೆ ಎಂದು ಆರೋಪಿಸಿದ ಅವರು, ಶ್ರೀನಿವಾಸನ್ ಅವರ ನಿಯೋಜನೆಯನ್ನು ತಕ್ಷಣ ರದ್ದುಪಡಿಸಿ, ದಲಿತರ ಬಗ್ಗೆ ಕಾಳಜಿ ಹೊಂದಿರುವ ನಿಷ್ಠಾವಂತ ಅಧಿಕಾರಿಯನ್ನು ನೇಮಕ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ದಲಿತ ನಾರಾಯಣಸ್ವಾಮಿ, ಗಾಂಧಿನಗರ ಚೇತನ್ ಬಾಬು, ಮೋಚಿಪಾಳ್ಯ ನಾಗೇಶ್, ರಾಜಕುಮಾರ್, ರಾಂಪುರ ಮುನಿರಾಜು, ಅಂಬೇಡ್ಕರ್ ನಗರ ಮಂಜುನಾಥ್, ಜ್ಞಾನೇಶ್, ಕರಗಪ್ಪ, ಮತ್ತಿಕುಂಟೆ ಕೃಷ್ಣಪ್ಪ ಸೇರಿದಂತೆ ದಲಿತ ಸಂಘಟನೆಗಳ ಸಂಯುಕ್ತ ರಂಗದ ಹಲವು ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಶ್ರೀ ಲಕ್ಷ್ಮಿನರಸಿಂಹ ಸ್ವಾಮಿ ದೇವಸ್ಥಾನದ ರಾಜಗೋಪುರ ನಿರ್ಮಾಣಕ್ಕೆ ಭೂಮಿಪೂಜೆ

ಶ್ರೀನಿವಾಸಪುರ

ಪಟ್ಟಣದ ತಾಲ್ಲೂಕು ಕಚೇರಿ ಮುಂಭಾಗದಲ್ಲಿರುವ ಶ್ರೀ ಲಕ್ಷ್ಮಿ ನರಸಿಂಹ ಸ್ವಾಮಿ ದೇವಸ್ಥಾನದ ರಾಜಗೋಪುರ ನಿರ್ಮಾಣ ಕಾಮಗಾರಿಗೆ ಶಾಸಕ ಜಿ.ಕೆ. ವೆಂಕಟಶಿವಾರೆಡ್ಡಿ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

“ಈ ಕಾಮಗಾರಿಯ ಬಗ್ಗೆ ನನಗೆ ಯಾರೂ ಮಾಹಿತಿ ನೀಡಿರಲಿಲ್ಲ. ದೇವರೇ ನನಗೆ ಪ್ರೇರಣೆ ನೀಡಿ ನನ್ನಿಂದ ಈ ಕಾರ್ಯ ಮಾಡಿಸುತ್ತಿದ್ದಾರೆ. ಈ ಅವಕಾಶವನ್ನು ದೇವರು ನೀಡಿರುವುದಕ್ಕೆ ನಾನು ಧನ್ಯನು,” ಎಂದು ಅವರು ಅಭಿಪ್ರಾಯಪಟ್ಟರು.



ಪ್ರಸ್ತುತ ಕಾಮಗಾರಿಗೆ ಶಾಸಕ ನಿಧಿಯಿಂದ ರೂ.1 ಕೋಟಿ ಹಾಗೂ ಮುಜರಾಯಿ ಇಲಾಖೆಯಿಂದ ರೂ.50 ಲಕ್ಷ ಅನುದಾನ ಮಂಜೂರಾಗಿದ್ದು, ಒಟ್ಟು ರೂ.1.50 ಕೋಟಿ ವೆಚ್ಚದಲ್ಲಿ ರಾಜಗೋಪುರ ನಿರ್ಮಾಣ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ತಾವು ಎಲ್ಲಾ ಸಮುದಾಯಗಳ ಅಭಿವೃದ್ಧಿಗೆ ಸಹಕಾರ ನೀಡಲು ಸಿದ್ಧರಾಗಿದ್ದು, ಪಟ್ಟಣದಲ್ಲಿ ಬಾಕಿ ಉಳಿದಿರುವ ಇತರ ಕಾಮಗಾರಿಗಳಿಗೂ ಶೀಘ್ರದಲ್ಲೇ ಚಾಲನೆ ನೀಡಲಾಗುವುದು ಎಂದು ಭರವಸೆ ನೀಡಿದರು.

ರಾ. ವೈಶ್ಯ ಕ್ಷೇಮಾಭಿವೃದ್ಧಿ ಸಂಘದ ವೈ. ಆರ್. ಪ್ರಕಾಶ್ ಮಾತನಾಡಿ, ಗುತ್ತಿಗೆದಾರರು, ಇಂಜಿನಿಯರ್‌ಗಳು ಹಾಗೂ ಸ್ಥಳೀಯರ ಸಹಕಾರದೊಂದಿಗೆ ಗುಣಮಟ್ಟದ ಕಾಮಗಾರಿಯನ್ನು ಒಂದು ವರ್ಷದೊಳಗೆ ಪೂರ್ಣಗೊಳಿಸಲಾಗುವುದು ಎಂದು ಹೇಳಿದರು.

ದೇವಸ್ಥಾನದ ಪ್ರಧಾನ ಅರ್ಚಕ ಸುಬ್ರಮಣ್ಯಂ ಹಾಗೂ ತಂಡವು ಪೂಜಾ ಕಾರ್ಯಕ್ರಮ ನೆರವೇರಿಸಿದರು.

ಈ ಸಂದರ್ಭದಲ್ಲಿ ಇಒ ಕೆ. ಸರ್ವೇಶ್, ಪುರಸಭೆ ಮುಖ್ಯಾಧಿಕಾರಿ ವಿ. ನಾಗರಾಜ್, ಜಿ.ಪಂ ಮಾಜಿ ಅಧ್ಯಕ್ಷ ತೂಪಲ್ಲಿ ಆರ್. ನಾರಾಯಣಸ್ವಾಮಿ, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಡಾ. ಕೆ.ಎನ್. ವೇಣುಗೋಪಾಲ್, ಬಿಜೆಪಿ ಮಂಡಲ ಅಧ್ಯಕ್ಷ ರೋಣೂರ್ ಆರ್.ಎನ್. ಚಂದ್ರಶೇಖರ್, ಹಳೇಪೇಟೆ ಮಂಜುನಾಥ್‌ರೆಡ್ಡಿ, ಇಂದಿರಾ ಭವನ ರಾಜಣ್ಣ ಸೇರಿದಂತೆ ಹಲವು ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಬೇಸಿಗೆಯ ನಿರ್ವಹಣೆ ಭಾರೀ ಅವ್ಯವಹಾರ: ಪಿಡಿಒ, ಆಡಳಿತಾಧಿಕಾರಿ ಕುಮ್ಮಕ್ಕು..?

ಪಾವಗಡ

ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿಗಳು ಪಿಡಿಒ ಮತ್ತು ಕಾರ್ಯದರ್ಶಿಗಳ ಕುಮ್ಮಕ್ಕು ನೀಡಿ ಬೇಸಿಗೆ ನಿರ್ವಹಣೆಗೆ ಬಿಡುಗಡೆಯಾದ ನಿಧಿಯನ್ನು ನಿರ್ವಹಣೆ ಹೆಸರಲ್ಲಿ ಸುಲಭವಾಗಿ ಅವ್ಯವಹಾರ ಮಾಡುತ್ತಿದ್ದಾರೆ ಎಂಬ ಆರೋಪಗಳು ಕೇಳಿ ಬರುತ್ತಿದ್ದು, ಮೇಲ್ನೋಟಕ್ಕೆ ಮಾತ್ರ ಬೇಸಿಗೆ ನಿರ್ವಹಣೆ ಸವಾಲು ಎಂದು ಹೇಳುತ್ತಾರೆ. ಸ್ಥಳೀಯ ಆಡಳಿತವು ಹೆಚ್ಚುವರಿ ಆಡಳಿತಾಧಿಕಾರಿಗಳಿಗೆ ವರವಾಗಿದೆ ಎಂದೂ ದೂರಲಾಗುತ್ತಿದೆ.

ತಾಲ್ಲೂಕಿನ ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಗಳು ನೇಮಕವಾಗಿದ್ದು, ಬಿರು ಬೇಸಿಗೆಯಲ್ಲಿ ಹಳ್ಳಿಗಳಲ್ಲಿ ಕುಡಿಯುವ ನೀರು, ಸ್ವಚ್ಛತೆ, ಬೀದಿ ದ್ವೀಪ, ಹಲವು ಸಮಸ್ಯೆಗಳು ನಿರಂತರವಾಗಿ ಕಾಡುತ್ತಿರುತ್ತವೆ.

ತಹಸೀಲ್ದಾರ್, ಇಒ, ರೇಷ್ಮೆ, ತೋಟಗಾರಿಕೆ, ಕೃಷಿ, ಅರಣ್ಯ, ಪಶುಪಾಲನೆ, ಲೋಕೋಪಯೋಗಿ, ಹಲವು ಇಲಾಖೆಗಳು ಸೇರಿದಂತೆ ಬಹುತೇಕ ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೂ ಸ್ಥಳೀಯ ಆಡಳಿತಾಧಿಕಾರಿ ಜವಾಬ್ದಾರಿ ವಹಿಸಲಾಗಿದೆ. ಒಟ್ಟಾರೆ ಪ್ರತಿ ಅಧಿಕಾರಿಗಳಿಗೂ ಎರಡು ಮೂರು ಗ್ರಾಪಂ ಆಡಳಿತ ಹೊಣೆಗಾರಿಕೆ ಇದೆ.ಈಗಾಗಲೇ ಜಿ ಪಂ,ತಾ ಪಂ, ಸದಸ್ಯರಿಲ್ಲದೆ,ಅಧಿಕಾರಿಗಳದ್ದೇ ಮೇಲುಗೈಯಾಗಿದೆ.

ಕಾಮಗಾರಿ ತಪಾಸನೆ ಇಲ್ಲದೇ ಬಿಲ್ಲುಗಳು ಡ್ರಾ ಬಿರು ಬಿಸಿಲಿನ ತಾಪಮಾನ



ನೆಪದಲ್ಲಿ ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರು ಕ್ಷಾಮ ಎದುರಿಸಲು ಪ್ರತ್ಯೇಕವಾಗಿ ನಿಧಿಯು ಕಾಲ ಕಾಲಕ್ಕೆ ಬಿಡುಗಡೆ ಗೊಳಿಸುತ್ತಿದೆ. ಆದರೆ ಗ್ರಾಪಂ ಅಧಿಕಾರಿಗಳು ಬೇಸಿಗೆಯ ನೆಪವನ್ನು ಮುಂದಿಕ್ಕಿ ಬೋರ್ವೆಲ್ ಕೊರತೆ,ಪಂಪು ಸುಟ್ಟುಹೋಗಿದೆ,ಸ್ಟೀಲ್ ಪೈಪ್ ಗಳಲ್ಲಿ ನೀರು ಸೋರಿಕೆ ಎಂಬ ಸಮಸ್ಯೆಗಳು ತೋರ್ಪಡಿಸಿ,ಕುಡಿಯುವ ನೀರಿನ ಮಾಡಿದ ಕಾಮಗರಿಗಳೇ ಪದೇ ಪದೇ ಸಮಸ್ಯೆ ತೋರಿಸಿ ಬರೀ ನಕಲಿ ಬಿಲ್ಲುಗಳು ಡ್ರಾ ಮಾಡುತ್ತಿದ್ದಾರೆ. ಪ್ರಯುಕ್ತ ಸ್ಥಳೀಯ ಆಡಳಿತಕ್ಕೆ ನೇಮಕವಾದ ಆಡಳಿತಾಧಿಕಾರಿಗಳು ನೈಜತೆ, ಪರಿವಿಕ್ಷಿಸಿ ಸಾರ್ವಜನಿಕರ ತೆರಿಗೆ ಹಣಕ್ಕೆ ನ್ಯಾಯ ದೊರಕಿಸುವಂತಾಗಬೇಕು ಎಂದು ಜನತೆಯ ಹಕ್ಕೋತ್ತಯವಾಗಿದೆ.

**ಗ್ರಾಪಂದಲ್ಲಿ ಯೋಜನೆಗಳು ಪರಿಣಾಮಕಾರಿ ಅನುಷ್ಠಾನ ಜಾರಿ:** ಗ್ರಾಪಂ ಅಧಿಕಾರಿಗಳು ಕೆಲಹಂತದಲ್ಲಿ ನೈಜವಾದ ಕೆಲಸಗಳು ಗುರುತಿಸಬೇಕು,ಒಂದೇ ಕಾಮಗಾರಿಯನ್ನು ಪದೇ ಪದೇ ತೋರಿಸಿ ಹಣವು ಲೂಟಿ ಮಾಡುತ್ತಿರುವುದಕ್ಕೆ ಆಡಳಿತಾಧಿಕಾರಿಗಳು ಕಡಿವಾಣ ಹಾಕಬೇಕು ಆದರೆ ಗ್ರಾಪಂ ಪಿಡಿಒ,ಗಳ ಹತ್ತಿರ ಕೈಜೋಡಿಸಿ,ಬೇಲಿ ಎದ್ದು ಹೊಲ ಮೇಯ್ದಂಗೆ ಆಗುತ್ತಿದೆ, ಪರಿವೀಕ್ಷಕರು ಮಿಲಾಕತ್ ಆದರೆ ಎಷ್ಟರ ಮಟ್ಟಿಗೆ ಸರಿ. ಯೋಜನೆಗಳು ಪರಿಣಾಮಕಾರಿಯಾಗಿ ಅನುಷ್ಠಾನ ಗೊಳಿಸಬೇಕು ಆಡಳಿತಾಧಿಕಾರಿಗಳು ನೈಜತೆಗೆ ಬದ್ಧರಾಗಿ ಆಡಳಿತ ನೆಡಸಬೇಕು ಎಂದು ಗ್ರಾಪಂ ಗಳ ಸ್ಥಳೀಯರಲ್ಲಿ ಆಕ್ರೋಶ ವ್ಯಕ್ತವಾಗುತ್ತಿದೆ.

ಗ್ರಾ ಪಂನ ಪಿಡಿಒ ಮತ್ತು ಸಿಬ್ಬಂದಿಗಳು ಬೇಸಿಗೆಯ ಕಾಲದ ಕುಡಿಯುವ ನೀರು,ಸ್ವಚ್ಛತೆ, ನಿರ್ವಹಣೆಯಲ್ಲಿ ಸಾಕಷ್ಟು ಅವ್ಯವಹಾರ ನೆಡೆದಿದ್ದು,ಕೆಲವರು ಅಮಾನತ್ತು ಆಗಿರುತ್ತಾರೆ.ಇಲಾಖೆಯು ಗಮನಿಸಿ ಜಿ.ಪಂ.ನ ತಾಲ್ಲೂಕಿನ ಗ್ರಾಮೀಣ ನೈರ್ಮಲ್ಯ ಇಲಾಖೆಯು ಗ್ರಾಪಂ ಪೈಕಿ ಕೆಲವೊಂದು ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮೆಸ್ಯೆಗಳು ಮಂದಗತಿಯಲ್ಲಿ ಎದುರಾಗುತ್ತಿವೆ. ಗ್ರಾಮೀಣರಿಂದ ಬರುವ ಅಹವಾಲುಗಳು ಮುಖೇನ ಶಾಸಕ ಹೆಚ್ ವಿ ವೆಂಕಟೇಶ್ ಸೂಚನೆ ಮೇರೆಗೆ ಕಾಲ ಕಾಲಕ್ಕೆ ಗಮನಿಸಿ ಬೋರ್ವೆಲ್, ಟ್ಯಾಂಕರ್ ಗಳ ಮೂಲಕ ಜಿಪಂ ನ ತಾಲ್ಲೂಕಿನ ಗ್ರಾಮೀಣ ನೈರ್ಮಲ್ಯ ಮತ್ತು ಕುಡಿಯುವ ನೀರಿನ ಇಲಾಖೆ ಅಧಿಕಾರಿಗಳು ನೀರಿನ ವ್ಯವಸ್ಥೆ ಮಾಡಲಾಗುತ್ತಿದ್ದರಿಂದ ಬಿರು ಬೇಸಿಗೆಯಲ್ಲಿ ನೀರಿನ ಆಹಾಕಾರ ಕಾಣುತ್ತಿಲ್ಲವಾಗಿದೆ. ಈ ಬಗ್ಗೆ ಉದಾಸಿನ ತಾಳದೇ ಜಿಪಂ ನ ಕುಡಿಯುವ ನೀರು ಮತ್ತು ನೈರ್ಮಲ್ಯನ ಅಧಿಕಾರಿಗಳು ಮತ್ತಷ್ಟು ಹೆಚ್ಚುವರಿಯಾಗಿ ಗಮನಹರಿಸಿ ನಿಭಾಯಿಸಬೇಕಾಗಿದೆ.

ಆಳುವ ಸರ್ಕಾರವು ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸದೇ ಸಂವಿಧಾನ ವಿರೋಧಿ ಸಾಮಾಜಿಕ ನ್ಯಾಯ ಜನ ವಿರೋಧಿ ನಡೆಯನ್ನು ಅನುಸರಿಸುತ್ತಿದೆ. ಇದರಿಂದ ಗ್ರಾಮೀಣ ಭಾಗದ ಅಭಿವೃದ್ಧಿ ಕುಂಠಿತಗೊಂಡಿದೆ. ಗ್ರಾಪಂ ಆಡಳಿತಾಧಿಕಾರಿಗಳ ನೇಮಕ ಕಣ್ಣೊರೆಸುವ ತಂತ್ರವಾಗಿದೆ. ಹಳ್ಳಿಗಳಲ್ಲಿ ಸ್ವಚ್ಛತೆ ಕುಡಿಯುವ ನೀರಿನ ಪೈಪ್ಲೈನ್ ಕಾಮಗಾರಿಗಳ ನಕಲಿ ಬಿಲ್ಲುಗಳಿಗೆ ಶೇಕಡಾವಾರು ಹಣ ಪಡೆದು ಸಹಿ ಹಾಕುತ್ತಿದ್ದಾರೆ. ಆಡಳಿತಾಧಿಕಾರಿಗಳು ಹಳ್ಳಿಗರ ಹಣವು ಸುಗಮವಾಗಿ ಲೂಟಿ ಮಾಡಲು ಶಾಮೀಲಾಗುತ್ತಿದ್ದಾರೆ.

ಇಂತಹ ಅವ್ಯವಸ್ಥೆಗೆ ಸರ್ಕಾರವು ಕಡಿವಾಣ ಮತ್ತು ರದ್ದು ಮಾಡಿ, ಗುಣಾತ್ಮಕ ಕಾರ್ಯಭಾರ ನಡೆಸಲು ಸರ್ಕಾರ ಚಿಂತಿಸಿ ಈ ಬಗ್ಗೆ ಸರ್ಕಾರವು ಹೆಚ್ಚತ್ತು ಕೊಳ್ಳಬೇಕು ಎಂದರು.

# 3 ದಿನಗಳ ತರಬೇತಿ ಕಾರ್ಯಾಗಾರ

ಬೆಂ.ಗ್ರಾ ಜಿಲ್ಲೆ

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ವತಿಯಿಂದ “ಸುಧಾರಿತ ದತ್ತಾಂಶ ವಿಜ್ಞಾನ, ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ" ("Advanced Data Science, Artificial Intelligence & Machine Learning") ವಿಷಯದ ಮೇಲೆ ಮೇ. 18 ರಿಂದ 20 ರವರೆಗೆ ಮೂರು ದಿನಗಳ ತರಬೇತಿ ಕಾರ್ಯಾಗಾರವನ್ನು ಅಕಾಡೆಮಿಯ ಕಛೇರಿಯಲ್ಲಿ ಆಯೋಜಿಸಲಾಗಿದೆ.

ಕಾರ್ಯಾಗಾರದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ಮತ್ತು ತಂತ್ರಜ್ಞಾನಿಗಳು ಉಪನ್ಯಾಸಗಳನ್ನು ನೀಡಲಿದ್ದು, ಆಸಕ್ತ ವಿಜ್ಞಾನ ಪದವಿ, ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಉಪನ್ಯಾಸಕರು/ಪ್ರಾಧ್ಯಾಪಕರು ಹಾಗೂ ವಿಜ್ಞಾನಾಸಕ್ತರು ಮೇ 16 ರಳೊಗಾಗಿ (Google Form: https://forms.gle/Dyf9KfQ8ShnRLDHH6) ಮೂಲಕ ನೊಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಕಾರ್ಯಾಗಾರದ ಸಂಯೋಜಕರಾದ ಶ್ರೀನಿವಾಸು ವಿ.ಕೆ. ವೈಜ್ಞಾನಿಕಾಧಿಕಾರಿ, ದೂ. ಸಂಖ್ಯೆ: 9620767819 ಅಥವಾ ಅಕಾಡಮಿಯ ವೆಬ್ ಸೈಟ್ – https://kstacademy.in ಸಂಪರ್ಕಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಆನಂದ್ ಆರ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೋಷಕರ ಪತ್ತೆಗಾಗಿ ಮನವಿ

ಕೋಲಾರ

ಶ್ರೀನಿವಾಸಪುರ ತಾಲ್ಲೂಕಿನ ಕೊರ್ನಹಳ್ಳಿ ಗ್ರಾಮದ ಕಾಡು ಪ್ರದೇಶದಲ್ಲಿ ಪ್ಲಾಸ್ಟಿಕ್ ಕವರ್‌ನಲ್ಲಿ ಸುತ್ತಿ ಹಾಕಿರುವಂತಹ ಶಿಶುವನ್ನು ಶೋಭ ಮತ್ತು ರವಿ ದಂಪತಿಗಳು ಯಲ್ದೂರು ಗ್ರಾಮ, ಶ್ರೀನಿವಾಸಪುರ ತಾಲ್ಲೂಕು ರವರು ನವಜಾತ ಮಗುವನ್ನು ರಕ್ಷಣೆ ಮಾಡಿರುತ್ತಾರೆ.

ಶೋಭ ಮತ್ತು ರವಿ ದಂಪತಿಗಳು ಯಲ್ದೂರು ಆಸ್ಪತ್ರೆಗೆ ಮಗುವಿನೊಂದಿಗೆ ಚಿಕಿತ್ಸೆಗಾಗಿ ಭೇಟಿ ನೀಡಿದಾಗ ಆಸ್ಪತ್ರೆಯ ಸಿಬ್ಬಂದಿಗಳು ಮಕ್ಕಳ ಸಹಾಯವಾಣಿಗೆ ಕರೆ ಮೂಲಕ ತಿಳಿಸಿದ್ದು, ಕೂಡಲೇ ಮಕ್ಕಳ ಸಹಾಯವಾಣಿ ಸಿಬ್ಬಂದಿಗಳು ಸ್ಥಳಕ್ಕೆ ಭೇಟಿ ನೀಡಿ ನವಜಾತ ಗಂಡು ಶಿಶುವನ್ನು ಹಾಗೂ ಮಗುವನ್ನು ಸಾಕುತ್ತಿದ್ದ ಶೋಭ ಮತ್ತು ರವಿ ದಂಪತಿಗಳನ್ನು ಏಪ್ರಿಲ್ 15 ರಂದು ಕೋಲಾರ ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರು ಪಡಿಸಿರುತ್ತಾರೆ.

ಕೋಲಾರ ಮಕ್ಕಳ ಕಲ್ಯಾಣ ಸಮಿತಿಯು ನವಜಾತ ಗಂಡು ಶಿಶುವನ್ನು ಇಲಾಖೆಯ ವಶಕ್ಕೆ ಪಡೆದು ಪಾಲನೆ, ಪೋಷಣೆ ಹಾಗೂ ರಕ್ಷಣೆಗಾಗಿ ಸರ್ಕಾರಿ ವಿಶೇಷ ದತ್ತು ಸಂಸ್ಥೆಯಲ್ಲಿ ದಾಖಲಾಗಿದೆಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ‘ರಣಭೈರೇಗೌಡ ವಾರಿಯರ್ಸ್’ ತಂಡದ ಲಾಂಛನ ಹಾಗೂ ಉಡುಪು ಅನಾವರಣ

ದೇವನಹಳ್ಳಿ

ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಅವರ ಜನ್ಮದಿನ ಹಾಗೂ ಜನತಾ ದಳ (ಸೆಕ್ಯುಲರ್) ಪಕ್ಷದ ರಜತ ಮಹೋತ್ಸವದ ಅಂಗವಾಗಿ ಆಯೋಜಿಸಿರುವ ರಾಜ್ಯ ಮಟ್ಟದ ‘ಜನತಾ ಪ್ರೀಮಿಯರ್ ಲೀಗ್’ ಕ್ರಿಕೆಟ್ ಪಂದ್ಯಾವಳಿಯಲ್ಲಿ ಭಾಗವಹಿಸಲಿರುವ ಬೆಂಗಳೂರು ಗ್ರಾಮಾಂತರ ಜಿಲ್ಲೆಯ “ರಣಭೈರೇಗೌಡ ವಾರಿಯರ್ಸ್” ತಂಡದ ಲಾಂಛನ ಮತ್ತು ಕ್ರೀಡಾ ಉಡುಪನ್ನು ದೇವನಹಳ್ಳಿಯ ಕೊಡಗುರ್ಕಿಯಲ್ಲಿ ಅದ್ದೂರಿಯಾಗಿ ಅನಾವರಣಗೊಳಿಸಲಾಯಿತು.

ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಡಾ. ನಿಸರ್ಗ ನಾರಾಯಣಸ್ವಾಮಿ, ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ವಿ. ಮಂಜುನಾಥ್ ಹಾಗೂ ತಾಲ್ಲೂಕು ಅಧ್ಯಕ್ಷ ಎಸ್. ಮಹೇಶ್ ಅವರು ಜಂಟಿಯಾಗಿ ತಂಡದ ಲೋಗೋ ಬಿಡುಗಡೆ ಮಾಡಿ ಆಟಗಾರರಿಗೆ ಶುಭ ಹಾರೈಸಿದರು.




ಪಕ್ಷದ ಕಾರ್ಯಕರ್ತರಲ್ಲಿ ಉತ್ಸಾಹ ತುಂಬುವ ಉದ್ದೇಶದಿಂದ ಜೆಡಿಎಸ್ ಸಾಮಾಜಿಕ ಜಾಲತಾಣ ವಿಭಾಗ ಹಾಗೂ ಯುವ ಜನತಾದಳದ ವತಿಯಿಂದ ಮೇ 15, 16 ಮತ್ತು 17ರಂದು ಬೆಂಗಳೂರಿನ ನೈಸ್ ಗ್ರೌಂಡ್ ನಲ್ಲಿ ರಾಜ್ಯ ಮಟ್ಟದ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗಿದೆ.

ಈ ವೇಳೆ ಮಾತನಾಡಿದ ಮಾಜಿ ಶಾಸಕ ಡಾ. ನಿಸರ್ಗ ನಾರಾಯಣಸ್ವಾಮಿ, “ಪಕ್ಷದ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಇಂತಹ ರಾಜ್ಯ ಮಟ್ಟದ ಕ್ರೀಡಾಕೂಟ ಆಯೋಜಿಸಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ತಂಡವು ಉತ್ತಮ ಪ್ರದರ್ಶನ ನೀಡಿ ಗೆದ್ದು ಬರಲಿ,” ಎಂದು ಹಾರೈಸಿದರು.

ತಂಡದ ನಾಯಕ ಮನು ನೇತೃತ್ವದಲ್ಲಿ ಆಟಗಾರರಾದ ಸಂತೋಷ್, ರಾಮ್ ಎಸ್., ಬಾಲಕೃಷ್ಣ ವಿ.ಎಂ., ಪ್ರದೀಪ್ ಕೆ.ಎನ್., ನಿಖಿಲ್ ಬಿ.ಕೆ., ಗೌತಮ್, ಮುರಳಿಧರ್, ಮಹೇಶ್ ಬಾಬು ಎಸ್., ವೆಂಕಟೇಶ್, ಭರತ್ ಜಿ.ಪಿ., ಕೆಂಪೇಗೌಡ ಜಿ., ಪುನೀತ್ ಗೌಡ ಆರ್. ಹಾಗೂ ನಿಶ್ಚಲ್ ಹೊಸ ಕ್ರೀಡಾ ಉಡುಪಿನಲ್ಲಿ ಗಮನ ಸೆಳೆದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಮನೋಹರ್, ಜೆಡಿಎಸ್ ಯುವ ಘಟಕದ ಅಧ್ಯಕ್ಷ ಟಿ. ರವಿ, ಮುಖಂಡರಾದ ಜಗದೀಶ್, ವೆಂಕಟೇಶ್ ಮೂರ್ತಿ, ಗೌರೀಶ್, ಚೇತನ್, ಮಂಜುನಾಥ್, ಮುರುಳಿ, ಅಭಿ, ಮನು, ಸೋಮ ಸೇರಿದಂತೆ ಹಲವು ಕಾರ್ಯಕರ್ತರು ಉಪಸ್ಥಿತರಿದ್ದರು.

# ಉಚಿತ ಸಮವಸ್ತ್ರ ವಿತರಣೆ

ವಿಜಯಪುರ

ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜಿಗೆ ಪ್ರಥಮ ಪಿಯುಸಿ, ಹಾಗೂ ದ್ವಿತೀಯ ಪಿಯುಸಿಗೆ ದಾಖಲಾಗುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಸಮವಸ್ತ್ರಗಳು ಹಾಗೂ ಪಠ್ಯಪುಸ್ತಕಗಳನ್ನು ವಿತರಣೆ ಮಾಡಲಾಗುತ್ತದೆ ಎಂದು ಕಾಲೇಜು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಎಜಾಜ್ ಅಹಮದ್ ಅವರು ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಸರಕಾರದಿಂದ, ಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ ಅಗತ್ಯವಾಗಿರುವ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಿಕೊಡಲಾಗುತ್ತಿದೆ. ಸರಕಾರಿ ಶುಲ್ಕವನ್ನು ಮಾತ್ರ ಪಾವತಿಸಿದರೆ ಸಾಕು, ಸರಕಾರದಿಂದ ಉಚಿತವಾಗಿ ಪಠ್ಯಪುಸ್ತಕಗಳ ವಿತರಣೆ, ದಾನಿಗಳ ಸಹಕಾರದಿಂದ ಉಚಿತವಾಗಿ ಸಮವಸ್ತ್ರಗಳನ್ನು ವಿತರಣೆ ಮಾಡಲಾಗುತ್ತದೆ.

ವಿಷಯವಾರು ನುರಿತ ಉಪನ್ಯಾಸಕರಿದ್ದಾರೆ. ವಿಶಾಲವಾದ ಆಟದ ಮೈದಾನವಿದೆ. ಹೆಣ್ಣು ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಪ್ರತಿಯೊಂದು ಕೊಠಡಿಗೂ ಸಿ.ಸಿ.ಕ್ಯಾಮರಾಗಳನ್ನು ಅಳವಡಿಕೆ ಮಾಡಲಾಗಿದೆ. 2026–27 ನೇ ಸಾಲಿನಲ್ಲಿ ದ್ವಿತೀಯ ಪಿಯುಸಿಯಲ್ಲಿ ಉತ್ತಮ ಫಲಿತಾಂಶವೂ ಬಂದಿದ್ದು, ಇಂತಹ ಅವಕಾಶಗಳನ್ನು ಪೋಷಕರು ಹಾಗೂ ವಿದ್ಯಾರ್ಥಿಗಳು ಸದುಪಯೋಗ ಮಾಡಿಕೊಳ್ಳಬೇಕಿದೆ ಎಂದು ಅವರು ಮನವಿ ಮಾಡಿದರು.

# ಕೆಟ್ಟು ನಿಂತ ಶುದ್ಧ ಕುಡಿಯುವ ನೀರಿನ ಘಟಕ

ಬೇತಮಂಗಲ

ಅಯ್ಯಪಲ್ಲಿ ಗ್ರಾಮದಲ್ಲಿ ಕಳೆದ ಸುಮಾರು ಏಳು ವರ್ಷಗಳಿಂದ ಶುದ್ಧ ಕುಡಿಯುವ ನೀರಿನ ಘಟಕ ಕೆಟ್ಟು ನಿಂತಿದ್ದು, ಗ್ರಾಮಸ್ಥರು ಶುದ್ಧ ನೀರಿಗಾಗಿ ಪರದಾಡುತ್ತಿರುವ ಘಟನೆ ಬೆಳಕಿಗೆ ಬಂದಿದೆ. ಈ ಗ್ರಾಮವು ಟಿ. ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದೆ.

ಗ್ರಾಮದಲ್ಲಿ ವೃದ್ಧರು ಮತ್ತು ಮಕ್ಕಳ ಸಂಖ್ಯೆ ಹೆಚ್ಚಿದ್ದು, ಫ್ಲೋರೈಡ್ ಮಿಶ್ರಿತ ನೀರನ್ನು ಬಳಸುವ ಪರಿಸ್ಥಿತಿ ನಿರ್ಮಾಣವಾಗಿರುವುದರಿಂದ ಅನೇಕರು ಆರೋಗ್ಯ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಹಲವು ಬಾರಿ ಪಂಚಾಯಿತಿ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಶುದ್ಧ ಕುಡಿಯುವ ನೀರಿಗಾಗಿ ಗ್ರಾಮಸ್ಥರು ಪಕ್ಕದ ಅಂಕತಟ್ಟಹಳ್ಳಿ ಹಾಗೂ ಬೇತಮಂಗಲ ಗ್ರಾಮಗಳಿಗೆ ತೆರಳಿ ನೀರು



ತರಬೇಕಾದ ಪರಿಸ್ಥಿತಿ ಎದುರಾಗಿದೆ. ವಾಹನ ಸೌಲಭ್ಯವಿಲ್ಲದ ಕುಟುಂಬಗಳು ಇನ್ನಷ್ಟು ಸಂಕಷ್ಟ ಅನುಭವಿಸುತ್ತಿದ್ದು, ಶುದ್ಧ ನೀರಿನ ಅಭಾವದಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

“ಆರೋಗ್ಯವೇ ಮಹಾಭಾಗ್ಯ. ಶುದ್ಧ ನೀರು ಪ್ರತಿಯೊಬ್ಬರಿಗೂ ಲಭ್ಯವಾಗುವಂತೆ ಮಾಡುವುದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಪ್ರಮುಖ ಜವಾಬ್ದಾರಿ. ಆದರೆ ಅಧಿಕಾರಿಗಳು ಬೇಜವಾಬ್ದಾರಿಯಿಂದ ವರ್ತಿಸುತ್ತಿದ್ದಾರೆ,” ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಹಿಂದಿನ ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಅಧ್ಯಕ್ಷರು ಮಾಡದ ಕೆಲಸವನ್ನು ಈಗ ಆಡಳಿತಾಧಿಕಾರಿಗಳಿಂದಲೂ ನಿರೀಕ್ಷಿಸಲಾಗುತ್ತಿಲ್ಲ. ಆಡಳಿತಾಧಿಕಾರಿಗಳ ಕಾರ್ಯವೈಖರಿ “ಆಟಕ್ಕೆ ಉಂಟು, ಲೆಕ್ಕಕ್ಕಿಲ್ಲ” ಎಂಬಂತಾಗಿದೆ ಎಂದು ಗ್ರಾಮಸ್ಥರು ಟೀಕಿಸಿದ್ದಾರೆ.

ತಾಲೂಕಿನ ಅನೇಕ ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರಿನ ಅದಾಲತ್ ಕಾರ್ಯಕ್ರಮಗಳು ನಡೆಯುತ್ತಿದ್ದರೂ, ಟಿ. ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಇಂತಹ ಕಾರ್ಯಕ್ರಮಗಳು ನಡೆದಿಲ್ಲ ಎಂದು ಗ್ರಾಮಸ್ಥರು ಬೇಸರ ವ್ಯಕ್ತಪಡಿಸಿದ್ದಾರೆ. ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಸಮಸ್ಯೆಯನ್ನು ತಕ್ಷಣ ಪರಿಹರಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಮಕ್ಕಳ ವಿಕಾಸಕ್ಕೆ ಬೇಸಿಗೆ ಶಿಬಿರ ಅವಶ್ಯಕ: ನಾರಾಯಣಸ್ವಾಮಿ

ಕೋಲಾರ

ಜಿಲ್ಲಾಡಳಿತ ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಜಿಲ್ಲಾ ಬಾಲಭವನ ಸೊಸೈಟಿ ವತಿಯಿಂದ ಜಿಲ್ಲಾ ಮಟ್ಟದ ಉಚಿತ ಬೇಸಿಗೆ ಶಿಬಿರದ ಸಮರೂಪ ಸಮಾರಂಭ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನಾರಾಯಣಸ್ವಾಮಿ ಎನ್, ರವರು ಮಾತನಾಡುತ್ತಾ ಮಕ್ಕಳ ವಿಕಾಸಕ್ಕೆ ಹಾಗೂ ಸರ್ವಾಂಗಿಣ ಬೆಳವಣಿಗೆಗೆ ಬೇಸಿಗೆ ಶಿಬಿರ ಅಗತ್ಯವೆಂದು ನುರಿತ ಸಂಪನ್ಮೂಲ ವ್ಯಕ್ತಿಗಳಿಂದ 15 ದಿನಗಳ ಕಾಲ 05 ರಿಂದ 16 ವರ್ಷದ ಮಕ್ಕಳಿಗೆ ಚಿತ್ರ ಕಲೆ, ಸಂಗೀತ, ಕ್ರಾಫ್ಟ್, ನೃತ್ಯ, ನಾಟಕ, ಯೋಗ, ಕರಾಟೆ ಚಟುವಟಿಕೆಗಳ ತರಬೇತಿ ನೀಡಿದ್ದು, ಇಂದು ವೇದಿಕೆ ಕಾರ್ಯಕ್ರಮದಲ್ಲಿ ಮಕ್ಕಳ ನೃತ್ಯ ಪೋಷಕರ ಮನ ಸೆಳೆಯುವಂತೆ ಮಾಡಿದ್ದು, ತರಬೇತಿ ನೀಡಿದ ಸಂಪನ್ಮೂಲ ವ್ಯಕ್ತಿಗಳಿಗೆ ಇಲಾಖೆ ಪರವಾಗಿ ಧನ್ಯವಾದಗಳನ್ನು ತಿಳಿಸಿದರು. ಇದೇ ರೀತಿ ಪ್ರತಿ ವರ್ಷವು ಸಹ ಜಿಲ್ಲಾ ಬಾಲಭವನ ಸೊಸೈಟಿ ವತಿಯಿಂದ ಬೇಸಿಗೆ ಸಮಯದಲ್ಲಿ ಶಾಲೆಗಳ ರಜೆ ಇದ್ದು ಮಕ್ಕಳು ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು.

ಜಿಲ್ಲಾ ನಿರೂಪಣಾಧಿಕಾರಿಗಳು ಹಾಗೂ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ನಾಗರತ್ನ ರವರು ಮಾತನಾಡುತ್ತಾ ಬೇಸಿಗೆ ಶಿಬಿರವು ಮಕ್ಕಳಿಗೆ ಶಾಲೆಯ ರಜಾ ದಿನಗಳಲ್ಲಿ ಮೊಬೈಲ್ ಮತ್ತು ಟಿ.ವಿ ಗಳಿಂದ ದೂರ ಉಳಿದು ವಿವಿಧ ಚಟುವಟಿಕೆಗಳನ್ನು ಕಲಿತು ವೇದಿಕೆ ಮೇಲೆ ಉತ್ತಮ ಪ್ರದರ್ಶನ ನೀಡಿದ್ದು, ತಮ್ಮ ಮಕ್ಕಳು ಸಹ ಬೇಸಿಗೆ ಶಿಬಿರದ ಸದುಪಯೋಗ ಪಡೆದುಕೊಂಡಿದ್ದು, ರಾಜ್ಯ ಬಾಲಭವನವು ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪೂರಕವಾಗಿದೆ ಎಂದು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಮುನಿರಾಜಪ್ಪ ರವರು ಮಾತನಾಡುತ್ತಾ ಬೇಸಿಗೆ ಶಿಬಿರದಲ್ಲಿ 15 ದಿನಗಳ ಕಾಲ ಚಿತ್ರ ಕಲೆ, ಸಂಗೀತ, ಕ್ರಾಫ್ಟ್, ನೃತ್ಯ, ನಾಟಕ, ಯೋಗ, ಕರಾಟೆ ಚಟುವಟಿಕೆಗಳ ತರಬೇತಿ ಉತ್ತಮ ಶಿಕ್ಷಕರಿಂದ ಸಿಕ್ಕಿದ್ದು ಇದರ ಜೊತೆಗೆ ಇತರೆ ಇಲಾಖೆಯ ಯೋಜನೆಗಳನ್ನು ಅರಿವುಮೂಡಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಅಂಗವಿಕಲ ಅಧಿಕಾರಿ ಮಂಜುಳ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ವಿ. ರವಿ ಕುಮಾರ್, ಶ್ರೀನಿವಾಸಪುರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಬೈರಾರೆಡ್ಡಿ, ಮುಳಬಾಗಿಲು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕುಮಾರಿ ರಮ್ಯ, ಕೆ.ಜಿ.ಎಫ್. ಶಿಶು ಅಭಿವೃದ್ಧಿ ಯೋಜನಾಧಿಕಾರಿ ರಾಜೇಶ್, ಅಧೀಕ್ಷಕರು ನಾಗರಾಜ್, ಸಂಪನ್ಮೂಲ ವ್ಯಕ್ತಿಗಳಾದ ಚಿಕ್ಕ ರೆಡ್ಡಪ್ಪ, ಗೋವಿಂದರಾಜು, ನಾಗೇಶ್ ಬಾಬು, ಮುನಿಯಪ್ಪ, ರುಮಾನ ಕೌಸರ್, ನಾರಾಯಣಗೌಡ ಜಿಲ್ಲಾ ಸಂಯೋಜಕರು ಇದ್ದರು.

15/05/2026

# ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ನೇಮಕಾತಿಯಲ್ಲಿ ಭಾರೀ ಅಕ್ರಮ: ಸಿಬಿಐ ತನಿಖೆಗೆ ವೆಂಕಟಚಲಪತಿ ಆಗ್ರಹ

ಕೋಲಾರ

ಬಹು ದಿನಗಳಿಂದ ತೀವ್ರ ಚರ್ಚೆಗೆ ಒಳಗಾಗಿರುವ ಕೋಲಾರ–ಚಿಕ್ಕಬಳ್ಳಾಪುರ ಹಾಲು ಒಕ್ಕೂಟದ ಆಡಳಿತ ಮಂಡಳಿಯು ಕಳೆದ 2023ನೇ ಸಾಲಿನಲ್ಲಿ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಭಾರಿ ಅಕ್ರಮ ಮಾಡಲಾಗಿದ್ದು ತಮ್ಮ ಅಧಿಕಾರ ದುರ್ಬಳಕೆ ಮಾಡಿಕೊಂಡು ಸುಮಾರು 9 ಕೋಟಿ ರೂ ಹಗರಣ ನಡೆಸಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ದಾಖಲಾತಿ ಕ್ರೋಢೀಕರಿಸಿಕೊಂಡು ಕೋಲಾರ ಎಸ್‌ಪಿ ಗಮನಕ್ಕೆ ತಂದು ನಗರ ಪೊಲೀಸ್ ಠಾಣೆಯಲ್ಲಿ ದೂರು ನೀಡಿದೆ ಎಂದು ವಕೀಲ ವೆಂಕಟಚಲಪತಿ ತಿಳಿಸಿದರು.



ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಎಸ್‌ಪಿರನ್ನು ಭೇಟಿ ಮಾಡಿ ವಾಪಾಸ್ಸಾದ ಕ್ಷಣದಲ್ಲಿ ಕೋಚಿಮುಲ್ ಅಧ್ಯಕ್ಷ ಕೆ.ವೈ.ನಂಜೇಗೌಡ ಮತ್ತು ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಗೋಪಾಲಮೂರ್ತಿ ಎಸ್‌ಪಿರನ್ನು ಭೇಟಿಯಾಗಿರುವುದು ಕಂಡು ದಿಗ್ಭ್ರಮೆಯಾಗಿದೆ ಎಂದರು.

ಎಸ್.ಪಿ. ಅವರ ಸೂಚನೆ ಮೇರೆಗೆ ನಗರ ಠಾಣೆಯಲ್ಲಿ ದೂರು ನೀಡಿದರೂ ಸಹ ನಮಗೆ ಎನ್.ಸಿ.ಎ ನೀಡಲಿಲ್ಲ ಎಫ್.ಐ.ಆರ್. ಸಹ ದಾಖಲಿಸಿಕೊಳ್ಳಲಿಲ್ಲ ನಾವು ಕೊಟ್ಟ ದೂರಿನ ಮನವಿ ಪತ್ರದ ಮೇಲೆ ಸ್ವೀಕರಿಸಿದ ಸೀಲ್ ಹಾಕಿ ಕೊಟ್ಟಿದ್ದಾರೆ, ದೂರಿನ ಸಂಬಂಧ ಪರಿಶೀಲಿಸಿ ನಂತರ ಕ್ರಮ ಜರುಗಿಸುವುದಾಗಿ ತಿಳಿಸಿದ್ದಾರೆ ಎಂದರು.

30 ದಿನಗಳ ಕಾಲಾವಕಾಶ ನೀಡುತ್ತೇವೆ ಒಂದು ವೇಳೆ ಅವರು ದೂರು ದಾಖಲಿಸಿಕೊಂಡು ತನಿಖೆ ನಡೆಸದಿದ್ದಲ್ಲಿ ಜೂನ್ ಮಾಹೆಯಲ್ಲಿ ಸುಪ್ರೀಂ ಕೋರ್ಟ್‌ನಲ್ಲಿ ಪ್ರಕರಣ ದಾಖಲಿಸಿ ಎಫ್‌ಐಆರ್ ದಾಖಲಿಸಲು ಹಾಗೂ ಸಿಬಿಐನಿಂದ ತನಿಖೆ ನಡೆಸುವಂತೆ ಆದೇಶ ತರುತ್ತೇವೆ ಎಂದರು.

ಹಾಲು ಒಕ್ಕೂಟದಲ್ಲಿ ನೇಮಕಾತಿಯ ಪಟ್ಟಿ ಪರೀಕ್ಷೆಯ ಮುನ್ನವೇ ಸಿದ್ದಪಡಿಸಿಕೊಂಡಿದ್ದಾರೆ. ಪ್ರತಿ ಹುದ್ದೆಯ ನೇಮಕಾತಿಗೆ 25 ಲಕ್ಷದಿಂದ 50 ಲಕ್ಷದವರೆಗೆ ವಸೂಲಿ ಮಾಡಿಕೊಂಡಿದ್ದಾರೆ. ಪರೀಕ್ಷೆ ನಡೆಸಿದ ಮಂಗಳೂರು ವಿವಿ ಉತ್ತರ ಪತ್ರಿಕೆಗಳನ್ನು ಹೆಚ್ಚುವರಿಯಾಗಿ ಮುದ್ರಿಸಿಕೊಂಡು ಅಭ್ಯರ್ಥಿಗಳಿಂದ ಉತ್ತರ ಬರೆಸಿ ಸಿದ್ದಪಡಿಸಿಕೊಂಡು ನೈಜ ಪತ್ರಿಕೆಗಳನ್ನು ಬದಲಿಸಿದ್ದಾರೆ. ಇದನ್ನು ಆರ್.ಟಿ.ಐ. ಮೂಲಕ ಪಡೆಯಲು ವಿಳಂಬವಾಗಿದೆ ಎಂದರು.

ಸಂದರ್ಶನದಲ್ಲಿ ನೇಮಕಾತಿ ಮಂಡಳಿಗೆ 15 ಅಂಕಗಳವರೆಗೆ ನೀಡುವ ಅಧಿಕಾರ ನಿರ್ದೇಶಕರು ದುರ್ಬಳಕೆ ಮಾಡಿಕೊಂಡು ಹಣ ಪಡೆದು ಅಂಕ ನೀಡಿರುವುದಾಗಿ ಮಾಜಿ ಅಧ್ಯಕ್ಷರು ಹಾಗೂ ಹಿರಿಯ ನಿರ್ದೇಶಕ ಕಾಡೇನಹಳ್ಳಿ ನಾಗರಾಜ್ ಅವರೇ ಒಪ್ಪಿಕೊಂಡಿದ್ದು ಕೆ.ಪಿ.ಎಸ್.ಸಿ. –ಯು.ಪಿ.ಎಸ್. ಪರೀಕ್ಷೆಗಳ ಸಂದರ್ಶನದಲ್ಲಿ ನೀಡುವ ಅಂಕಗಳಂತೆ ನಾವು ನೀಡಿದ್ದೇವೆ ಇದು ಕದ್ದು ಮುಚ್ಚಿ ನೀಡಿರುವುದೇನು ಅಲ್ಲ ಎಲ್ಲರಿಗೂ ತಿಳಿದ ವಿಷಯ ಪಾರದರ್ಶಕವಾಗಿದೆ ಎಂದು ಒಪ್ಪಿ ಕೊಂಡು ಅಪ್ರೋವರ್ ಅಗಿದ್ದಾರೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸಾಮಾಜಿಕ ಕಾರ್ಯಕರ್ತ ಗೋಳಿಗಾನಹಳ್ಳಿ ನಾಗರಾಜ್, ಸಾಮಾಜಿಕ ಕಾರ್ಯಕರ್ತ ರಮೇಶ್ ಬಾಬು ಇದ್ದರು.

## ಐಸ್ ಕ್ರೀಂ ಘಟಕದಲ್ಲಿ ಕಮೀಷನ್!

ಚಿಂತಾಮಣಿಯ 60 ಕೋಟಿ ರೂ ವೆಚ್ಚದ ಐಸ್ ಕ್ರೀಂ ಘಟಕದಲ್ಲಿ ಲಾಭಸಿಗೋಲ್ಲವೆಂಬ ಅರಿವಿದ್ದರೂ ಸಹ ಯಂತ್ರೋಪಕರಣಗಳಲ್ಲಿ ಕಮೀಷನ್ ಲಾಪಾಟಾಯಿಸುವ ದೆಸೆಯಲ್ಲಿ 9 ಕೋಟಿ ವೆಚ್ಚದಲ್ಲಿ ಖರೀದಿಸಿದ್ದಾರೆ ಎಂದು ಅವರು ದೂರಿದರು.

ಈಗಾಗಲೇ ಹಾಸನ, ಬೆಂಗಳೂರು ಹಾಗೂ ಬಳ್ಳಾರಿಯಲ್ಲಿ ನಂದಿನಿ ಐಸ್ ಕ್ರೀಂ ಘಟವು ನಷ್ಟವಾಗಿದೆ ಅದರೂ ಚಿಂತಾಮಣಿಯಲ್ಲಿ ಐಸ್ ಕ್ರೀಂ ಘಟಕ ಸ್ಥಾಪನೆಗೆ ಸಾಲ ಮಾಡಿ ಬಿಡುಗಡೆ ಮಾಡಲಾಗಿದ್ದು ಘಟಕವು ಈವರೆಗೂ ಸ್ಥಾಪನೆಯಾಗದೆ ಅಪೂರ್ಣಗೊಂಡಿದ್ದು ಸಾಲದ ಹಣಕ್ಕೆ ಬಡ್ಡಿ ಪಾವತಿಸಲಾಗುತ್ತಿರುವುದು ಒಕ್ಕೂಟಕ್ಕೆ ನಷ್ಟವುಂಟು ಮಾಡಲಾಗಿದೆ ಎಂದು ತಿಳಿಸಿದರು. ಎಂ.ವಿ.ಕೆ. ಗೋಲ್ಡನ್ ಡೇರಿ ಘಟಕದಲ್ಲೂ ಅತಿಕ್ರಮ ಪ್ರವೇಶ ಮಾಡಿ ಅಲ್ಲೂ ಸಹ ಹಗರಣಗಳನ್ನು ನಡೆಸಲಾಗಿದೆ. ಇದು ಎರಡೂ ಜಿಲ್ಲೆಗಳ ಒಟ್ಟಾಗಿದ್ದ ಸಂದರ್ಭದಿಂದ ನಡೆದ ಹಗರಣಗಳಾಗಿದೆ ಹಾಗಾಗಿ 12 ವರ್ಷಗಳ ಆಡಳಿತ ಸಂಪೂರ್ಣವಾಗಿ ತನಿಖೆ ನಡೆಸಬೇಕು. ಇದರ ಕಿಂಗ್ ಪಿನ್ ಶಾಸಕ ನಂಜೇಗೌಡ ಮತ್ತು ಕೆಲವು ನಿರ್ದೇಶಕರು ಶಾಮೀಲಾಗಿ ನಡೆಸಿರುವ ಕೋಟ್ಯಾಂತ ರೂಪಾಯಿ ದೊಡ್ಡ ಹಗರಣವಾಗಿದೆ ಎಂದರು.



# 31ಕ್ಕೆ ಶ್ರೀವಿಷ್ಣು ಸಹಸ್ರನಾಮ ಪಾರಾಯಣ



ಬೆಂಗಳೂರು

ಹರಿದಾಸ ಪರಂಪರೆಯ ದಾಸಶ್ರೇಷ್ಠರನ್ನು ಸದಾ ಸ್ಮರಿಸುತ್ತಾ ಸಜ್ಜನರಲ್ಲಿ ದೈವೀಕ ಮತ್ತು ಆಧ್ಯಾತ್ಮಿಕ ಭಾವನೆಗಳನ್ನು ಬಿತ್ತುವ ಮೂಲಕ ಭವದ ಬದುಕಿಗೆ ಬೆಳಕು ನೀಡುತ್ತಿರುವ ವಿದ್ಯಾವಾಚಸ್ಪತಿ ಡಾ.ಅರಳುಮಲ್ಲಿಗೆ ಪಾರ್ಥಸಾರಥಿ ಅವರು ಇದೇ ಮೇ 31 ರಂದು ಭಾನುವಾರ ಶ್ರೀಮದ್ಭಗವದ್ಗೀತೆ ತಾತ್ಪರ್ಯ ಮತ್ತು ಶ್ರೀ ವಿಷ್ಣು ಸಹಸ್ರನಾಮ ಪಾರಾಯಣ ನಡೆಸಿಕೊಡಲಿದ್ದಾರೆ.


ಅಧಿಕ ಮಾಸದ ಪ್ರಯುಕ್ತ ಸೋಲದೇವನಹಳ್ಳಿ ಗೆಳೆಯರ ಬಳಗ ಮತ್ತು ಶ್ರೀ ವನಮಾಲಿ ವಿಷ್ಣು ಸಹಸ್ರನಾಮ ಮಂಡಳಿ ಈ ಕಾರ್ಯಕ್ರಮ ಆಯೋಜಿಸಿದೆ. ಅಂದು ಬೆಳಿಗ್ಗೆ 8 ಗಂಟೆಯಿಂದ ಹನ್ನೊಂದು ಬಾರಿ ಪಾರಾಯಣ ಮಾಡಿಸುವ ವ್ಯವಸ್ಥೆ ಮಾಡಿದ್ದಾರೆ. ಮಧ್ಯಾಹ್ನ 12–30ರಿಂದ 1 ಗಂಟೆಯವರೆಗೆ ಮಹಾಮಂಗಳಾರತಿ ಜರುಗಲಿದೆ. ಕತ್ರಿಗುಪ್ಪೆಯ ಕೆ.ಎಸ್. ನರಸಿಂಹಸ್ವಾಮಿ ಉದ್ಯಾನವನ ರಸ್ತೆಯ ವಾಟರ್ ಟ್ಯಾಂಕ್‌ನ ಶ್ರೀ ಕಲ್ಯಾಣ ರಾಮಚಂದ್ರ ಸ್ವಾಮಿ ದೇವಾಲಯದಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿದ್ದು, ಆಸಕ್ತರು ಮೇ 25ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಸುಧೀಂದ್ರ ಬಿ.ಎನ್–99029 71527, ವಾಸು–92430 26723, ಶಾಮ ಪ್ರಸಾದ್–76769 92525, ಟಿ.ಎಸ್.ನಾಗರಾಜರಾವ್–94489 93150 ವೈ.ಆರ್.ಗೋಪಿನಾಥ್–95351 02195 ಇವರನ್ನು ಸಂಪರ್ಕಿಸಬಹುದು.

# ಎಸ್‌ಟಿ ಸಮುದಾಯಕ್ಕೆ ದೊಡ್ಡ ಅನ್ಯಾಯ: ಆರ್.ಅಶೋಕ್

ಬೆಂಗಳೂರು

ಕಾಂಗ್ರೆಸ್‌ನವರು ಏಕಾಏಕಿ ಕುತಂತ್ರ, ಷಡ್ಯಂತ್ರ ಮಾಡಿ ದಲಿತ ಸಮುದಾಯಕ್ಕೆ ಅನ್ಯಾಯ ಮಾಡಿದ್ದಾರೆ. ಮೀಸಲಾತಿ ಪ್ರಮಾಣ ಇಳಿಸುವ ಮೂಲಕ ವಂಚನೆ, ದ್ರೋಹವೆಸಗಿದ್ದಾರೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಆಕ್ಷೇಪಿಸಿದ್ದಾರೆ.




ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಬುಧವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಮ್ಮ ಸರಕಾರವು ಎಸ್‌ಸಿ ಮೀಸಲಾತಿಯನ್ನು ಶೇ.15ರಿಂದ 17ಕ್ಕೆ ಏರಿಸಿತ್ತು. ಎಸ್‌ಟಿ ಮೀಸಲಾತಿಯನ್ನು ಶೇ 3ರಿಂದ 7ಕ್ಕೆ ಹೆಚ್ಚಿಸಿತ್ತು. ಎಸ್‌ಟಿ ಸಮುದಾಯಕ್ಕೆ ನ್ಯಾಯಯುತ ಬೇಡಿಕೆಯನ್ನು ನಾವು ಈಡೇರಿಸಿದ್ದೆವು ಎಂದು ಗಮನ ಸೆಳೆದರು. ಮಾಧುಸ್ವಾಮಿ ವರದಿ, ಸದಾಶಿವ ಆಯೋಗವನ್ನು ಗಮನದಲ್ಲಿ ಇಟ್ಟುಕೊಂಡು ನಾವು ಮೀಸಲಾತಿಯನ್ನು ಹೆಚ್ಚಿಸಿದ್ದೆವು. ಇದು ಸುಮಾರು 30 ವರ್ಷಗಳ ಹೋರಾಟದ ಪ್ರತಿಫಲ ಎಂದು ವಿವರಿಸಿದರು.

ಕಾಂಗ್ರೆಸ್ ಸರಕಾರದ ಕ್ರಮದಿಂದ ಎಸ್‌ಟಿ ಸಮುದಾಯಕ್ಕೆ ದೊಡ್ಡ ಅನ್ಯಾಯವಾಗಿದೆ. ಮೀಸಲಾತಿ ಕಡಿಮೆ ಮಾಡಲು ಮತ್ತು ಘನಂದಾರಿ ಕೆಲಸಕ್ಕೆ ಸಿದ್ದರಾಮಯ್ಯನವರ ಸರಕಾರವೇ ಬೇಕಿತ್ತೇ? ಇದೇನಾ ನಿಮ್ಮ ದಲಿತಪರ ನೀತಿ ಎಂದು ಪ್ರಶ್ನಿಸಿದರು. ಹಿಂದೆ 10 ವರ್ಷ ಮನಮೋಹನ್ ಸಿಂಗ್ ಸರಕಾರ ಇದ್ದಾಗ ಮೀಸಲಾತಿ ಪ್ರಮಾಣ ಹೆಚ್ಚಿಸಿಲ್ಲವೇಕೆ ಎಂದು ಕೇಳಿದರು. ಎಸ್‌ಟಿ ಸಮುದಾಯ ನ್ಯಾಯ ಕೇಳುತ್ತಿದೆ. ಅದಕ್ಕೆ ನಿಮ್ಮ ಉತ್ತರವೇನು? ಎಂದು ಪ್ರಶ್ನೆಯನ್ನು ಮುಂದಿಟ್ಟರು. 7ರಿಂದ ಶೇ.3ಕ್ಕೆ ಇಳಿಸಲಾಗಿದೆ. ಇನ್ನೆಷ್ಟು ವರ್ಷ ಹೋರಾಟ ಮಾಡಬೇಕಾದೀತು ಎಂದರು.

ಮೀಸಲಾತಿ ಪ್ರಮಾಣ ಕಡಿತ ಮಾಡಿ ಎಸ್‌ಟಿಗಳಿಗೆ ಅವಮಾನ ಮಾಡಿದ್ದಾರೆ. ದಲಿತರ ಬೆನ್ನಿಗೆ ಇವರು ಚೂರಿ ಹಾಕಿದ್ದಾರೆ. ಇದು ಇವರ ದ್ವಂದ್ವ ನೀತಿ ಎಂದು ಆಕ್ಷೇಪಿಸಿದರು. ಇದನ್ನು ಕೂಡಲೇ ಸರಿಪಡಿಸಬೇಕು ಎಂದು ಆಗ್ರಹಿಸಿದರು. ಇದನ್ನು ಸರಿಪಡಿಸದೇ ಇದ್ದರೆ ಹೋರಾಟವು ದೊಡ್ಡ ಜ್ವಾಲೆಯಾಗಿ ರಾಜ್ಯ ಸರಕಾರವನ್ನು ಕಿತ್ತೆಸೆಯುವಂಥ ತೀರ್ಮಾನವನ್ನು ಆ ಸಮುದಾಯದವರು ಮಾಡಲಿದ್ದಾರೆ. ನಾವು ಕೂಡ ಅವರ ಹೋರಾಟಕ್ಕೆ ಬೆಂಬಲ ಕೊಡುತ್ತೇವೆ ಎಂದು ತಿಳಿಸಿದರು.

### ದಲಿತರ ಕಣ್ಣಿಗೆ ಮಣ್ಣೆರಚುವ ಕೆಲಸ ಸರಿಯೇ: ರಾಜುಗೌಡ ನಾಯಕ್

ರಾಜ್ಯ ಬಿಜೆಪಿ ಉಪಾಧ್ಯಕ್ಷ ರಾಜುಗೌಡ ನಾಯಕ್ ಅವರು ಹೋರಾಟದ ಕುರಿತು ವಿವರ ನೀಡಿದರು. ಕಾಂಗ್ರೆಸ್ ಸರಕಾರವು ಕೋರ್ಟ್‌ಗೆ ಸಮರ್ಪಕ ಮಾಹಿತಿ ಕೊಟ್ಟಿಲ್ಲ; ಒಳ್ಳೆಯ ವಕೀಲರನ್ನು ನೇಮಿಸಿಲ್ಲ. ವಕೀಲರು ಕೋರ್ಟಿಗೆ ಹಾಜರಾಗಿಲ್ಲ. ಇದರಿಂದ ಕೋರ್ಟಿನಲ್ಲಿ ತಡೆಯಾಜ್ಞೆ ಸಿಗುವಂತಾಗಿದೆ ಎಂದು ಆರೋಪಿಸಿದರು. ಸ್ಟೇ ತೆರವು ಮಾಡಲು ಆಗುವುದಿಲ್ಲವೇ ಎಂದು ಪ್ರಶ್ನಿಸಿದರು. ಸಿದ್ದರಾಮಯ್ಯನವರೇ, ದಲಿತರ ಕಣ್ಣಿಗೆ ಮಣ್ಣೆರಚುವ ಕೆಲಸ ಸರಿಯೇ ಎಂದು ಕೇಳಿದರು.

ಛತ್ತೀಸಗಡದಲ್ಲಿ ಎಸ್‌ಟಿಗೆ ಶೇ. 32, ಎಸ್ಸಿ 10, ಒಬಿಸಿ 16 ಸೇರಿ ಒಟ್ಟು ಶೇ.58 ಮೀಸಲಾತಿ ಕೊಡಲಾಗಿದೆ. ಅಲ್ಲಿ ಎಸ್‌ಸಿ, ಎಸ್‌ಟಿಗೆ ಜನಸಂಖ್ಯೆ ಆಧಾರದಲ್ಲಿ ಶೇ.50ಕ್ಕಿಂತ ಹೆಚ್ಚಾದರೂ ಕೊಡಿ ಎಂದಿದ್ದಾರೆ. ಹಾಗಿದ್ದರೆ ಕರ್ನಾಟಕದಲ್ಲಿ ಯಾಕೆ ಕೊಡಲಾಗುತ್ತಿಲ್ಲ ಎಂದು ಪ್ರಶ್ನಿಸಿ ದರು. ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ವಿಧಾನ ಪರಿಷತ್ತಿನ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ರಾಜ್ಯ ಬಿಜೆಪಿ ಉಪಾಧ್ಯಕ್ಷ ರಾಜುಗೌಡ ನಾಯಕ್, ಎಸ್‌ಟಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ಶ್ರೀನಿವಾಸದಾಸ ಕರಿಯಪ್ಪ ಅವರು ಭಾಗವಹಿಸಿದ್ದರು.

## ಪ್ರಧಾನಿಯವರ ಮನವಿಗೆ ಜನಸ್ಪಂದನೆ

ಬೆಂಗಳೂರು

ಪ್ರಧಾನಿಯವರು ಪೆಟ್ರೋಲಿಯಂ ಉತ್ಪನ್ನ ಕಡಿಮೆ ಬಳಕೆ, ಚಿನ್ನ ಖರೀದಿ ಮಾಡದೇ ಇರುವುದು ಸೇರಿ ವಿವಿಧ ವಿಷಯಗಳಲ್ಲಿ ವಿನಂತಿ ಮಾಡಿದ್ದಾರೆ. ನಾವು ಕೂಡ ಇದಕ್ಕೆ ಸ್ಪಂದಿಸುತ್ತಿದ್ದೇವೆ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್. ಅಶೋಕ್ ತಿಳಿಸಿದ್ದಾರೆ.

ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಾವು ಬಳಸುವ ಕಾರುಗಳ ಪೆಟ್ರೋಲ್, ಡೀಸೆಲ್ ಪ್ರಮಾಣವನ್ನು ಶೇ.30ರಿಂದ 50ರಷ್ಟು ಕಡಿಮೆ ಮಾಡಲಿದ್ದೇವೆ. ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಬೆಂಗಾವಲು ವಾಹನ ಬಳಸಲಿದ್ದೇವೆ ಎಂದು ತಿಳಿಸಿದರು.

ಯುದ್ಧದ ಕಾರಣ ಪ್ರಪಂಚವೇ ಸಂಕಷ್ಟದಲ್ಲಿದೆ. ಪ್ರಧಾನಿಯವರ ಕೋರಿಕೆಗೆ ಸಾರ್ವಜನಿಕರೂ ಸ್ಪಂದಿಸುತ್ತಿದ್ದಾರೆ ಎಂದು ಹೇಳಿದರು.

ಮನೆಯಲ್ಲಿ ಬಳಸುವ ಅಡುಗೆ ಎಣ್ಣೆಯನ್ನೂ ಕಡಿಮೆ ಮಾಡಲು ನನ್ನ ಮನೆಯಲ್ಲಿ ಹೇಳಿದ್ದೇನೆ ಎಂದು ಪ್ರಶ್ನೆಗೆ ಉತ್ತರ ನೀಡಿದರು.

ಕೇಂದ್ರದ ಸಚಿವರು, ಅಧಿಕಾರಿಗಳು ಈಗಾಗಲೇ ಪ್ರಧಾನಿಯವರ ಕರೆಗೆ ಸ್ಪಂದಿಸಿ ಮೆಟ್ರೋದಂಥ ಸಾಮೂಹಿಕ ಸಾರಿಗೆ ವ್ಯವಸ್ಥೆಯನ್ನು ಬಳಸಲು ಮುಂದಾಗಿದ್ದಾರೆ ಎಂದು ಹೇಳಿದರು.

### ಕಾಂಗ್ರೆಸ್ ಪಕ್ಷಕ್ಕೆ ಚುನಾವಣಾ ಭೀತಿ: ಛಲವಾದಿ ನಾರಾಯಣಸ್ವಾಮಿ

ಬೆಂಗಳೂರು

ರಾಜ್ಯ ಸರಕಾರದ ನನ್ನ ಖಾತೆ ನನ್ನ ಹಕ್ಕು ಎಂಬ ಆರನೇ ಭೂಗ್ಯಾರಂಟಿಯಲ್ಲಿ ಅಚ್ಚರಿ ಏನಿಲ್ಲ; ವಿಶೇಷತೆಯೂ ಇಲ್ಲ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ತಿಳಿಸಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಇದು ಬೆಂಗಳೂರಿನ ಜನರಿಗೆ ಯಾವುದೇ ಉಡುಗೊರೆ ಅಲ್ಲ ಎಂದು ತಿಳಿಸಿದರು. 33 ಲಕ್ಷ ಆಸ್ತಿಗಳಿವೆ ಎಂದಿದ್ದಾರೆ. ಈ ಆಸ್ತಿಗಳ ಒಡೆತನ ಯಾರಿಗೂ ಇರಲಿಲ್ಲವೇ? ಹೊಸದಾಗಿ ಒಡೆತನ ಕೊಡುತ್ತಿದ್ದೀರಾ ಎಂದು ಕೇಳಿದರು.

# ವಿಧಾನಸಭೆಯಲ್ಲಿ ಕಾಗದ ಬಳಕೆಗೆ ಕೊಕ್!

ಬೆಂಗಳೂರು

ಕರ್ನಾಟಕ ವಿಧಾನಸಭೆಯು ಶೀಘ್ರದಲ್ಲೇ ಎಲ್ಲಾ ಹಂತಗಳಲ್ಲಿ ಕಾಗದದ ಬಳಕೆಯನ್ನು ತೆಗೆದು ಹಾಕುತ್ತಿದ್ದು, ಜುಲೈ ತಿಂಗಳಿನಿಂದ ರಾಜ್ಯ ವಿಧಾನಸಭೆಯು ಕಾಗದ ರಹಿತವಾಗಲಿದೆ.

ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರು ಮಳೆಗಾಲದ ಅಧಿವೇಶನದಲ್ಲಿ ವಿಶಿಷ್ಟವಾದ ಅಂತರ್‌ನಿರ್ಮಿತ ಅಪ್ಲಿಕೇಶನ್‌ನೊಂದಿಗೆ ಬಯೋಮೆಟ್ರಿಕ್–ಸಕ್ರಿಯಗೊಳಿಸಿದ ಐಪ್ಯಾಡ್‌ಗಳನ್ನು ಬಳಸಲಿದ್ದಾರೆ.

ಶಾಸಕರಿಗೆ ನೀಡಲಾಗುವ ಬಿಲ್‌ಗಳು ಸೇರಿದಂತೆ ಕಾಗದಗಳ ಬಂಡಲ್‌ಗಳನ್ನು ತಪ್ಪಿಸಲು ಇದರಿಂದ ಸಹಾಯವಾಗುತ್ತದೆ. ಕಳೆದ ತಿಂಗಳು, ಈ ಡಿಜಿಟಲ್ ಯೋಜನೆ ಕಾರ್ಯಗತಗೊಳಿಸಲು ವಿಧಾನಸಭೆ ಮತ್ತು ಪರಿಷತ್ತು ರಾಷ್ಟ್ರೀಯ ಇ–ವಿಧಾನ ಅಪ್ಲಿಕೇಶನ್ ಯೋಜನೆಯೊಂದಿಗೆ ತಿಳುವಳಿಕೆ ಪತ್ರಕ್ಕೆ ಸಹಿ ಹಾಕಿದ್ದಾರೆ.

ಈ ಯೋಜನೆ ಸುಮಾರು 60 ಕೋಟಿ ರೂ. ಎಂದು ಅಂದಾಜಿಸಲಾಗಿದೆ. ರಾಜ್ಯ ಸರ್ಕಾರದ ಪಾಲು ವೆಚ್ಚದ ಶೇ.40 (ಸುಮಾರು 24 ಕೋಟಿ ರೂ.) ಆಗಿರುತ್ತದೆ.ನಾವು ಎರಡೂ ಸದನಗಳನ್ನು ಡಿಜಿಟಲೀಕರಣಗೊಳಿಸಲು ಬಯಸುತ್ತೇವೆ. ಶಾಸಕರಿಗೆ ನೀಡಲಾಗುವ ಕಾರ್ಯಸೂಚಿ, ನಕ್ಷತ್ರ ಹಾಕಿದ ಪ್ರಶ್ನೆಗಳು ಮತ್ತು ಉತ್ತರಗಳು ಹಾಗೂ ಮಸೂದೆಗಳು ಸೇರಿದಂತೆ ಎಲ್ಲಾ ಪತ್ರಿಕೆಗಳನ್ನು ಇ–ಫಾರ್ಮ್ಯಾಟ್ ಮೂಲಕ ಕಳುಹಿಸಲಾಗುತ್ತದೆ, ಆಗ ಅವರು ಅದನ್ನು ಸುಲಭವಾಗಿ ಪಡೆಯಬಹುದಾಗಿದೆ ಎಂದು ಸಚಿವಾಲಯದ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ಈ ವ್ಯವಸ್ಥೆಯು ಅಂತರ್‌ನಿರ್ಮಿತ ಸಾಫ್ಟ್‌ವೇರ್ ಹೊಂದಿದ್ದು ಬಳಕೆದಾರ ಸ್ನೇಹಿಯಾಗಿರಲಿದೆ. ಈ ಯೋಜನೆ ಈಗ ಉಂಟಾಗುತ್ತಿರುವ ವಿವಿಧ ವೆಚ್ಚಗಳನ್ನು ಕಡಿಮೆ ಮಾಡುತ್ತದೆ ಎಂದು ನಿರೀಕ್ಷಿಸಲಾಗಿದೆ. ಅಲ್ಲದೆ, ದಾಖಲೆಗಳನ್ನು ಕಳೆದುಕೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ. ಎಲ್ಲಾ ಶಾಸಕರಿಗೆ ಬಳಸಲು ತರಬೇತಿ ನೀಡಲಾಗುವುದು. ಹೆಚ್ಚಿನ ಶಾಸಕರು ಸ್ಮಾರ್ಟ್‌ಫೋನ್ ಬಳಕೆದಾರರಾಗಿರುವುದರಿಂದ ಇದನ್ನು ಬಳಸುವುದು ಕಷ್ಟವಾಗುವುದಿಲ್ಲ.

ಶಾಸಕರು ತಮ ಫೋನ್‌ಗಳನ್ನು ಸದನದಲ್ಲಿ ಡೇಟಾ ಅಥವಾ ವಿವಿಧ ಜನ–ಕೇಂದ್ರಿತ ಸಮಸ್ಯೆಗಳನ್ನು ಬ್ರೌಸ್ ಮಾಡಲು ಬಳಸಲು ಅನುಮತಿಸಲಾಗಿದೆ. ಹೊಸ ವ್ಯವಸ್ಥೆಯ ಸುಗಮ ಬಳಕೆಯನ್ನು ಸುಲಭಗೊಳಿಸಲು ಜಾಮರ್‌ಗಳನ್ನು ತೆಗೆದುಹಾಕಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಸ್ಪೀಕರ್ ಆಗಿದ್ದಾಗ ಈ ಪ್ರಸ್ತಾಪವನ್ನು ಸದನದಲ್ಲಿ ಇಡಲಾಗಿತ್ತು. ಕರ್ನಾಟಕವು ಕೇಂದ್ರದ ನೆವಾ ಅನ್ನು ಅಳವಡಿಸಿಕೊಳ್ಳಬೇಕೇ ಅಥವಾ ತನ್ನದೇ ಆದ ಸಾಫ್ಟ್‌ವೇರ್ ಹೊಂದಬೇಕೇ ಎಂಬ ಚರ್ಚೆ ನಡೆಯಿತು. ಆದರೆ ಈಗ ಸದನವು ಈ ಯೋಜನೆಯನ್ನು ಕಾರ್ಯಗತಗೊಳಿಸಲು ಸಿದ್ಧವಾಗಿದೆ.

# ‘ವಿಶ್ವ ಶಾಂತಿಗಾಗಿ ಯೋಗ’ ದಿನಾಚರಣೆ ಘೋಷ ವಾಕ್ಯ



ಬೆಂಗಳೂರು

ಪ್ರಸಕ್ತ ವರ್ಷದ ಯೋಗ ದಿನಾಚರಣೆ ಘೋಷವಾಕ್ಯ ‘ಆರೋಗ್ಯ, ಜ್ಞಾನ ಮತ್ತು ವಿಶ್ವ ಶಾಂತಿಗಾಗಿ ಯೋಗ’ ಎಂಬ ವಿಶಾಲವಾದ ದೃಷ್ಟಿಕೋನವಿದೆ. ಕರ್ನಾಟಕದಲ್ಲಿ ಪ್ರಸಕ್ತ ಸಾಲಿನಲ್ಲಿ ಮನೆ–ಮನೆಗೂ ಯೋಗ, ಎಲ್ಲರಿಗೂ ಯೋಗ ಎಂಬ ವಿಶಾಲ ದೃಷ್ಟಿಕೋನದಿಂದ ಆಚರಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ಪ್ರಕಟಿಸಿದರು.

ಜೂನ್ 21 ರಂದು ಕಾರ್ಯಕ್ರಮವನ್ನು ಬೆಂಗಳೂರಿನ ವಿಧಾನ ಸೌಧದ ಆವರಣದಲ್ಲಿ ಆಯೋಜಿಸಲು ಉದ್ದೇಶಿಸಲಾಗಿದೆ. ಈ ಕಾರ್ಯಕ್ರಮವನ್ನು ಹಲವಾರು ಸಂಘ ಸಂಸ್ಥೆಗಳು, ಆಯುಷ್ ಕಾಲೇಜುಗಳು ಹಾಗೂ ಯೋಗ ಬಂಧುಗಳ ಸಹಕಾರದಿಂದ ಜೂನ್ 21ರ ಮುಂಜಾನೆ 6 ಗಂಟೆಯಿಂದ 8 ಗಂಟೆಯವರೆಗೆ ಸುಮಾರು 5000 ಯೋಗ ಬಂಧುಗಳ ಯೋಗಾಭ್ಯಾಸ ಕಾರ್ಯಕ್ರಮಗಳ ಮೂಲಕ ಆಯೋಜಿಸಲಾಗುವುದು ಎಂದರು.

ಈ ಕಾರ್ಯಕ್ರಮಗಳ ಉದ್ಘಾಟನೆಯನ್ನು ರಾಜ್ಯಪಾಲರಾದ ಥಾವರ್ ಚಂದ್ ಗೆಹೋಟ್ ನೆರವೇರಿಸಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಭಾಗವಹಿಸಲಿದ್ದಾರೆ. ಹಲವಾರು ಯೋಗಗುರುಗಳು, ಕರ್ನಾಟಕದ ಗಣ್ಯವ್ಯಕ್ತಿಗಳು, ಅಂತಾರಾಷ್ಟ್ರೀಯ ಕ್ರೀಡಾಸಾಧಕರು ಹಾಗೂ ಸಿನಿ ತಾರೆಯರು ಸಹ ಈ ಕಾರ್ಯಕ್ರಮಕ್ಕೆ ಆಹ್ವಾನ ನೀಡಲಾಗುವುದು. ಕಾರ್ಯಕ್ರಮದಲ್ಲಿ ಆಯುಷ್ ಮಂತ್ರಾಲಯವು ಸೂಚಿಸಿರುವ 45 ನಿಮಿಷಗಳ ಯೋಗ ಪ್ರಾತ್ಯಕ್ಷಿಕೆಯನ್ನು ಸಹ ಪ್ರದರ್ಶಿಸಲಾಗುವುದದು ಎಂದರು. ಕಾರ್ಯಕ್ರಮದಲ್ಲಿ ಆಯುಷ್ ಆಯುಕ್ತ ಸುನೀಲ್ ಪನ್ವರ್ ಹಾಗೂ ಇತರರು ಉಪಸ್ಥಿತರಿದ್ದರು.

# ದ್ವಿತೀಯ ಪಿ.ಯು. ಪರೀಕ್ಷೆಯಲ್ಲಿ ಬಿಜಿಎಸ್ ಪದವಿ ಪೂರ್ವ ಕಾಲೇಜು ಅದ್ವಿತೀಯ ಸಾಧನೆ

ಬೆಂಗಳೂರು

ನಗರದ ಪ್ರತಿಷ್ಠಿತ ಕಾಲೇಜುಗಳಲ್ಲಿ ಒಂದಾದ ಆರ್.ಆರ್. ನಗರದ ಬಿಜಿಎಸ್ ಪದವಿ ಪೂರ್ವ ಕಾಲೇಜು ಪ್ರತಿ ವರ್ಷದಂತೆ ಈ ಬಾರಿಯೂ 2025– 26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ನೂರಕ್ಕೆ ನೂರರಷ್ಟು ಫಲಿತಾಂಶವನ್ನು ಗಳಿಸಿ ಆಡಳಿತ ಮಂಡಳಿಯ ಮೆಚ್ಚುಗೆಗೆ ಪಾತ್ರವಾಗಿದೆ.

ಬಿ.ಜಿ.ಎಸ್. ದ್ವಿತೀಯ ಪಿ.ಯು.ಸಿ ಫಲಿತಾಂಶದಲ್ಲಿ ಅದ್ವಿತೀಯವಾದುದನ್ನು ಸಾಧಿಸಿದ್ದು, 2025 – 26ನೇ ಸಾಲಿನ ಪರೀಕ್ಷೆಗೆ ಒಟ್ಟು 135 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಇದರಲ್ಲಿ 8 ವಿದ್ಯಾರ್ಥಿಗಳು ಅತ್ಯುತ್ತಮ ಅಂಕಗಳನ್ನು ಗಳಿಸಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. 10 ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ ಅಂಕಗಳನ್ನು ಗಳಿಸಿದ್ದಾರೆ. ಇನ್ನುಳಿದ ವಿದ್ಯಾರ್ಥಿಗಳು ಪ್ರಥಮ ಸ್ಥಾನದಲ್ಲಿ ತೇರ್ಗಡೆ ಹೊಂದಿದ್ದಾರೆ ಎಂದು ಕಾಲೇಜು ಮಂಡಳಿಯು ತಿಳಿಸಿದೆ.

ವಿಜ್ಞಾನ ವಿಭಾಗದಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳ ಪೈಕಿ ಡಬ್ಲ್ಯೂ. ಸೊಲೊಮನ್(ಪಿಸಿಎಂಬಿ) ಶೇಕಡ 95.33% ಮತ್ತು ರವಿಗೌಡ (ಪಿಸಿಎಂಬಿ) ಶೇಕಡ 91%. ವಾಣಿಜ್ಯ ವಿಭಾಗದಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳ ಪೈಕಿ ತನ್ಮಯಿ (ಎಸ್‌ಇಬಿಎ) ಶೇಕಡ 94%, ಭರತ್ ಕೆ.ಪಿ (ಎಸ್.ಇಬಿಎ) ಶೇಕಡ 94%, ಆರಾಧನಾ (ಎಸ್.ಇಬಿಎ) ಶೇಕಡ 93%, ಅಭಿಲಾಶ್ (ಎಸ್.ಇಬಿಎ) ಶೇಕಡ 92%, ಆಡಂ ಅಲೆಕ್ಸ್(ಎಸ್ ಇಬಿಎ) ಶೇಕಡ 91%, ಪರಿಣಿತ(ಎಸ್ ಇಬಿಎ) ಶೇಕಡ 90%, ಅಂಕಗಳನ್ನು ಪಡೆದು ತೇರ್ಗಡೆ ಹೊಂದಿದ್ದಾರೆ.

ವಿಜ್ಞಾನ ಮತ್ತು ವಾಣಿಜ್ಯ ವಿಭಾಗದಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳ ಪೈಕಿ ನಿಖಿಲ್ ಎಸ್. (ಪಿಸಿಎಂಸಿ) ಶೇಕಡ 88%, ಆಧ್ಯಾ ಆರ್. (ಪಿಸಿಎಂಸಿ) ಶೇಕಡ 88%, ಪ್ರಜಕ್ತ ಕುಲಂ (ಪಿಸಿಎಂಬಿ) ಶೇಕಡ 88%, ಅತೀಶ್ ಕುಮಾರ್ (ಪಿಸಿಎಂಸಿ) ಶೇಕಡ 88%, ಲಿಖಿತ್‌ಗೌಡ (ಪಿಸಿಎಂಬಿ) ಶೇಕಡ 86%, ಲೇಖಶ್ರೀ(ಪಿಸಿಎಂಸಿ) ಶೇಕಡ 86%, ಪ್ರವೀಣ್.ಬಿ (ಎಸ್‌ಇಬಿಎ) ಶೇಕಡ 87%, ಪ್ರೀತಮ್ ಜನಾರ್ದನ್(ಪಿಸಿಬಿಎ) ಶೇಕಡ 88%, ವೀಕ್ಷಿತ್(ಎಸ್. ಇಬಿಎ) ಶೇಕಡ 86% ಮತ್ತು ಸಿರಿ ಎಚ್.ಎಸ್(ಎಸ್.ಇಬಿಎ) ಶೇಕಡ 89.5% ಅಂಕಗಳನ್ನು ಪಡೆದು ಸೈ ಎನಿಸಿಕೊಂಡಿದ್ದಾರೆ.

ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಬಿಜಿಎಸ್ ಶಿಕ್ಷಣ ಸಂಸ್ಥೆಯ ಕೊಡುಗೆ ಅನನ್ಯವಾಗಿದೆ. ಶಿಕ್ಷಣಕ್ಕೆ ಹೇಗೆ ಹೆಚ್ಚು ಆದ್ಯತೆಯನ್ನು ನೀಡಬೇಕು? ಎನ್ನುವ ವಿಚಾರದೊಂದಿಗೆ ವಿದ್ಯಾರ್ಥಿಗಳಲ್ಲಿನ ಬಹುಮುಖ ಪ್ರತಿಭೆಗೆ ಒತ್ತನ್ನು ನೀಡಿ ಒಳ್ಳೆಯ ವೇದಿಕೆಯನ್ನು ಒದಗಿಸುತ್ತಿದೆ.

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯ ಜೊತೆಗೆ ಕಲೆ, ಸಾಂಸ್ಕೃತಿಕ ಮತ್ತು ಕ್ರೀಡಾ ವಲಯಗಳಲ್ಲೂ ಪ್ರತಿಯೊಬ್ಬರ ಆಸಕ್ತಿ, ಪ್ರತಿಭೆಗೆ ಅನುಗುಣವಾಗಿ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುತ್ತಾ ಅವರ ಸಾಧನೆಗೆ ದಾರಿದೀಪವಾಗಿ ನಿಂತಿದೆ.

ವಿಜ್ಞಾನ ವಿಭಾಗದ ವಿದ್ಯಾರ್ಥಿಗಳಿಗೆ ಬಿಜಿಎಸ್ ಪದವಿ ಪೂರ್ವ ಕಾಲೇಜು ಪದವಿ ಪೂರ್ವ ಮಂಡಳಿಯ ಪಠ್ಯಕ್ರಮದ ಜೊತೆ ಜೊತೆಗೆ ಸಿಇಟಿ ಪರೀಕ್ಷೆಗೆ ಅನುಕೂಲವಾಗುವಂತೆ ಮಕ್ಕಳಿಗೆ ಉಚಿತ ಮಾರ್ಗದರ್ಶನ ನೀಡಲಾಗುತ್ತಿದೆ. ಇನ್ನೂ ಹೆಚ್ಚಿನ ಮಾರ್ಗದರ್ಶನಕ್ಕಾಗಿ ಬಿಜಿಎಸ್ ಕಾಲೇಜು ಪ್ರತಿಷ್ಠಿತ ಕೋಚಿಂಗ್ ಸೆಂಟರ್ ಆದ ಆಲೆನ್ ಜೊತೆಗೆ ಸಹಭಾಗಿತ್ವ ಹೊಂದಿದೆ.

ಇದು ವಿದ್ಯಾರ್ಥಿಗಳ ಮುಂದಿನ ವೃತ್ತಿಪರ ಜೀವನಕ್ಕೆ ವೇದಿಕೆ ನಿರ್ಮಿಸಿ ಕೊಡುತ್ತಿದೆ. ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳಿಗೆ ಬಿಜಿಎಸ್ ಪದವಿ ಪೂರ್ವ ಕಾಲೇಜುನಲ್ಲಿ ಶೈಕ್ಷಣಿಕ ಪ್ರಗತಿಯ ಜೊತೆಗೆ ಕ್ರೀಡೆ, ಕಲೆ, ಸಾಂಸ್ಕೃತಿಕವಾಗಿಯೂ ಕೂಡ ಸಮಾನವಾದ ಅವಕಾಶಗಳನ್ನು ಕಲ್ಪಿಸುತ್ತಾ ಉತ್ತೇಜನ ನೀಡುತ್ತಿದೆ.

# ಒತ್ತುವರಿ: 24 ಮನೆಗಳಿಗೆ ತಹಸೀಲ್ದಾರ್ ನೋಟಿಸ್

ಬಂಗಾರಪೇಟೆ

ತಾಲ್ಲೂಕಿನ ಕಸಭಾ ವ್ಯಾಪ್ತಿಗೆ ಬರುವ ಕಾರಹಳ್ಳಿ ಗ್ರಾಮದ ಸರ್ಕಾರಿ ರಾಜಕಾಲುವೆ ಒತ್ತುವರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಆಡಳಿತ ಯಂತ್ರ ಗಂಭೀರ ಕ್ರಮ ಕೈಗೊಂಡಿದೆ. ಬಂಗಾರಪೇಟೆ ಕೆರೆಗೆ ಸಂಪರ್ಕ ಕಲ್ಪಿಸುವ ಸರ್ಕಾರಿ ರಾಜಕಾಲುವೆ ಪ್ರದೇಶದಲ್ಲಿ ಅಕ್ರಮ ನಿರ್ಮಾಣ ನಡೆದಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ 24 ಮಂದಿ ಮನೆ ಮಾಲೀಕರಿಗೆ ತಹಸೀಲ್ದಾರ್ ಕಚೇರಿಯಿಂದ ನೋಟಿಸ್ ಜಾರಿಯಾಗಿದೆ.

ಬಂಗಾರಪೇಟೆ ನಿವಾಸಿ ಪ್ರೇಮ್ ಕುಮಾರ್ ಶ್ರೀನಿವಾಸಗೌಡ ಅವರು ಕರ್ನಾಟಕ ಲೋಕಾಯುಕ್ತಕ್ಕೆ ಸಲ್ಲಿಸಿದ್ದ ದೂರಿನ ಮೇರೆಗೆ ಪ್ರಕರಣ ಬೆಳಕಿಗೆ ಬಂದಿದೆ. ಕಾರಹಳ್ಳಿ ಗ್ರಾಮದ ವಿವಿಧ ಸರ್ವೆ ಸಂಖ್ಯೆಗಳಲ್ಲಿರುವ ಸರ್ಕಾರಿ ರಾಜಕಾಲುವೆ ಪ್ರದೇಶವನ್ನು ಅಕ್ರಮವಾಗಿ ಆಕ್ರಮಿಸಿಕೊಂಡು ಮನೆ, ನಿವೇಶನ ಹಾಗೂ ಕಟ್ಟಡಗಳನ್ನು ನಿರ್ಮಿಸಲಾಗಿದೆ ಎಂದು ದೂರಿನಲ್ಲಿ ಆರೋಪಿಸಲಾಗಿತ್ತು.



ಈ ಕುರಿತು ಲೋಕಾಯುಕ್ತರು ಪ್ರಕರಣ ಸಂಖ್ಯೆ 6216/2025/25–2–15 ದಿನಾಂಕ 30/01/2026ರಡಿ ತನಿಖೆ ನಡೆಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮ ಕೈಗೊಂಡು ವರದಿ ಸಲ್ಲಿಸುವಂತೆ ಸೂಚಿಸಿದ್ದರು.

ಲೋಕಾಯುಕ್ತ ಆದೇಶದ ಅನ್ವಯ ತಾಲ್ಲೂಕು ಭೂಮಾಪಕರ ಕಚೇರಿ ಅಧಿಕಾರಿಗಳು 28/04/2026ರಂದು ಸ್ಥಳ ಪರಿಶೀಲನೆ ನಡೆಸಿ ಸರ್ವೆ ವರದಿ ಮತ್ತು ನಕ್ಷೆ ಸಲ್ಲಿಸಿದ್ದಾರೆ. ವರದಿಯಲ್ಲಿ ಸರ್ವೆ ನಂ. 197, 198/1ಬಿ, 188/1, 187/2ಬಿ, 187/4, 187/1, 188/3, 183/5, 184/3, 186 ಹಾಗೂ 184/10 ಸೇರಿದಂತೆ ಹಲವು ಜಾಗಗಳಲ್ಲಿ ಸರ್ಕಾರಿ ರಾಜಕಾಲುವೆ ಒತ್ತುವರಿ ನಡೆದಿರುವುದು ದೃಢಪಟ್ಟಿದೆ.

ಪರಿಶೀಲನೆಯ ವೇಳೆ ಕೆಲವರು ಸರ್ಕಾರಿ ಕಾಲುವೆ ಪ್ರದೇಶದಲ್ಲಿ ಮನೆ ಹಾಗೂ ಕಾಂಪೌಂಡ್ ನಿರ್ಮಿಸಿರುವುದು ಪತ್ತೆಯಾಗಿದ್ದು, ಸುಮಾರು 0–01ಳಿ ಗುಂಟೆವರೆಗೆ ಅಕ್ರಮ ಒತ್ತುವರಿ ದಾಖಲಾಗಿದೆ. ಇದರ ಬೆನ್ನಲ್ಲೇ ಸಂಬಂಧಪಟ್ಟ 24 ಮಂದಿಗೆ 7 ದಿನಗಳೊಳಗೆ ಸ್ವಯಂ ಪ್ರೇರಿತವಾಗಿ ಒತ್ತುವರಿ ತೆರವುಗೊಳಿಸುವಂತೆ ನೋಟಿಸ್ ನೀಡಲಾಗಿದೆ.

ನೋಟಿಸ್‌ನಲ್ಲಿ, ನಿಗದಿತ ಅವಧಿಯೊಳಗೆ ತೆರವುಗೊಳಿಸದಿದ್ದಲ್ಲಿ ಕರ್ನಾಟಕ ಭೂ ಕಂದಾಯ ಅಧಿನಿಯಮದ ಕಲಂ 192(ಎ) ಅಡಿಯಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಿಸುವುದಾಗಿ ಎಚ್ಚರಿಕೆ ನೀಡಲಾಗಿದೆ. ಜೊತೆಗೆ ಸರ್ಕಾರವೇ ತೆರವು ಕಾರ್ಯಾಚರಣೆ ನಡೆಸಿ ಅದರ ವೆಚ್ಚವನ್ನು ಕಂದಾಯ ಬಾಕಿಯಂತೆ ವಸೂಲಿ ಮಾಡಲಾಗುವುದು ಎಂದು ತಿಳಿಸಲಾಗಿದೆ.

ಈ ಕ್ರಮದಿಂದ ಒತ್ತುವರಿದಾರರಲ್ಲಿ ಆತಂಕ ಮನೆಮಾಡಿದ್ದು, ಹಲವು ಕುಟುಂಬಗಳು ನ್ಯಾಯಾಲಯದ ಮೊರೆ ಹೋಗಲು ಸಿದ್ಧತೆ ನಡೆಸಿರುವುದಾಗಿ ತಿಳಿದುಬಂದಿದೆ. ಹಲವು ವರ್ಷಗಳಿಂದ ಕಾಲುವೆ ಗಡಿ ಸ್ಪಷ್ಟವಾಗಿರದ ಹಿನ್ನೆಲೆಯಲ್ಲಿ ಮನೆ ನಿರ್ಮಾಣಗಳು ನಡೆದಿದ್ದರೂ, ಇದೀಗ ಲೋಕಾಯುಕ್ತ ತನಿಖೆಯಿಂದ ಪ್ರಕರಣ ಗಂಭೀರ ಸ್ವರೂಪ ಪಡೆದುಕೊಂಡಿದೆ.

ಸರ್ಕಾರಿ ಭೂಮಿ, ಕಾಲುವೆ ಹಾಗೂ ರಾಜಕಾಲುವೆ ಪ್ರದೇಶಗಳಲ್ಲಿ ಅಕ್ರಮ ನಿರ್ಮಾಣ ಮಾಡಬಾರದು ಎಂದು ಆಡಳಿತ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದೆ.

ಒತ್ತುವರಿ ಆರೋಪ ಎದುರಿಸುತ್ತಿರುವವರಲ್ಲಿ ಮುನಿರಾಜು, ಶಾರದಮ್ಮ, ಜಯಕುಮಾರ್, ಸುರೇಂದ್ರ ಸಿಂಗ್, ಆನಂದರಾವ್, ಕಣ್ಣಪ್ಪ, ಬಾಲು, ಶಂಕರ ಮಠ, ಮರುಗೇಶ್, ರಮೇಶ್, ರೇಖಾ, ವೆಂಕಟೇಶ್, ಫಯಾಜ್, ಕೃಷ್ಣಪ್ಪ, ಶಾಂತಮ್ಮ, ವೆಂಕಟಾಚಲ, ತಿಪ್ಪರಾಜು, ವೆಂಕಟರಮಣಪ್ಪ ಹಾಗೂ ಸಂದೀಪನಿ ಶಾಲೆ ಸೇರಿದಂತೆ ಹಲವರ ಹೆಸರುಗಳು ಸೇರಿವೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy